ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ    Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 125 ಸಂಚಿಕೆ- 125 | PAGE- 8 ಪುಟ-8 | ಬುಧವಾರ 25.06.2025 | RS.2/- ಬೆಲೆ 2/-

# ತೆರಿಗೆ ಹಂಚಿಕೆಯಲ್ಲಿ ರಾಜ್ಯಕ್ಕೆ ನಷ್ಟ:ಸಿಎಂ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.24: ದೆಹಲಿ ಪ್ರವಾಸದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿ, 16ನೇ ಹಣಕಾಸು ಆಯೋಗದಿಂದ ರಾಜ್ಯಗಳಿಗೆ ತೆರಿಗೆ ಹಂಚಿಕೆ ಕುರಿತು ಚರ್ಚಿಸಿದರು.

ಸಭೆಯಲ್ಲಿ, 15ನೇ ಹಣಕಾಸು ಆಯೋಗದ ಅವಧಿಯಲ್ಲಿ ಕರ್ನಾಟಕಕ್ಕೆ ಗಮನಾರ್ಹ ನಷ್ಟವಾಗಿರುವ ಬಗ್ಗೆ ಸಿಎಂ ಸಿದ್ದರಾಮಯ್ಯ ಅವರು ಸೀತಾರಾಮನ್ ಅವರಿಗೆ ವಿವರಿಸಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

15ನೆ ಹಣಕಾಸು ಆಯೋಗವು ತನ್ನ ಶಿಫಾರಸ್ಸಿನಲ್ಲಿ ಕರ್ನಾಟಕದ ತೆರಿಗೆ ಪಾಲನ್ನು ಶೇ.4.713 ರಿಂದ ಶೇ.3.647ಕ್ಕೆ ಇಳಿಕೆ ಮಾಡಿದ್ದರಿಂದ ರಾಜ್ಯದ ತೆರಿಗೆ ಪಾಲು 14ನೆ ಹಣಕಾಸು ಆಯೋಗಕ್ಕೆ ಹೋಲಿಸಿದರೆ, 15ನೆ ಹಣಕಾಸು ಆಯೋಗದ ಅವಧಿಯಲ್ಲಿ ಶೇ.23ರಷ್ಟು ಕಡಿಮೆಯಾಗಿದೆ ಎಂದು ಸಿಎಂ ವಿವರಿಸಿದ್ದಾರೆ.

ಕರ್ನಾಟಕಕ್ಕೆ ವಿಶೇಷ ಅನುದಾನಗಳಲ್ಲೂ 11,495 ಕೋಟಿ ರೂ. ನಿರಾಕರಿಸಲಾಗಿದೆ. ವಿಶೇಷ ಅನುದಾನವು ಸಿಗದ ಕಾರಣ, ಒಟ್ಟಾರೆಯಾಗಿ 15ನೆ ಹಣಕಾಸು ಆಯೋಗದ ಅವಧಿಯಲ್ಲಿ ಒಟ್ಟು 80 ಸಾವಿರ ಕೋಟಿ ರೂ. ರಾಜ್ಯಕ್ಕೆ ನಷ್ಟವಾಗಿದೆ. 15ನೆ ಹಣಕಾಸು ಆಯೋಗವು ರಾಜ್ಯಗಳ ನಡುವೆ ತೆರಿಗೆ ಹಂಚಿಕೆಯ ಸೂತ್ರವನ್ನು ಲೆಕ್ಕ ಮಾಡಲು ಆದಾಯ–ದೂರ ಮಾನದಂಡದ ಮೇಲೆ ಅತಿಯಾಗಿ ಅವಲಂಬಿಸಿದ ಕಾರಣ ರಾಜ್ಯಕ್ಕೆ ತೆರಿಗೆ ಹಂಚಿಕೆಯಲ್ಲಿ ನಷ್ಟವಾಯಿತು ಎಂದು ಸಿದ್ದರಾಮಯ್ಯ ಪ್ರತಿಪಾದಿಸಿದ್ದಾರೆ.

ಆದಾಯ–ದೂರ ಮಾನದಂಡವನ್ನು ಶೇಕಡಾ 20 ರಷ್ಟು ಕಡಿಮೆ ಮಾಡಿ



ಅದನ್ನು ರಾಷ್ಟ್ರೀಯ ಜಿಡಿಪಿಯಲ್ಲಿ ರಾಜ್ಯದ ಪಾಲು ಆಗಿರುವ ಹಣಕಾಸಿನ ಕೊಡುಗೆಗೆ ಮರುಹಂಚಿಕೆ ಮಾಡುವಂತೆ ಕರ್ನಾಟಕ 16ನೇ ಹಣಕಾಸು ಆಯೋಗವನ್ನು ಕೋರಿದೆ.

ಹಣಕಾಸು ಆಯೋಗವು ಶಿಫಾರಸ್ಸು ಮಾಡುವ ರಾಜಸ್ವ ಕೊರತೆ ಅನುದಾನಗಳನ್ನು ನಿಲ್ಲಿಸಲು ನಾವು ವಿನಂತಿಸಿದ್ದೇವೆ. ಏಕೆಂದರೆ, ಅವು ವಿತ್ತೀಯ ಹೊಣೆಗಾರಿಕೆ ಅಧಿನಿಯಮದ (ಎಫ್‌ಆರ್‌ಬಿಎಂ) ಚೌಕಟ್ಟಿನಲ್ಲಿ ಪ್ರಸ್ತಾಪಿಸಲಾದ ಆರ್ಥಿಕ ಶಿಸ್ತಿನ ತತ್ವಗಳಿಗೆ ವಿರುದ್ಧವಾಗಿವೆ. 15ನೆ ಹಣಕಾಸು ಆಯೋಗವು, ಒಟ್ಟು ಕೇಂದ್ರ ಸ್ವೀಕೃತಿಗಳ ಶೇ.1.92ರಷ್ಟನ್ನು ರಾಜಸ್ವ ಕೊರತೆ ಅನುದಾಗಳೆಂದು ಶಿಫಾರಸ್ಸು ಮಾಡಿತ್ತು. ಆದುದರಿಂದ, ಕೇಂದ್ರ ಸರಕಾರದ ಒಟ್ಟು ಸ್ವೀಕೃತಿಗಳ ಶೇ.1.92ರಷ್ಟು ಮೊತ್ತವನ್ನು ತೆರಿಗೆ ಹಂಚಿಕೆಯ ಸೂತ್ರದ ಆಧಾರದ ಮೇಲೆ ಎಲ್ಲ ರಾಜ್ಯಗಳಿಗೂ ಹಂಚಿಕೆ ಮಾಡಬೇಕು ಎಂದು ಸಿಎಂ ಮನವಿ ಮಾಡಿದ್ದಾರೆ. ಬೆಂಗಳೂರು, ಕಲ್ಯಾಣ ಕರ್ನಾಟಕ ಮತ್ತು ಮಲೆನಾಡು ಪ್ರದೇಶದ ಅಭಿವೃದ್ಧಿ ಸವಾಲುಗಳನ್ನು ಸಹ ಪ್ರಸ್ತಾಪಿಸಿ, ರಾಜ್ಯಗಳ ಬೆಳವಣಿಗೆಯನ್ನು ಉತ್ತೇಜಿಸಲು ನ್ಯಾಯಯುತ ಮತ್ತು ಬೆಳವಣಿಗೆಗೆ ಪೂರಕವಾಗುವ ತೆರಿಗೆ ಹಂಚಿಕೆಯ ಅವಶ್ಯಕತೆಯನ್ನು ವಿತ್ತಸಚಿವರಿಗೆ ಮನವರಿಕೆ ಮಾಡಿಕೊಟ್ಟಿದ್ದೇನೆ ಎಂದು ಸಿಎಂ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ. ಕರ್ನಾಟಕದ ಪ್ರಸ್ತಾವನೆಗಳು ವಿಶೇಷ ಪ್ರಕರಣವೆಂದು ಪರಿಗಣಿಸದೆ, ಇದು ಒಟ್ಟಾರೆ ರಾಷ್ಟ್ರೀಯ ಸಂಪನ್ಮೂಲ ಕ್ರೋಢೀಕರಣಕ್ಕಾಗಿ ಮತ್ತು ಒಕ್ಕೂಟ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಪ್ರಸ್ತಾವನೆಗಳಾಗಿವೆ ಎಂದು ಪರಿಗಣಿಸಬೇಕು. 16ನೇ ಹಣಕಾಸು ಆಯೋಗಕ್ಕೆ ಕೇಂದ್ರ ಸರ್ಕಾರ ಸಲ್ಲಿಸುವ ಜ್ಞಾಪಕ ಪತ್ರದಲ್ಲಿ ರಾಜ್ಯ ಸರ್ಕಾರದ ಈ ಪ್ರಸ್ತಾವನೆಗಳನ್ನು ಸೇರಿಸುವಂತೆ ಮನವಿ ಮಾಡಲಾಗಿದ್ದು, ಎಲ್ಲಾ ರಾಜ್ಯಗಳು ದೇಶದ ಅಭಿವೃದ್ಧಿಗೆ ಹೆಚ್ಚು ಪರಿಣಾಮಕಾರಿಯಾಗಿ ಕೊಡುಗೆ ನೀಡಲು ಬೆಳವಣಿಗೆ ಆಧಾರಿತ ತೆರಿಗೆ ಹಂಚಿಕೆ ಅವಶ್ಯಕ ಎಂಬುದನ್ನು ಕೇಂದ್ರ ಹಣಕಾಸು ಸಚಿವರಿಗೆ ತಿಳಿಸಿರುವುದಾಗಿ ಸಿಎಂ ಸಿದ್ದರಾಮಯ್ಯ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

## ಸಮಸ್ಯೆಗಳಿದ್ದರೆ ಸಿಎಂ ಬಳಿ ಚರ್ಚಿಸಲಿ: ಸಚಿವ ಪ್ರಿಯಾಂಕ್ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಜೂ.24:ಶಾಸಕರಾದ ಬಿ.ಆರ್. ಪಾಟೀಲ್ ಅವರು ಹಿರಿಯರು. ಅವರ ಹೋರಾಟ ಮನೋಭಾವ ಹಾಗೂ ಸಿದ್ಧಾಂತಗಳ ಬಗ್ಗೆ ಗೌರವವಿದೆ. ಏನಾದರೂ ಸಮಸ್ಯೆಗಳಿದ್ದರೆ ಸಿಎಂ, ಡಿಸಿಎಂ ಹಾಗೂ ಖರ್ಗೆ ಸಾಹೇಬರ ಬಳಿ ಚರ್ಚಿಸಲಿ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು. ಕಲಬುರಗಿ ಯ ಐವಾನ್ ಶಾಹಿ ಅತಿಥಿಗೃಹದಲ್ಲಿ ತಮ್ಮನ್ನು ಭೇಟಿ ಮಾಡಿದ ವರದಿಗಾರರೊಂದಿಗೆ/ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡುತ್ತಿದ್ದ ಅವರು, ಬಿ.ಆರ್.ಪಾಟೀಲ್ ಅವರ ಹೇಳಿಕೆಯಿಂದ ಸರ್ಕಾರಕ್ಕೆ ಮುಜುಗರವಾಗಿದೆಯೇ ಎಂದು ಕೇಳಲಾದ ಪ್ರಶ್ನೆಗೆ ಉತ್ತರಿಸುತ್ತಾ,

(2ನೇ ಪುಟ ನೋಡಿ)

## ವಾಸನದ, ಪಾಟೀಲ ಮನೆ ಮೇಲೆ ದಾಳಿ

ಮಲ್ಲಮ್ಮನುಡಿವಾರ್ತೆಬಾಗಲಕೋಟೆ,ಜೂ.24– ಧಾರವಾಡ ಕರ್ನಾಟಕ ನೀರಾವರಿ ನಿಗಮದ ಮಲಪ್ರಭಾ ಯೋಜನೆಯ ಎಂಜನೀಯರ್ ಅಶೋಕ ವಾಸನದ ಅವರ ನಿವಾಸ, ಕಚೇರಿ ಮೇಲೆ ಮಂಗಳವಾರ ಲೋಕಾಯುಕ್ತ ದಾಳಿ ನಡೆದಿದ್ದು, ಅವರ ಸ್ವಂತ ಗ್ರಾಮ ಜಿಲ್ಲೆಯ ಖಜ್ಜಿಡೋಣಿಯ ನಿವಾಸದ ಮೇಲೆಯೂ ದಾಳಿ ನಡೆಯಿತು. ಬೆಳ್ಳಂಬೆಳಿಗ್ಗೆ ದಾಳಿ ನಡೆಸಿದ ಲೋಕಾಯುಕ್ತರು ದಾಖಲೆಗಳನ್ನು ಪರಿಶೀಲಿಸಿದರು. ಅಶೋಕ ವಾಸನದ ಜಿಲ್ಲೆಯ ಜಮಖಂಡಿ ಹಾಗೂ ಜಕನೂರಿನಲ್ಲೂ ಮನೆ ಹೊಂದಿದ್ದಾರೆಂದು ಹೇಳಲಾಗಿದೆ. ಹಾಗೆಯೇ ಜಿಲ್ಲೆಯ ಛಬ್ಬಿ ಗ್ರಾಮದವರಾದ ಗದಗ ಸಿಪಿಐ ಡಿ.ಬಿ.ಪಾಟೀಲ ಮನೆಯ ಮೇಲೂ ಲೋಕಾಯುಕ್ತ ದಾಳಿ ನಡೆಯಿತು.

## ವಿಧಾನಸಭೆ ವಿಸರ್ಜನೆ ಮಾಡಿ ಸಿಎಂಗೆ ಯತ್ನಾಳ್ ಸಲಹೆ



ಮಲ್ಲಮ್ಮ ನುಡಿ ವಾರ್ತೆ ವಿಜಯಪುರ:ಜೂ.24: ಸಿದ್ದರಾಮಯ್ಯನವರೇ ನಿಮಗೆ ನಿಭಾಯಿಸಲು ಸಾಧ್ಯವಾಗದಿದ್ದರೆ, ವಿಧಾನಸಭೆ ವಿಸರ್ಜನೆ ಮಾಡಿ. ತಪ್ಪಿಯೂ ಕರ್ನಾಟಕವನ್ನ ಡಿಕೆಶಿ ಕೈಗೆ ಕೊಡಬೇಡಿ. ಮಾರಿಕೊಂಡು ಹೋಗ್ತಾರೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್‌ನಲ್ಲಿ ಎಲ್ಲ

(2ನೇ ಪುಟ ನೋಡಿ)

## ಮಾದಕ ದ್ರವ್ಯ ಸೇವನೆ ಮುಕ್ತ ಜಿಲ್ಲೆಯಾಗಲೂ ಎಲ್ಲರೂ ಕೈಜೋಡಿಸಿ:ಎಸ್‌ಪಿ ಪ್ರದೀಪ ಗುಂಟಿ




ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 24 : ಬೀದರ ಜಿಲ್ಲೆಯನ್ನು ಮಾದಕ ದ್ರವ್ಯ ಸೇವನೆ ಮುಕ್ತ ಜಿಲ್ಲೆಯಾಗಲು ಎಲ್ಲರೂ ಕೈಜೋಡಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಅವರು ತಿಳಿಸಿದರು.

ಅವರು ಮಂಗಳವಾರ ಬೀದರ ಪೊಲೀಸ್ ಉಪವಿಭಾಗದ ವತಿಯಿಂದ ಕರ್ನಾಟಕ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಾದಕ ದ್ರವ್ಯ ಸೇವನೆ ಮತ್ತು ಸಾಗಾಣಿಕೆ ವಿರೋಧಿ ದಿನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಾದಕ ದ್ರವ್ಯ ಸೇವನೆಯಿಂದ ವ್ಯಕ್ತಿಯ ದೈಹಿಕ ಮತ್ತು ಮಾನಸಿಕ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ ಇದರಿಂದಾಗಿ ವ್ಯಕ್ತಿ ತಾನು ಏನು ಮಾಡುತ್ತಿದ್ದಾನೆ ಎಂಬುವುದರ ಅರಿವು ಕೂಡ ಇರುವುದಿಲ್ಲ ಇಂತಹ ನಶೆಯಲ್ಲಿ ಇರುವರು ಕಳ್ಳತನ, ಕೊಲೆ, ದ–ರೋಡೆ, ಲೈಂಗಿಕ ಕಿರುಕುಳ ಅಂತಹ ಅಪರಾಧ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವರು ಆದ್ದರಿಂದ ಕೆಟ್ಟ ನಶೆಗಳಿಂದ ದೂರ ಸರಿದು ಉತ್ತಮ ಜೀವನ ಕಟ್ಟಿಕೊಳ್ಳಬೇಕು ಎಂದರು.

ನಶೆಯ ಜಗತ್ತನ್ನು ಬಿಟ್ಟು ಒಬ್ಬ ಉತ್ತಮ ನಾಗರಿಕರನ್ನಾಗಿ ಬಾಳಬೇಕು ಮತ್ತು ನಿಮ್ಮ ಮಕ್ಕಳಿಗೆ ಉತ್ತಮವಾದ ಶಿಕ್ಷಣವನ್ನು ನೀಡಿ

(2ನೇ ಪುಟ ನೋಡಿ)

## ರಾಜ್ಯದ 7 ಪ್ರಮುಖ ಮಸೂದೆಗಳಿಗೆ ರಾಷ್ಟ್ರಪತಿಗಳ ಅಂಗೀಕಾರ ಕೋರಿದ ಸಿಎಂ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.24: ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿ ರಾಜ್ಯ ಶಾಸಕಾಂಗವು ಅಂಗೀಕರಿಸಿದ ಏಳು ಪ್ರಮುಖ ಮಸೂದೆಗಳಿಗೆ ಅನುಮೋದನೆ ನೀಡುವಂತೆ ಕೋರಿದರು.

ರಾಷ್ಟ್ರಪತಿಗಳ ಮುಂದೆ ಮಂಡಿಸಲಾದ ಪ್ರಮುಖ ಮಸೂದೆಗಳಲ್ಲಿ ಉಚಿತ ಮತ್ತು ಕಡ್ಡಾಯ ಶಿಕ್ಷಣದ ಮಕ್ಕಳ ಹಕ್ಕು (ಕರ್ನಾಟಕ ತಿದ್ದುಪಡಿ) ಮಸೂದೆ, 2015 ಸೇರಿದ್ದು, ಇದು ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಆರ್‌ಟಿಇ ಚೌಕಟ್ಟನ್ನು ಮಾರ್ಪಡಿಸಲು ಪ್ರಯತ್ನಿಸುತ್ತದೆ.

ಕರ್ನಾಟಕ (ಖನಿಜ ಹಕ್ಕುಗಳು ಮತ್ತು ಖನಿಜ ಹೊಂದಿರುವ ಭೂಮಿ) ತೆರಿಗೆ ಮಸೂದೆ, 2024 ತನ್ನ ಖನಿಜ ಸಂಪನ್ಮೂಲಗಳಿಂದ ರಾಜ್ಯದ ಆದಾಯವನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಸರ್ಕಾರಿ ಗುತ್ತಿಗೆಗಳಲ್ಲಿ ಮುಸ್ಲಿಮರಿಗೆ ಶೇ 4ರಷ್ಟು ಮೀಸಲಾತಿಗೆ ಅವಕಾಶ ಕಲ್ಪಿಸುವ ಉದ್ದೇಶದಿಂದ ರೂಪಿಸಲಾಗಿರುವ 'ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ಕೆಟಿಪಿಪಿ) ತಿದ್ದುಪಡಿ ಕಾಯ್ದೆ 2025 ಮಸೂದೆಗೆ ಅನುಮೋದನೆ ಕೇಳಲಾಗಿದೆ. ಆಡಳಿತ ಪ್ರಕ್ರಿಯೆಗಳನ್ನು ಸುಗಮಗೊಳಿಸುವತ್ತ ಗಮನಹರಿಸುವ ನೋಂದಣಿ

(ಕರ್ನಾಟಕ ತಿದ್ದುಪಡಿ) ಮಸೂದೆ, 2025 ಮತ್ತು ಅದರ ಪ್ರತಿರೂಪವಾದ ನೋಟರಿಗಳು (ಕರ್ನಾಟಕ ತಿದ್ದುಪಡಿ) ಮಸೂದೆ, 2025 ಸಹ ಸೇರಿವೆ.

ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ತಿದ್ದುಪಡಿ ಮಸೂದೆ, 2024ಕ್ಕೆ ಕೂಡ ರಾಷ್ಟ್ರಪತಿಗಳ ಅನುಮೋದನೆ ಬೇಕಿದೆ. ಈ ಮಸೂದೆಗಳು

ರಾಜ್ಯದಲ್ಲಿ ಜಾರಿಗೆ ಬರುವ ಮೊದಲು ಕೇಂದ್ರ ಸರ್ಕಾರದ ಅನುಮೋದನೆಯನ್ನು ಕಡ್ಡಾಯಗೊಳಿಸುವ ನಿಬಂಧನೆಗಳ ಅಡಿಯಲ್ಲಿ ಬರುವುದರಿಂದ ರಾಷ್ಟ್ರಪತಿಗಳ ಒಪ್ಪಿಗೆ ಅಗತ್ಯವಿರುತ್ತದೆ.

## ಸರ್ಕಾರ, ನಮ್ಮ ಮಧ್ಯದ್ದು ಗಂಡ-ಹೆಂಡತಿ ಜಗಳವಿದ್ದಂತೆ: ಬಿ.ಆರ್ ಪಾಟೀಲ್

ಮಲ್ಲಮ್ಮನುಡಿವಾರ್ತೆ ವಿಜಯನಗರ/ಕೊಪ್ಪಳ:ಜೂ.24: ಸರ್ಕಾರ, ನಮ್ಮ ನಡುವಿನದ್ದು ಗಂಡ–ಹೆಂಡತಿ ಜಗಳವಿದ್ದ ಹಾಗೆ, ನಾಳೆ ಸಿಎಂ ಅವರನ್ನು ಭೇಟಿ ಮಾಡುತ್ತೇನೆ. ಆದರೆ ವಸತಿ ನಿಗಮದ ಅಕ್ರಮದ ಬಗ್ಗೆ ರಾಜ್ಯದ ಮೂಲೆ, ಮೂಲೆಗಳಿಂದ ದೂರುಗಳು ಬರುತ್ತಿವೆ ಎಂದು ಕಾಂಗ್ರೆಸ್ ಹಿರಿಯ ಶಾಸಕ ಬಿ.ಆರ್ ಪಾಟೀಲ್ ಹೇಳಿದರು. ಹೊಸಪೇಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ವಿವಿಧ ಜಿಲ್ಲೆಗಳಿಂದ ಜನರು ಕರೆ ಮಾಡಿ ದೂರು ನೀಡುತ್ತಿದ್ದಾರೆ. ಹಂಪಿ ವಿವಿಗೆ ಬಂದಿದ್ದ ವೇಳೆಯೂ ವಸತಿ ನಿಗಮದ ಅಕ್ರಮದ ಕುರಿತು ಫೋನ್‌ನಲ್ಲಿ ಮಾತನಾಡುತ್ತಿದ್ದರು. ದೇವರಹಿಪ್ಪರಗಿ ವಿಧಾನಸಭಾ ಕ್ಷೇತ್ರದ ತುರಗಾನೂರು ಗ್ರಾಮದಿಂದ ಬಸನಗೌಡ ಪಾಟೀಲ್ ಎನ್ನುವ ವ್ಯಕ್ತಿ ಫೋನ್ ಮಾಡಿದ್ದರು. ಅಂಬೇಡ್ಕರ್ ವಸತಿ ನಿಗಮದ ಮನೆಗೆ 20 ಸಾವಿರ ರೂ. ಕೇಳುತ್ತಿದ್ದಾರೆ.



ಬಸವ ವಸತಿ ಯೋಜನೆಯ ಮನೆಗೆ 15 ಸಾವಿರ ರೂ. ಕೇಳುತ್ತಿದ್ದಾರೆ ಎಂದು ಸಮಸ್ಯೆ ಹೇಳಿಕೊಂಡರು. ಬಹಳಷ್ಟು ಜನ ಫೋನ್ ಮಾಡುತ್ತಾರೆ, ನನಗೆ ಫೋನ್ ರಿಸೀವ್ ಮಾಡಿ ಸಾಕಾಗಿದೆ ಎಂದರು.

ಸರ್ಕಾರ ನಮ್ಮ ನಡುವಿನದ್ದು, ಗಂಡ ಹೆಂಡತಿ ಜಗಳ ಇದ್ದ ಹಾಗೇ. ನಾಳೆ ಸಿಎಂ, ಡಿಸಿಎಂ ನನ್ನನ್ನು ಕರೆಸಿದ್ದಾರೆ. ಭೇಟಿಗೆ ಹೋಗುತ್ತೇನೆ, ನನ್ನ ಬೇಡಿಕೆಗಳು ಏನಿಲ್ಲ. ಮಾಧ್ಯಮಗಳ ಮುಂದೆ ಹೇಳಿದ್ದನ್ನೇ ಸಿಎಂ ಮುಂದೆ ಹೇಳುತ್ತೇನೆ ಎಂದರು. ಇದೇ ವೇಳೆ ಭ್ರಷ್ಟಾಚಾರದಲ್ಲಿ ನನ್ನ ಕೈವಾಡ ಇದ್ರೆ ನೂರಕ್ಕೆ ನೂರರಷ್ಟು ರಾಜೀನಾಮೆ ನೀಡುತ್ತೇನೆ ಎಂಬ ಜಮೀರ್ ಅಹ್ಮದ್ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಜಮೀರ್ ಏನು ಹೇಳಿದ್ದಾರೋ ನನಗೆ ಗೊತ್ತಿಲ್ಲ. ಏನು ಹೇಳಿದ್ದಾರೆ ಎನ್ನುವುದನ್ನು ತಿಳಿದುಕೊಂಡು ಪ್ರತಿಕ್ರಿಯೆ ನೀಡುತ್ತೇನೆ. ಈ ಬಗ್ಗೆ ಜಮೀರ್ ಅವರು ನನ್ನ ಜೊತೆ ಮಾತನಾಡಿಲ್ಲ. ಯಾವ ಪಂಚಾಯತಿಯಲ್ಲಿ ಅವ್ಯವಹಾರ ಆಗಿದೆ ಎಂದು ಡಿಟೇಲ್ ಆಗಿ ಹೇಳಿದ್ದೇನೆ. ನಾನು ಕೇಳಿದ್ದು ಎರಡು ಸಾವಿರ ಮನೆ ಅಲ್ಲ, ಆರು ಸಾವಿರ ಮನೆ ಕೇಳಿದ್ದೇನೆ. ಮಾಗಡಿ ಶಾಸಕ ಬಾಲಕೃಷ್ಣ ಡಿಕೆ ಬ್ರದರ್ಸ್ ಆಶೀರ್ವಾದದಿಂದ ನನಗೆ ಅನುದಾನ ಸಿಗ್ತಿದೆ ಎಂದು ಹೇಳಿದ್ದಾರೆ. ನನಗೆ ಯಾರ ಆಶೀರ್ವಾದವೂ ಇಲ್ಲ, ಕೃಪಾಕಟಾಕ್ಷವೂ ಇಲ್ಲ. ಬಾಲಕೃಷ್ಣ ಅವರ ಕೇಸ್ ಬೇರೆ, ನನ್ನ ಕೇಸ್ ಬೇರೆ ಎಂದು ಹೇಳಿದರು.



ಕಲಬುರಗಿ: ನೂತನವಾಗಿ ಕೆ.ಎಂ.ಎಫ್.ಜ್ಯೂನ್– 1 ಕಮೀಷನ್ ರೆಂದು ಮಹಾನಗರ ಪಾಲಿಕೆಯ ಅಧಿಕಾರ ವಹಿಸಿಕೊಂಡ ದಕ್ಷ ಆಡಳಿತಾಧಿಕಾರಿ ಎಂದೇ ಹೆಸರಾದ ಗೌತಮ ಕಾಂಬಳೆಯ ವರನ್ನು ಅವರ ಅಣದೂರಿನ ಪೂಜ್ಯ ವರಜ್ಯೋತಿ ಭಂತೇಜಿಯವರು,ಜಿಲ್ಲಾ ಸಿರಿಗನ್ನಡ. ವೇದಿಕೆ ಅಧ್ಯಕ್ಷ ಸಾಹಿತಿ,ಡಾ.ಗವಿಸಿದ್ಧಪ್ಪ ಪಾಟೀಲ, ಹಿರಿಯ ಸಾಹಿತಿ ಡಾ.ಕೆ. ಎಸ್‌ಬಂಧು,ಭೀಮಾಶಂಕರ ಮತ್ತೂರು, ಲೇಖಕ ಡಾ.ರಾಜಕುಮಾರ ಮಾಳಗೆಯವರು ಸನ್ಮಾನಿಸಿದರು.

ಒಂದನೇ ಪುಟದಿಂದ

## ಚರ್ಚಿಸಲಿ: ಸಚಿವ ಪ್ರಿಯಾಂಕ್ ಖರ್ಗೆ

ಅವರು ಹಿರಿಯರು ಏನಾದರೂ ಸಮಸ್ಯೆ ಇದ್ದರೆ ಸೂಕ್ತವಾದ ವೇದಿಕೆಯಲ್ಲಿ ಹಿರಿಯರೊಂದಿಗೆ ಚರ್ಚಿಸಬೇಕಿತ್ತು. ಹೀಗೆ ಬಹಿರಂಗವಾಗಿ ಹೇಳುವುದರಿಂದ ಸರ್ಕಾರಕ್ಕೆ ಮುಜುಗರವಾಗತ್ತದೆ ಎಂದರು.

"ಫೋನ್ ನಲ್ಲಿ ನಡೆದ ಸಂಭಾಷಣೆಯಲ್ಲಿ ಅಧಿಕಾರಿ ಸ್ಪಷ್ಟವಾಗಿ ಪಾಟೀಲ್ ಅವರ ಆರೋಪಗಳನ್ನು ಅಲ್ಲಗಳೆದು ಅಂತಹ ಯಾವುದಾದರೂ ಲೋಪ ಆಗಿದ್ದಕ್ಕೆ ಆಧಾರ ಕೊಟ್ಟರೆ ಕಾನೂನು ಕ್ರಮ ಜರುಗಿಸುವುದಾಗಿ ಹೇಳಿದ್ದಾರೆ. ಅದನ್ನು ಹಿರಿಯರಾದ ಪಾಟೀಲರು ಸಿಎಂ ಅವರ ಬಳಿ ಚರ್ಚಿಸಬೇಕಿತ್ತು. ಈಗ ಸಿಎಂ ಅವರನ್ನು ಕರೆದಿದ್ದಾರೆ ಅಲ್ಲಿ ಏನು ಚರ್ಚೆ ನಡೆಯುತ್ತದೆಯೋ ನೋಡೋಣ" ಎಂದರು.

ಜಯದೇವ ಆಸ್ಪತ್ರೆಯಲ್ಲಿ ಚಿತ್ತಾಪುರ ಹಾಗೂ ಸೇಡಂ ತಾಲೂಕಿನವರೇ ತುಂಬಿಕೊಂಡಿದ್ದಾರೆ ಎಂದು ಬಿ.ಆರ್ ಪಾಟೀಲ್ ಆರೋಪಿಸಿದ್ದಾರಲ್ಲ ಎಂದು ಕೇಳಿದಾಗ ಯೋಜನೆಗಳನ್ನು ತಂದಾಗ ಆಯಾ ಶಾಸಕರ ಕ್ಷೇತ್ರದ ಜನರು ಉದ್ಯೋಗ ನಿರೀಕ್ಷಿಸುವುದು ಸಹಜ ಎಂದರು.

ರಾಜ್ಯದಲ್ಲಿ ಅಭಿವೃದ್ದಿ ಕುಂಠಿತಗೊಂಡಿದೆ ಎನ್ನುವ ಮಾತನ್ನು ಅಲ್ಲಗಳೆದ ಸಚಿವರು, ಗ್ಯಾರಂಟಿ ಯೋಜನೆಗಳಿಗೆ ರೂ 50,000 ಕೋಟಿ ಖರ್ಚು ಮಾಡಲಾಗಿದೆ. ಇದರಿಂದಾಗಿ ಜನರ ಆರ್ಥಿಕ ಸ್ಥಿರತೆ ಉಂಟಾಗಿದೆ. ಕೇಂದ್ರ ಸರ್ಕಾರದ ನೀತಿಗಳಿಂದಾಗಿ ಸಮಸ್ಯೆ ಎದುರಿಸುತ್ತಿದ್ದ ಜನರಿಗೆ ಇದರಿಂದ ಅನುಕೂಲವಾಗಿದೆ ಎಂದರು.

ಶಾಸಕ ರಾಜುಕಾಗೆ ಅವರ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಪ್ರಿಯಾಂಕ್ ಖರ್ಗೆ ರಾಜ್ಯದ ಪ್ರತಿಯೊಬ್ಬ ಶಾಸಕರು ಹೆಚ್ಚಿನ ಅನುದಾನ ಕ್ಷೇತ್ರಕ್ಕೆ ನಿರೀಕ್ಷೆ ಮಾಡುತ್ತಾರೆ ಅದರಲ್ಲಿ ತಪ್ಪೇನಿದೆ? ಎಂದು ಕೇಳಿ, ಶಾಸಕ ಬೇಳೂರು ಗೋಪಾಲಕೃಷ್ಣ ಅವರು ವಸತಿಯೋಜನೆಯ ಬಗ್ಗೆ ಆರೋಪ ಕೇಳಿ ಬಂದಾಗ ವಸತಿ ಸಚಿವರ ರಾಜೀನಾಮೆ ಬಗ್ಗೆ ಮಾತನಾಡಿರಬಹುದು ಎಂದರು.

ಕೇಂದ್ರಸರ್ಕಾರ ರಾಜ್ಯಕ್ಕೆ ಅನುದಾನ ಬಿಡುಗಡೆ ಮಾಡುವಲ್ಲಿ ತೋರಿಸುತ್ತಿರುವ ಅಸಡ್ಡೆಯಿಂದಾಗಿ ಸಮಸ್ಯೆಯಾಗಿದೆ ಎಂದು ಅಸಮಧಾನ ವ್ಯಕ್ತಪಡಿಸಿದ ಪ್ರಿಯಾಂಕ್, 15 ನೆಯ ಹಣಕಾಸು ಆಯೋಗದಿಂದ ರಾಜ್ಯಕ್ಕೆ ಬರಬೇಕಾದ ಅನುದಾನದ ಪಾಲಿನಲ್ಲಿ ರೂ 50,000 ಕೋಟಿ ಬಂದಿಲ್ಲ. ಇದು ಹಣಕಾಸಿನ ಸಮಸ್ಯೆಗೆ ಕಾರಣವಾಗಿದೆ ಎಂದರು ಆರೋಪಿಸಿದರು.

ಜಲಜೀವನ್ ಮಿಷನ್ ಅಡಿಯಲ್ಲಿ ಅಭಿವೃದ್ದಿ ಕೈಗೊಳ್ಳಲು ಕೇಂದ್ರ ರೂ 2,700 ಕೋಟಿ ಬಿಡುಗಡೆ ಮಾಡಬೇಕಿತ್ತು, ಆದರೆ ರೂ 500 ಕೋಟಿ ಬಿಡುಗಡೆ ಮಾಡಿದೆ. ನಾವು ಕೆಲಸ ಅರ್ಧಕ್ಕೆ ನಿಲ್ಲಿಸಬಾರದು ಎಂದು ರಾಜ್ಯದಿಂದ ಅನುದಾನ ಬಿಡುಗಡೆ ಮಾಡಿ ಕೆಲಸ ಮುಂದುವರೆಸಿದ್ದೇವೆ. ಜೊತೆಗೆ ರಾಜ್ಯ ಸರ್ಕಾರದಿಂದ ಗ್ರಾಮೀಣ ಭಾಗದ ರಸ್ತೆಗಳ ಸುಧಾರಣೆಗಾಗಿ ರೂ 5,000 ಕೋಟಿ ಅನುದಾನ ಬಳಸಿ ಪ್ರಗತಿ ಪಥ ಹಾಗೂ ಕಲ್ಯಾಣ ಪಥ ಯೋಜನೆ ಜಾರಿಗೆ ಮಾಡುತ್ತಿದ್ದೇವೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸುತ್ತಾ ಹೇಳಿದರು.

ಉದ್ದೇಶಿತ ಅಮೇರಿಕಾ ಪ್ರವಾಸಕ್ಕೆ ಕೇಂದ್ರ ಅನುಮತಿ ನಿರಾಕರಿಸಿದ್ದಕ್ಕೆ ರಾಜಕೀಯ ಕಾರಣವೇ ಎಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ರಾಜಕೀಯವಲ್ಲದೇ ಮತ್ತೇನು.? ಕೇಂದ್ರಸರ್ಕಾರದ ಅನುಮತಿ ನಿರಾಕರಣೆಯಿಂದಾಗಿ ರಾಜ್ಯಕ್ಕೆ ಬರಬೇಕಿದ್ದ ನಿರೀಕ್ಷಿತ ರೂ 15,000 ಕೋಟಿ ಬಂಡವಾಳ ನಿಂತುಹೋಗಿದ್ದು ಜೊತೆಗೆ ಕನಿಷ್ಠ ಮೂರು ಸಾವಿರ ಜನರಿಗೆ ಉದ್ಯೋಗ ಕೈತಪ್ಪಿದೆ. ಈ ಹಿಂದೆ ತಾವು ಹಾಗೂ ಸಚಿವ ಎಂ.ಬಿ.ಪಾಟೀಲ್ ಅಮೇರಿಕಾ ಪ್ರವಾಸ ಕೈಗೊಂಡಿದ್ದರಿಂದ ರೂ 32,000 ಕೋಟಿ ಬಂಡವಾಳ ಹೂಡಿಕೆಯ ಒಪ್ಪಂದವಾಗಿದ್ದು, ಸುಮಾರು ರೂ 21,000 ಕೋಟಿಗೂ ಅಧಿಕ ಬಂಡವಾಳ ಹೂಡಲಾಗಿತ್ತು ಇದರಿಂದ 18,000 ರಿಂದ 20,000 ಜನರಿಗೆ ಉದ್ಯೋಗ ದೊರಕಿತ್ತು ಎಂದು ನೆನಪಿಸಿಕೊಂಡರು.

ಕೇಂದ್ರ ವಿದೇಶಾಂಗ ಸಚಿವರಿಗೆ ಅನುಮತಿ ನಿರಾಕರಣೆಗೆ ವಿವರಣೆ ನೀಡುವಂತೆ ಪತ್ರ ಬರೆಯಲಾಗಿದೆ ಅವರಿಂದ ಇನ್ನೂ ಉತ್ತರ ಬಂದಿಲ್ಲ. ಅವರು ನಮ್ಮ ಯಾವ ಪತ್ರಕ್ಕೆ ಉತ್ತರ ಕೊಟ್ಟಿದ್ದಾರೆ? ಕೇಂದ್ರದಲ್ಲಿರುವುದು ಎನ್ ಡಿ ಎ ಸರ್ಕಾರವಲ್ಲ ನೋ ಡಾಟಾ ಅವಲೇಬಲ್ ಸರ್ಕಾರ ಎಂದು ಟೀಕಿಸಿದರು. ಈಗ ಅಮೇರಿಕಾ ಹೋಗಬಹುದೇ ಎಂದು ಕೇಳಲಾದ ಪ್ರಶ್ನೆಗೆ 'ಟ್ರೇನ್ ಹೋದ ಮೇಲೆ ಟಿಕೇಟ್ ತಗೊಂಡು ಪ್ರಯೋಜನವೇನು?' ಎಂದು ಸೂಚ್ಯವಾಗಿ ಹೇಳಿ, ಶರತ್ ಬಚ್ಚೇಗೌಡ ಅವರು ಅಮೇರಿಕಾದಿಂದ ವಾಪಸ್ ಬಂದ ಮೇಲೆ ಚರ್ಚಿಸಲಾಗುವುದು ಎಂದರು.

ರಾಜ್ಯಕ್ಕೆ ಬರಬೇಕಾಗಿದ್ದ ಬಂಡವಾಳವನ್ನು ಕೇಂದ್ರ ಸರ್ಕಾರ ಮಹಾರಾಷ್ಟ್ರ, ಗುಜರಾತ್, ಆಸಾಂ ರಾಜ್ಯಗಳಿಗೆ ಬಿಡುಗಡೆ ಮಾಡಿದೆ. ಆಸಾಂ ನಲ್ಲಿ ಸೆಮಿಕಂಡಕ್ಟರ್ ಸ್ಥಾಪನೆ ಮಾಡುತ್ತಿದ್ದಾರೆ. ಇಲ್ಲಿ ನಾವು ಕಷ್ಟಪಡಬೇಕು ಅಲ್ಲಿ ಸಬ್ಸಿಡಿ ಎಂದು ಬಂಡವಾಳ ಬಿಡುಗಡೆ ಮಾಡಲಾಗುತ್ತದೆ. ಅವರು ಕಷ್ಟಪಟ್ಟು ಬಂಡವಾಳ ಆಕರ್ಷಿಸಲಿ ಎಂದು ಪ್ರಿಯಾಂಕ್ ಹೇಳಿದರು.

ಬಿಜೆಪಿ ನಾಯಕರು ಸಚಿವ ಜಮೀರ್ ಅಹಮದ್ ಖಾನ್ ಅವರ ರಾಜೀನಾಮೆ ಒತ್ತಾಯಿಸಿದ್ದಾರೆ ಎಂದು ಪ್ರಶ್ನಿಸಿದಾಗ ಮೊದಲು ಬಿಜೆಪಿ ರಾಜ್ಯಾಧ್ಯಕ್ಷರ ರಾಜೀನಾಮೆಗೆ ಅವರದೇ ಪಕ್ಷದ ಕೆಲವರು ಒತ್ತಾಯಿಸುತ್ತಿದ್ದಾರಲ್ಲ ಎಂದು ತಿರುಗೇಟು ನೀಡಿದರು.

ರಾಜ್ಯದ ಸಚಿವರಿಂದ ಬಿಹಾರ್ ಚುನಾವಣೆಗೆ ಹಣ ಸಂಗ್ರಹಿಸಲು ಹೇಳಲಾಗಿದೆ ಎಂದು ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಹೇಳಿದ್ದಾರಲ್ಲ ಎಂದು ಕೇಳಲಾದ ಪ್ರಶ್ನೆ ಗೆ ಉತ್ತರಿಸಿದ ಅವರು, ಬಿಜೆಪಿ ರಾಜ್ಯದಲ್ಲಿಯೂ ಅಧಿಕಾರದಲ್ಲಿತ್ತಲ್ಲ, ಆಗ ಅವರೂ ಹೀಗೆ ಮಾಡಿದ್ದರ? ಎಂದು ತಿರುಗೇಟು ನೀಡಿದರು.

ಶಾಸಕರಾದ ಅಲ್ಲಮಪ್ರಭು ಪಾಟೀಲ್, ತಿಪ್ಪಣ್ಣಪ್ಪ ಕಮಕನೂರು, ಜಗದೇವ ಗುತ್ತೇದಾರ ಇದ್ದರು.

## ಎಲ್ಲರೂ ಕೈಜೋಡಿಸಿ:ಎಸ್‌ಪಿ ಪ್ರದೀಪ ಗುಂಟಿ

ಅವರನ್ನು ಉನ್ನತವಾದ ಹುದ್ದೆಗಳನ್ನು ಅಲಂಕರಿಸುವಂತೆ ಮಾಡಬೇಕು. ಪೋಲಿಸ್ ಇಲಾಖೆ ಯಾವಾಗಲೂ ನಿಮ್ಮ ಸೇವೆಯಲ್ಲಿ ಇರುವುದು ಮತ್ತು ಎಲ್ಲರಿಗೂ ರಕ್ಷಣೆ ನೀಡುವುದು ನಮ್ಮ ಕರ್ತವ್ಯ ಎಂದರು.

ಬೀದರ ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್ ಮಾತನಾಡಿ, ನಾವು ನಮ್ಮ ಮಕ್ಕಳ ಬಗ್ಗೆ ಭವಿಷ್ಯದ ಯೋಚಿಸಬೇಕು ಮತ್ತು ಅವರು ಯಾವುದೇ ಮಾದಕ ದ್ರವ್ಯ ಸೇವನೆಗೆ ವ್ಯಾಸನರಾಗದಂತೆ ನೋಡಿಕೊಳ್ಳಬೇಕು ಎಂದರು. ಇವತ್ತು ನಮ್ಮ ಸಂವಿಧಾನ ನಮಗೆ ಮೂಲಭೂತ ಹಕ್ಕುಗಳನ್ನು ನೀಡಿದೆ ಅದರಲ್ಲಿ ಶಿಕ್ಷಣ ಮತ್ತು ಜೀವಿಸುವ ಹಕ್ಕು ಕೂಡ ಇದೆ ಆದ್ದರಿಂದ ನಾವು ಒಂದು ಸಮಾಜದಲ್ಲಿ ಬದುಕುವ ಎಲ್ಲಾ ಪ್ರಯತ್ನಗಳು ಮಾಡಬೇಕು. ನಶೆಯ ಜಗತ್ತಿನಿಂದ ಹೊರಬಂದು ಸ್ವಯಂ ಉದ್ಯೋಗ ಮಾಡಿವವರಿಗೆ ಬ್ಯಾಂಕ್‌ಗಳಿಂದ ಸಾಲ ಸೌಲಭ್ಯ ಒದಗಿಸಲು ಬ್ಯಾಂಕ್ ಅಧಿಕಾರಿಗಳಿಗೆ ಮಾತನಾಡುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಡಿ.ವಾಯ್.ಎಸ್.ಪಿ. ಶಿವನಗೌಡ ಪಾಟೀಲ, ಎಸ್.ಬಿ.ಐ ನ ಪ್ರಾದೇಶಿಕ ವ್ಯವಸ್ಥಾಪಕ ಜೈ ಕುಮಾರ್, ಹೆಚ್ಚುವರಿ ಡ್ರಗ್ಸ್ ಕಂಟ್ರೋಲರ್ ಧನಂಜಯ, ಮನೋರೋಗ ತಜ್ಞ ರಾಘವೇಂದ್ರ ವಾಗ್ಮರೆ, ರೈಲ್ವೆ ಪೋಲಿಸ್ ಠಾಣೆ ಅಧಿಕಾರಿ ಪಾಷಾ, ಎಎಸ್‌ಐಆರ್‌ಪಿಎಫ್ ಸಿ.ಎಚ್. ಶ್ರೀನಿವಾಸ, ವಕೀಲರು ಮತ್ತು ಮಾಂಗರವಾಡಿ ಸಂಘದ ರಾಜ್ಯಾಧ್ಯಕ್ಷ ಅನೀಲ ಕೂಮಾರ ಕಾಂಬ್ಳೆ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಿಎಂಗೆ ಯತ್ನಾಳ್ ಸಲಹೆ

ಶಾಸಕರು ರೊಚ್ಚಿಗೆದ್ದಿದ್ದಾರೆ. ಸದ್ಯ ರಾಜ್ಯದ ಮಂತ್ರಿಗಳು ಲೂಟಿಗೆ ಇಳಿದಿದ್ದಾರೆ. ಸಿಎಂ ಡೀಲಿಂಗ್‌ನ್ನು ಅವರ ಮಗ ಮಾಡ್ತಿದ್ದಾನೆ, ಬೈರತಿ ಸುರೇಶ್ ಅವರು ಡೀಲಿಂಗ್ ಮಾಡುತ್ತಾರೆ. ಡಿಕೆಶಿ ಇಬ್ಬರು ಅಣ್ಣ, ತಮ್ಮ ಸೇರಿಕೊಂಡು ಲೂಟಿ ಮಾಡುತ್ತಿದ್ದಾರೆ. ಸರ್ಕಾರ ಯಾವಾಗ ಹೋಗುತ್ತೆ ಗೊತ್ತಿಲ್ಲ, ಅಷ್ಟರಲ್ಲಿ ನಾವು ಹಣ ಮಾಡಿಕೊಂಡು ಪಾರಾಗಬೇಕು ಎಂದು ಎಲ್ಲ ಮಂತ್ರಿಗಳಿಗೂ ಲೂಟಿ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಇನ್ನು ಗ್ಯಾರಂಟಿಗಳ ಬಗ್ಗೆ ಗೃಹ ಸಚಿವ ಜಿ.ಪರಮೇಶ್ವರ್ ಬಾದಾಮಿಯಲ್ಲಿ, ನಾವು ಬಾದಾಮಿಯ ಸಂಪೂರ್ಣ ಅಭಿವೃದ್ದಿಗಾಗಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದೇವೆ. ಯಾಕೆಂದರೆ ನಮ್ಮ ಹತ್ತಿರ ದುಡ್ಡಿಲ್ಲ, ಅದಕ್ಕೆ ನರೇಂದ್ರ ಮೋದಿ ಅವರು ಕೊಡಬೇಕು ಎಂದಿದ್ದಾರೆ. ಕಾಂಗ್ರೆಸ್‌ನವರು ಗ್ಯಾರಂಟಿ ಹೆಸರಲ್ಲಿ ಪುಕ್ಕಟೆ ಹಂಚುತ್ತಾ ಹೋಗುತ್ತಾರೆ. ಗ್ಯಾರಂಟಿ ಒಂದು ನೆಪ ಅಷ್ಟೇ, ಇವರು ಲೂಟಿ ಮಾಡುತ್ತಿದ್ದಾರೆ. ಬಡವರಿಗೆ ಅಷ್ಟು ಕೊಟ್ಟಿದ್ದೇವೆ, ಇಷ್ಟು ಕೊಟ್ಟಿದ್ದೇವೆ ಎಂದು ಹೇಳುತ್ತಾರೆ. ಗ್ಯಾರಂಟಿ ಬಿಟ್ಟು ಅಭಿವೃದ್ಧಿ ಮಾಡಬಹುದು. ಕರ್ನಾಟಕದಲ್ಲಿ ಸಾಕಷ್ಟು ಸಂಪನ್ಮೂಲ ಇದೆ. ಬಡವರಿಗೆ ಕೊಡುವುದನ್ನು ಕೊಟ್ಟು, ಬಳಿಕ ಬೇರೆ ಅಭಿವೃದ್ಧಿ ಕೆಲಸ ಮಾಡಬಹುದು ಎಂದರು.

ಇನ್ನೂ ಸಿದ್ದರಾಮಯ್ಯ ಅವರಿಗೆ ಗುರಿ ಇಲ್ಲ, ದಿನೇ ದಿನೇ ಕಾಂಗ್ರೆಸ್‌ನ ಶಾಸಕರು ಜಾಗೃತರಾಗುತ್ತಿದ್ದಾರೆ. ಎಲ್ಲವನ್ನು ಅಲ್ಪಸಂಖ್ಯಾತರಿಗೆ ಕೊಟ್ಟರೆ ಹೇಗೆ ಎನ್ನುತ್ತಿದ್ದಾರೆ. ಇದರಿಂದ ಸಿಎಂಗೆ ತಲೆನೋವಾಗಿದೆ. ನಿಮಗೆ ನಿಭಾಯಿಸಲು ಸಾಧ್ಯವಾಗದಿದ್ದರೆ, ವಿಧಾನಸಭೆ ವಿಸರ್ಜನೆ ಮಾಡಿ. ತಪ್ಪಿಯೂ ಕರ್ನಾಟಕವನ್ನ ಡಿಕೆಶಿ ಕೈಗೆ ಕೊಡಬೇಡಿ. ನೀವು ಸ್ವಲ್ಪ ಲೂಟಿ ಮಾಡಿದ್ದೀರಾ, ಡಿಕೆಶಿ ಕೈಯಲ್ಲಿ ಕೊಟ್ರೆ ಇಡೀ ಕರ್ನಾಟಕವನ್ನೇ ಮಾರಾಟ ಮಾಡಿಕೊಂಡು ಹೋಗುತ್ತಾರೆ. ಹೀಗಾಗಿ ರಾಜ್ಯ ಸರ್ಕಾರ ವಿಸರ್ಜನೆಯಾಗಬೇಕು, ರಾಜ್ಯಪಾಲರು ಮಧ್ಯಸ್ಥಿಕೆ ವಹಿಸಬೇಕು ಎಂದು ಆಗ್ರಹಿಸಿದರು.

# ಶರಣರ ವಚನಗಳಲ್ಲಿ ಪರಿಸರ ಪ್ರಜ್ಞೆ




ಮಲ್ಲಮ್ಮ ನುಡಿ ವಾರ್ತೆ

ಬೀದರ್:ಜೂ.24:ಬಸವಾದಿ ಶರಣರ ವಚನಗಳಲ್ಲಿ ಪರಿಸರ ಪ್ರಜ್ಞೆ ತುಂಬಿ ತುಳುಕುತ್ತಿದೆ ಎಂದು ಶಿಕ್ಷಕ ಡಾ. ಶಿವಲಿಂಗ ಹೇಡೆ ಹೇಳಿದರು.

ಲಿಂಗಾಯತ ಮಹಾ ಮಠದ ವತಿಯಿಂದ ನಗರದ ಬಸವಗಿರಿಯಲ್ಲಿ ಸೋಮವಾರ ನಡೆದ 264ನೇ ಶರಣ ಸಂಗಮ ಕಾರ್ಯಕ್ರಮದಲ್ಲಿ 'ಶರಣರು ಮತ್ತು ಪರಿಸರ' ಕುರಿತು ಅವರು ಉಪನ್ಯಾಸ ನೀಡಿದರು.

ಶರಣರು ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸಿದ್ದರು. ಪಶು, ಪ್ರಾಣಿ, ಕ್ರಿಮಿ ಕೀಟ, ಸಸ್ಯ ಸಂಕುಲ ಸಮತೋಲನದಿಂದಿದ್ದರೆ ಜಗತ್ತು ಚೆನ್ನಾಗಿರುತ್ತದೆ. ಪರಿಸರ ಉತ್ತಮವಾಗಿದ್ದರೆ ಮಾತ್ರ ಎಲ್ಲರೂ ಸುಖವಾಗಿ ಬಾಳಲು ಸಾಧ್ಯವಾಗುತ್ತದೆ ಎಂದು ಹೇಳಿದ್ದರು ಎಂದು ತಿಳಿಸಿದರು. ಪರಿಸರದ ಮೇಲೆ ಮಾನವನ ದೌರ್ಜನ್ಯ ನಿಲ್ಲಬೇಕು. ಪಂಚಭೂತಗಳು ದೇವರ ಭಿಕ್ಷೆ. ಅವುಗಳನ್ನು ಕಲುಷಿತಗೊಳಿಸುವುದು ಮನುಷ್ಯನಿಗೆ ಸಲ್ಲದೆಂದರು ಎಂದು ಹೇಳಿದರು.

ಬಸವಣ್ಣ ಒಂದು ಜೀವಿಗೂ ತೊಂದರೆ ಕೊಡಲಾರೆನೆಂದರು. ಕೊಲ್ಲೆನಯ್ಯ, ಮೆಲ್ಲೆನಯ್ಯ ಎಂದು ದಯವೇ ಧರ್ಮದ ಮೂಲವೆಂದರು. ಭಯದ ಧರ್ಮ ಬೇಡವೆಂದರು ಎಂದು ತಿಳಿಸಿದರು. ಸಾನಿಧ್ಯ ವಹಿಸಿದ್ದ ಪ್ರಭುದೇವ ಸ್ವಾಮೀಜಿ ಮಾತನಾಡಿ, ಸಸ್ಯಗಳಲ್ಲಿಯೂ ಜೀವ ಇದೆ ಎಂದು ಶರಣರು 900 ವರ್ಷಗಳ ಹಿಂದೆ–ಯೇ ಕಂಡುಕೊಂಡಿದ್ದರು. ಬಸವಣ್ಣ, ಅಕ್ಕಮಹಾದೇವಿ, ಅಲ್ಲಮಪ್ರಭುದೇವರು ಸೇರಿದಂತೆ ಅನೇಕ ಶರಣರು ಪ್ರಕೃತಿ, ಗಿಡ–ಮರಗಳ ಕುರಿತು ತಮ್ಮ ವಚನಗಳಲ್ಲಿ ಉಲ್ಲೇಖಿಸಿದ್ದಾರೆ. ಅವುಗಳನ್ನು ಇಂದು ನಾವು ತಿಳಿದುಕೊಂಡು ಅನುಸರಿಸಬೇಕಿದೆ ಎಂದು ಹೇಳಿದರು.

ಎಲ್ಲರೂ ಪರಿಸರ ಉಳಿಸುವ ಪಣ ತೊಡಬೇಕು. ಒಬ್ಬ ವ್ಯಕ್ತಿ ವರ್ಷಕ್ಕೆ ಒಂದು ಸಸಿಯಾದರೂ ನೆಟ್ಟು ಬೆಳೆಸಬೇಕು. ಆಗ ಜಗತ್ತು ಸುಂದರವಾಗುತ್ತದೆ ಎಂದು ತಿಳಿಸಿದರು. ಮಹಾ ಮಠದಿಂದ ಆರಂಭಿಸಿರುವ ಹಸಿದವರಿಗೆ ಅನ್ನ ಕೊಡುವ ಅನ್ನಪೂರ್ಣ ಯೋಜನೆ ಯಶಸ್ವಿಯಾಗಿ ನಡೆಯುತ್ತಿದೆ. ಯೋಜನೆಗೆ ಎಲ್ಲರೂ ಸಹಕರಿಸಬೇಕು ಎಂದು ತಿಳಿಸಿದರು.

ಲೋಕೋಪಯೋಗಿ ಇಲಾಖೆಯ ನಿವೃತ್ತ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಮಲ್ಲಿಕಾರ್ಜುನ ಮೋಳಕೇರಿ ಉದ್ಘಾಟಿಸಿದರು.

ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಹುದ್ದೆಯಿಂದ ನಿವೃತ್ತರಾದ ಮಲ್ಲಿಕಾರ್ಜುನ ಮೋಳಕೇರಿ, ಶಿಕ್ಷಕ ವೈಜನಾಥ ಹುಣಚಗೇರಿ, ಕರ್ನಾಟಕ ಸಿವಿಲ್ ಎಂಜಿನಿಯರ್ಸ್ ಪರಿಷತ್ ಸದಸ್ಯರಾಗಿ ನೇಮಕಗೊಂಡ ಹಾವಶೆಟ್ಟಿ ಪಾಟೀಲ ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪಡೆದ ಶಿವಲಿಂಗ ಹೇಡೆ ಅವರಿಗೆ ಸನ್ಮಾನ ಪತ್ರ ನೀಡಿ ಅಭಿನಂದಿಸಲಾಯಿತು.

ನೀಲಮ್ಮನ ಬಳಗದ ಸಹೋದರಿಯರು ಪ್ರಾರ್ಥನೆ ನಡೆಸಿಕೊಟ್ಟರು. ಪರುಷಕಟ್ಟೆಯ ಚನ್ನಬಸವಣ್ಣ, ಶ್ಯಾಮಲಾ ಎಲಿ ಸುಶ್ರಾವ್ಯವಾಗಿ ವಚನ ಗಾಯನ ಮಾಡಿದರು.

ಮಾಣಿಕಪ್ಪ ಗೋರನಾಳೆ ಅಧ್ಯಕ್ಷತೆ ವಹಿಸಿದ್ದರು. ಸಾಹಿತಿ ರಮೇಶ ಮಠಪತಿ ಉಪಸ್ಥಿತರಿದ್ದರು. ಚನ್ನಬಸಪ್ಪ ಹಂಗರಗಿ ಸ್ವಾಗತಿಸಿದರು. ಜಗದೇವಿ ಜಗನ್ನಾಥ ಚಿಮಕೋಡೆ ಗುರುಪೂಜೆಗೈದು, ಭಕ್ತಿ ದಾಸೋಹಗೈದರು.

## ಆಪರೇಷನ್ ಸಿಂಧೂರದಲ್ಲಿ ಭಾಗಿಯಾಗಿದ್ದ ಮಾತ್ರಕ್ಕೆ ವಿನಾಯ್ತಿ ಇಲ್ಲ: ಸುಪ್ರೀಂ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಜೂ.24:ಆಪರೇಷನ್ ಸಿಂಧೂರದಲ್ಲಿ ಭಾಗಿಯಾದ ಮಾತ್ರಕ್ಕೆ ಪತ್ನಿಯ ಮೇಲೆ ದೌರ್ಜನ್ಯ ಎಸಗಿದ್ದಕ್ಕೆ ವಿನಾಯ್ತಿ ಕೊಡಲು ಸಾಧ್ಯವಿಲ್ಲ ಎಂದು ಪತ್ನಿಯ ಕೊಲೆ ಆರೋಪಿಯಾಗಿರುವ ಬ್ಲ್ಯಾಕ್ ಕಮಾಂಡೋಗೆ ರಿಲೀಫ್ ಕೊಡಲು ಸುಪ್ರೀಂಕೋರ್ಟ್ ತಿರಸ್ಕರಿಸಿದೆ.

ಪ್ರಕರಣದಲ್ಲಿ ಪೊಲೀಸರ ಮುಂದೆ ಸರೆಂಡರ್ ಆಗಲು ವಿನಾಯ್ತಿ ಕೋರಿದ್ದ ಕಮಾಂಡೋ ತಾನು 'ಆಪರೇಷನ್ ಸಿಂಧೂರ'ದಲ್ಲಿ ಭಾಗಿಯಾಗಿದ್ದವನು. ನಾನು ಬ್ಲ್ಯಾಕ್ ಕ್ಯಾಟ್ ಕಮಾಂಡೋ ಎಂದು ಹೇಳಿದ್ದಾರೆ. ಇದಕ್ಕೆ ಕಠಿಣವಾಗಿಯೇ ಪ್ರತಿಕ್ರಿಯಿಸಿದ ಕೋರ್ಟ್, ಹಾಗಂತ ನಿಮಗೆ ವಿನಾಯ್ತಿ ಕೊಡೋಕೆ ಆಗಲ್ಲ ಅಂದಿದೆ. ಅಲ್ಲದೆ, ದೈಹಿಕವಾಗಿ ನೀವೆಷ್ಟು ಶಕ್ತರಾಗಿದ್ದೀರಿ. ನಿಮ್ಮ ಪತ್ನಿಯನ್ನು ಕತ್ತು ಹಿಸುಕಿದ್ದೀರಲ್ಲ. ಇದೊಂದು ಭೀಕರ ಕೃತ್ಯ. ಇಂಥ ಕೇಸ್‌ನಲ್ಲಿ ವಿನಾಯ್ತಿ ಕೊಡೋಕೆ ಆಗಲ್ಲ ಎಂದು ಜಸ್ಟೀಸ್ ಉಜ್ಜಲ್ ಭುಯಾನ್ ಹೇಳಿದರು. ನಿಮ್ಮ ವಿರುದ್ಧ ವರದಕ್ಷಿಣೆ ಕೇಸ್ ಕೂಡ ಇದ್ದು, ಹೈಕೋರ್ಟ್ ನಿಮಗೆ ರಿಲೀಫ್ ಕೊಟ್ಟಿಲ್ವಲ್ಲಾ ಎಂದು ಜಸ್ಟೀಸ್ ವಿನೋದ್ ಚಂದ್ರನ್ ಹೇಳಿದರು. ವಾದದ ಬಳಿಕ ಶರಣಾಗತಿಗೆ ಸುಪ್ರೀಂಕೋರ್ಟ್ 2 ವಾರಗಳ ಕಾಲಾವಕಾಶ ನೀಡಿದೆ. ಪತ್ನಿಯನ್ನು ಕತ್ತು ಹಿಸುಕಿ ಕೊಂದ ಪ್ರಕರಣದಲ್ಲಿ ಜುಲೈ 2004ರಂದು ಅಮೃತಸರದ ವಿಚಾರಣಾ ನ್ಯಾಯಾಲಯವು ಅರ್ಜಿದಾರ ಬಲ್ಜಿಂದರ್ ಸಿಂಗ್ ಅವರನ್ನು ಐಪಿಸಿ ಸೆಕ್ಷನ್ 304–ಬಿ ಅಡಿಯಲ್ಲಿ ದೋಷಿ ಎಂದು ತೀರ್ಪು ನೀಡಿತ್ತು.

## ಬೆಂಗಳೂರಿನ ಇಶಾ ಫೌಂಡೇಶನ್‌ದಿಂದ ಕೇಂದ್ರ ಕಾರಾಗೃಹದ ಬಂದಿಗಳಿಗೆ ಯೋಗಾಭ್ಯಾಸ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.24:11ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಬೆಂಗಳೂರಿನ ಇಶಾ ಪೌಂಡೇಷನ್ ವತಿಯಿಂದ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಮಂಗಳವಾರ ಪ್ರೋಜೆಕ್ಟರ್ ಸ್ಕ್ರಿನ್ ಮೂಲಕ ಯೋಗದ ಕುರಿತು ಮಾಹಿತಿ ನೀಡುವುದರ ಮೂಲಕ ಎಲ್ಲಾ ಕಾರಾಗೃಹದ ಬಂದಿಗಳಿಗೆ ಯೋಗಾಭ್ಯಾಸ ಮಾಡಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಮುಖ್ಯಸ್ಥೆ ಡಾ. ಅನಿತಾ ಆರ್. ಅವರು ಮಾತನಾಡಿ, ಬೆಂಗಳೂರಿನ ಇಶಾ ಪೌಂಡೇಷನ್‌ನ ಯೋಗ ಶಿಕ್ಷಕರು ಯೋಗಾಸನಗಳ ಕುರಿತು ಕಾರಾಗೃಹದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ ಸಿಬ್ಬಂದಿಗಳಿಗೆ ಹಾಗೂ ಬಂದಿಗಳಿಗೆ ತರಬೇತಿ ನೀಡಿದ್ದು, ಮುಂದಿನ ದಿನಗಳಿಗೆ ನಿರಂತರವಾಗಿ ಇಶಾ ಪೌಂಡೇಷನ್ ವತಿಯಿಂದ ಅಧಿಕಾರಿ/ಸಿಬ್ಬಂದಿಗಳಿಗೆ ಹಾಗೂ ಬಂದಿಗಳಿಗೆ ಒಂದು ವಾರದ ಕೋರ್ಸ್‌ನಂತೆ ತರಬೇತಿ ನೀಡಲು ಯೋಜನೆಯನ್ನು ರೂಪಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧೀಕ್ಷಕ ಎಂ.ಹೆಚ್.ಆಶೇಖಾನ್ ಅವರು ಮಾತನಾಡಿ, ದಿನ ನಿತ್ಯ ಯೋಗ ಮಾಡಿ ಉತ್ತಮ ಆರೋಗ್ಯ ಹೊಂದಿ, ಮಾನಸಿಕ ಮತ್ತು ದೈಹಿಕವಾಗಿ ಸದೃಢರಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಾರಾಗೃಹದ ಎಲ್ಲಾ ಬಂದಿಗಳು ಅತೀ ಉತ್ಸಾಹದಿಂದ ಈ ಯೋಗ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಯೋಗಾಭ್ಯಾಸ ಮಾಡಿದರು. ಬೆಂಗಳೂರಿನ ಇಶಾ ಪೌಂಡೇಷನ್ ಸಂಸ್ಥೆಯ ಯೋಗ ಗುರುಗಳಾದ ಸತೀಶ್‌ಕುಮಾರ ಪಾಟೀಲ್ ಮತ್ತು ಯುವರಾತ್ ಮತ್ತು ರವಿತೇಜ್ ಅವರು ಕಾರಾಗೃಹದ ಅಧಿಕಾರಿ/ಸಿಬ್ಬಂದಿ ಹಾಗೂ ಬಂದಿಗಳು ಸೇರಿದಂತೆ ಒಟ್ಟು 150 ಜನರಿಗೆ ಯೋಗವನ್ನು ಮಾಡಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಸಹಾಯಕ ಅಧೀಕ್ಷಕ ಚನ್ನಪ್ಪ, ಸಹಾಯಕ ಆಡಳಿತಾಧಿಕಾರಿ ಭೀಮಾಶಂಕರ ಡಾಂಗೆ, ಜೈಲರ್‌ಗಳಾದ ಸುನಂದ ವಿ., ಸಾಗರ ಪಾಟೀಲ್. ಶ್ರೀಮಂತಗೌಡ

ಪಾಟೀಲ್, ಶಾಮರಾವ ಬಿದ್ರಿ, ಸೇರಿದಂತೆ ಮತ್ತಿತರ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು. ಈ ಸಂಸ್ಥೆಯ ಶಿಕ್ಷಕರಾದ ನಾಗರಾಜ ಮೂಲಗೆ ಕಾರ್ಯಕ್ರಮ ನಿರ್ವಹಿಸಿದರು. ಕೊನೆಯಲ್ಲಿ ಸಂಸ್ಥೆಯ ಅಧೀಕ್ಷಕ ಎಂ.ಹೆಚ್. ಆಶೇಖಾನ್ ವಂದಿಸಿದರು.

## ರೈತರು ಮತ್ತು ಕೃಷಿ ಪಂಪ್ ಉಪಕರಣಗಳ ತಂತ್ರಜ್ಞರಿಗೆ ತರಬೇತಿ: ಹೆಸರು ನೋಂದಣಿಗೆ ಜೂ. 26 ಕೊನೆಯ ದಿನ

ವಾರ್ತೆ ಕಲಬುರಗಿ,ಜೂ.24:ಪ್ರಸಕ್ತ 2025–26ನೇ ಸಾಲಿನಲ್ಲಿ ರೈತರು ಮತ್ತು ಕೃಷಿ ಪಂಪ್ ಉಪಕರಣಗಳ ತಂತ್ರಜ್ಞರಿಗೆ ಬಿಇಇ ಸ್ಟಾರ್ ಲೇಬಲ್‌ವುಳ್ಳ ಇಂಧನ ದಕ್ಷ ಪಂಪಸೆಟ್ ಮತ್ತು ನೀರಿನ ಸಂರಕ್ಷಣೆ ಕುರಿತು ಇದೇ ಜೂನ್ 27 ರಂದು ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಕೋಟನೂರ (ಡಿ) ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಆಯೋಜಿಸಲಾಗಿದೆ ಎಂದು ಕಲಬುರಗಿ ಕೋಟನೂರ (ಡಿ) ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕರು ತಿಳಿಸಿದ್ದಾರೆ. ಕಲಬುರಗಿ ಜಿಲ್ಲೆಯ ಆಸಕ್ತಿಯುಳ್ಳ ರೈತರು, ಸಿ.ಹೆಚ್.ಸಿ. ಟೆಕ್ನಿಶಿಯನ್ಸ್/ ಮ್ಯಾನೇಜರ್ಸ್ (CHC Technicians/Managers) ಹಾಗೂ ಕೃಷಿ ಉಪಕರಣಗಳು/ಕೃಷಿ ಪಂಪಸೆಟ್ ತಂತ್ರಜ್ಞರು 2025ರ ಜೂನ್ 26 ರೊಳಗಾಗಿ ತಮ್ಮ ಹೆಸರನ್ನು ಕೃಷಿ ಅಧಿಕಾರಿಗಳಾದ ಸುಜಾತಾ ಆರ್.ರಾಜನಾಳಕರ–9448651202 ಹಾಗೂ ಯಾಸ್ಮೀನ್ ಇವರ ಮೊಬೈಲ್ ಸಂಖ್ಯೆ 9901604822ಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಎಫ್.ಐ.ಡಿ. ಹೊಂದಿರುವ ಆಸಕ್ತಿಯುಳ್ಳ ರೈತರು ನೊಂದಾಯಿಸಿಕೊಳ್ಳಬೇಕು. ಎಫ್.ಐ.ಡಿ. ಆಧಾರ ಸಂಖ್ಯೆ ಹಾಗೂ ಮೊಬೈಲ್ ಸಂಖ್ಯೆ ಕಡ್ಡಾಯವಾಗಿ ತರಬೇಕು. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಕೋಟನೂರ (ಡಿ) ಜಿಲ್ಲಾ ಕೃಷಿ ತರಬೇತಿ ಕೇಂದ್ರಕ್ಕೆ ಸಂಪರ್ಕಿಸಲು ಕೋರಲಾಗಿದೆ.

## ಸರ್ಕಾರ ವಸತಿ ಯೋಜನೆಯಲ್ಲಿ ಹಗರಣ ಸೂಕ್ತ ತನಿಖೆಗೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಅಫಜಲಪೂರ:ಜೂ.24: ತಾಲೂಕಿನಲ್ಲಿ ವಸತಿ ಯೋಜನೆಯಲ್ಲಿ ನಡೆದಿರುವ ಹಗರಣವನ್ನು ಸರ್ಕಾರ ಸೂಕ್ತ ತನಿಖೆ ಮಾಡಿ ತಪ್ಪಿತಸ್ತರ ಮೇಲೆ ಕ್ರಮ ಜರುಗಿಸಬೇಕು ಎಂದು ಯುವ ಹೋರಾಟಗಾರರಾದ ಸಿದ್ದಾರಾಮ ಸುಲ್ತಾನಪೂರ ಅವರು ಹೇಳಿದರು.

ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಅವರು ತಾಲೂಕಿನಲ್ಲಿ ಹಲವಾರು ಗ್ರಾಮ ಪಂಚಾಯತಗಳಲ್ಲಿ ಮುಗ್ಧ ಬಡ ಜನರಿಗೆ ಆಸರೆಯಾಗಲಿ ಅಂತಾ ಸರ್ಕಾರದಿಂದ ವಸತಿ ಯೋಜನೆಯಲ್ಲಿ ಮನೆಗಳು ಬಂದರೆ ಅದನ್ನೇ ಗ್ರಾಂಪಂಚಾಯತ ಸದಸ್ಯರು ದುರುಪಯೋಗ ಪಡೆಸಿಕೊಂಡು ಪ್ರತಿಯೊಬ್ಬ ಫಲನುಭವಿಗಳಿಂದ ಹಣ ವಸೂಲಿ ಮಾಡುವ ಕಾಯಕ ಮಾಡುತ್ತಿರುವದು ಖಂಡಿನಿಯ ಹಾಗಾಗಿ ಕೂಡಲೇ ಸರ್ಕಾರ ವಸತಿ ಯೋಜನೆಯಲ್ಲಿ ಹಗರಣ ಮಾಡುತ್ತಿರುವ ಹಣದಾಹಿಗಳಿನ್ನು ಮಟ್ಟ ಹಾಕಿ

ಬಡವರಿಗೆ ಸೂರು ವದಗಿಸುವ ಕೆಲಸ ಮಾಡಬೇಕು ಅಷ್ಟೇ ಅಲ್ಲದೆ ಬಡ ಜನರಿಂದ ವಸೂಲಿಗೆ ಇಳಿದ ಮಧ್ಯವರ್ತಿಗಳ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು, ಒಂದು ವೇಳೆ ಕ್ರಮ ಜರುಗಿಸದೆ ಹೋದರೆ ಉಗ್ರವಾದ ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

## ಭೂಮಿಗಳಲ್ಲಿ ಅನಧಿಕೃತ ಲೇಔಟಗಳು ಮಾಡದಂತೆ ಅಧಿಕಾರಿಗಳಿಗೆ ತರಾಟೆಗೆ ತೆಗೆದುಕೊಂಡ ಶಾಸಕ ಡಾ. ಬೆಲ್ದಾಳೆ



ಕೆಡಿಪಿ ಸಭೆಯ ಬಳಿಕ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಸಮಸ್ಯೆಗಳನ್ನು ಹೊತ್ತು ತಂದ ಜನರೊಂದಿಗೆ ಚರ್ಚಿಸಿ ಪಿಂಚಣಿ, ವಿದ್ಯುತ್, ಹೊಲದ ಸಮಸ್ಯೆಯಂತಹ ಸಣ್ಣಪುಟ್ಟ ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಹರಿಸಿದರು ಮತ್ತು ಸಂಬಂಸಿದ ಇಲಾಖೆ ಅಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು.

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಸರ್ಕಾರ ಗೋಹತ್ಯೆ ನಿಷೇಧ ಕಾನೂನು ಜಾರಿಗೊಳಿಸಿದೆ ಸಾರ್ವಜನಿಕರದೂರುಗಳು ಬಂದರೆ ತಾಲೂಕಿನ ತಹಶೀಲ್ದಾರ್ ಮತ್ತು ಪೊಲೀಸ್ ಅಧಿಕಾರಿಗಳು ಹಾಗೂ ಸಂಭಂದ ಪಟ್ಟ ಅಧಿಕಾರಿಗಳು ಯಾವುದೇ ಮುಲಾಜಿಲ್ಲದೆ ಪ್ರಕರಣ ದಾಖಲಿಸಬೇಕು ಎಂದು ಡಾ. ಶೈಲೇಂದ್ರ ಬೆಲ್ದಾಳೆ ತಾಲೂಕಿನ ಕರಕನಳ್ಳಿ ದೇವಸ್ಥಾನದ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದ್ದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಶು ಸಂಗೋಪನೆ ಇಲಾಖೆಯ ಪ್ರಗತಿ ಪರಿಶೀಲನೆ ಮಾಡಿ ಅಧಿಕಾರಿಗಳಿಗೆ ಆದೇಶಿಸಿದರು. ಶಿಕ್ಷಣ ಇಲಾಖೆಯ ಪ್ರಗತಿ ಪರಿಶೀಲನೆ ಮಾಡಿ ಎಲ್ಲಾ ಶಾಲೆಯಲ್ಲಿ ಸ್ವಚ್ಛತೆ, ಬಿಸಿಯೂಟದಲ್ಲಿ ಸ್ವಚ್ಛತೆ, ಶೌಚಾಲಯ ಸ್ವಚ್ಛತೆ ಬಗ್ಗೆ ವಿಶೇಷ ಗಮನ ಹರಿಸಲು ಕ್ಷೇತ್ರ ಶಿಕ್ಷಣಾಧಿಕಾರಿಗೆ ತಿಳಿಸಿದರು.

ಅಕ್ಷರ ಆವಿಷ್ಕಾರ ಯೋಜನೆ ಅಡ್ಡಿಯಲ್ಲಿ ಕ್ಷೇತ್ರದ 150 ಶಾಲೆಗಳಿಗೆ ಮಕ್ಕಳ ಆಟ ಆಡಲು ಆಟಿಕೆ ಸಾಮಗ್ರಿಗಳು ಮಂಜೂರು ಮಾಡಿದ್ದನೆ ಎಂದರು. ಹಾಗೂ ಶಿಕ್ಷಕರ ಕೊರತೆ ಇದ್ದರೆ ನನ್ನ ಗಮನಕ್ಕೆ ತರಬೇಕು ಎಂದರು. ಆರೋಗ್ಯ ಇಲಾಖೆ ಪ್ರಗತಿ ಪರಿಶೀಲನೆ ಮಾಡುತ್ತಾ ತಾಲೂಕ ಆರೋಗ್ಯ ಅಧಿಕಾರಿ ಕಡ್ಡಾಯವಾಗಿ ರಾತ್ರಿ ವೇಳೆ ಪ್ರವಾಸ ಹಾಕಿಕೊಂಡು ಮನ್ನಾಖೇಳ್ಳಿ, ನಿರ್ಣಾ, ಬೆಮಳಖೇಡಾ ಆಸ್ಪತ್ರೆಗಳಿಗೆ ಭೇಟಿ ನೀಡಿ ಪರಿಶೀಲಿಸಲು ಸಲಹೆ ನೀಡಿದರು. ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಯೋಜನೆಗಳ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಸಲಹೆ ನೀಡಿದರು. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಜಾರಿಗೆ ತಂದಿರುವ ಹಿರಿಯ ನಾಗರಿಕರಿಗೆ ಉಚಿತ ಚಿಕಿತ್ಸೆಯ ಸಂಭಂದ ಪ್ರತಿ ಗ್ರಾಮಗಳಿಗೆ ಯೋಜನೆಯ ಬಗ್ಗೆ ಮಾಹಿತಿ ನೀಡಲು ತಿಳಿಸಿದರು. ಕೃಷಿ ಇಲಾಖೆಯಲ್ಲಿ ರೈತರು ಬೋರ್ವೆಲ್ ಹಾಕಿಸಿಕೊಂಡರೆ 25ಸಾವಿರ ಸಹಾಯ ಧನ ಯೋಜನೆ ಜಾರಿಗೆ ತಂದಿದ್ದಾರೆ. ನನ್ನ ಕ್ಷೇತ್ರದ ರೈತರಿಗೆ ಯೋಜನೆ ಬಗ್ಗೆ ಏಕೆ ಜಾಗೃತಿ ಮಾಡಿಲ್ಲ ಎಂದು ತರಾಟೆಗೆ ತೆಗೆದು–ಕೊಂಡರು. ಕ್ಷೇತ್ರದ ಪ್ರತಿ ಗ್ರಾಮಗಳಲ್ಲಿ ಅನಧಿಕೃತವಾಗಿ ಲೇಔಟಗಳು ನಿರ್ಮಾಣ ಮಾಡಿ ದುಬಾರಿ ಬೆಲೆಯಲ್ಲಿ ಮಾರಾಟ ಮಾಡುತ್ತಿದ್ದಾರೆ ಕಂದಾಯ ಇಲಾಖೆ ಗ್ರಾಮಲೆಕ್ಕಿಗಾ, ಕಂದಾಯ ನಿರೀಕ್ಷಕರು ಏನು ಮಾಡುತ್ತಿದ್ದೀರಿ ಎಂದು ತರಾಟೆಗೆ ತೆಗೆದುಕೊಂಡರು, ಇಂತಹ ಅನಧಿಕೃತ ಲೇಔಟಗಳು ನಿರ್ಮಾಣ ಮಾಡಲು ನಿಮದೇ ಕುಮ್ಮಕ್ಕು ಇದೆ ಎಂದರು. ಹೀಗೆ ಮುಂದೆ ಈ ತರಹ ಆಗದೆ ಇರುವ ಹಾಗೆ ನೋಡಿಕೊಳ್ಳಲು ತಿಳಿಸಿದರು. ಸಾಮಾಜಿಕ ವಲಯ ಅರಣ್ಯ ಇಲಾಖೆಯಿಂದ ಈ ವರ್ಷ 1 ಕೋಟಿ ರೂಪಾಯಿ ಖರ್ಚು ಮಾಡಿ 1700 ಸಾವಿರ ಗಿಡಗಳು ನೆಟ್ಟಿದ್ದೇವೆ ಎಂದು ವಲಯ ಅರಣ್ಯಾಧಿಕಾರಿ ಉಮಾ ನಾಯಕ್ ತಿಳಿಸಿದ್ದಾಗ ಈ ಗಿಡಗಳು ನೆಟ್ಟಿದಂತಹ ಸ್ಥಳಗಳು ಪರಿಶೀಲನೆ ಮಾಡುವುದಾಗಿ ತಿಳಿಸಿದರು. ಪ್ರಾದೇಶಿಕ ವಲಯ ಅರಣ್ಯ ಹುಮನಾಬಾದ ವತಿಯಿಂದ 2 ವರ್ಷ ನನ್ನ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ನೆಟ್ಟಹಂತ ಗಿಡಗಳು ಪರಿಶೀಲನೆ ಮಾಡುವುದಾಗಿ ತಿಳಿಸಿದರು. ಎಲ್ಲಾ ಧಾರ್ಮಿಕ ಕೇಂದ್ರಗಳಲ್ಲಿ, ಶಾಲಾ ಕಾಲೇಜುಗಳಲ್ಲಿ ಹಸಿರು ಕರಣ ಮಾಡಲು ಅರಣ್ಯ ಅಧಿಕಾರಿಗಳಿಗೆ ತಿಳಿಸಿದರು. ಮನ್ನಾಖೇಳ್ಳಿ, ಬೆಮಳಖೇಡಾ, ನಿರ್ಣಾ ಸೇರಿದಂತೆ ತಾಲೂಕಿನ ಹಲವೆಡೆ ಜೆಜೆಎಂ ಕಾಮಗಾರಿಯ ಗುತ್ತಿಗೆದಾರರು ನಿಷ್ಕಾಳಜಿ ತೆ–ೂರುತ್ತಿದ್ದಾರೆ ನೀರಿನ ಪೈಪ್ಲೈನ್ ಒಡೆಯುತ್ತಿರುವ ಮಾಹಿತಿಯಿದ್ದು ಕಲುಷಿತ ನೀರು ಸೇರಿದ–ರೆ ಜನರ ಆರೋಗ್ಯದ ಸ್ಥಿತಿ ಏನಾಗಬಹುದು ಅಧಿಕಾರಿಗಳು ಏನು ಮಾಡುತ್ತೀರುವಿರಿ. ಸಿಸಿ ರಸ್ತೆ ಅಗೆದು ಅರ್ಧಬರ್ಧ ಮುಚ್ಚುತ್ತಿರುವುದರಿಂದ ರಸ್ತೆಗಳಲ್ಲಿ ತಗ್ಗು ಬಿದ್ದು ಜನರಿಗೆ ತೊಂದರೆಯಾಗುತ್ತಿವೆ. ಸರಿಯಾಗಿ ಕೆಲಸ ಮಾಡದೆ ಇರುವ ಗುತ್ತಿಗೆದಾರರ ಬಿಲ್ ಮಾಡಬೇಡಿ ಎಂದು ಅಧಿಕಾರಿಗಳಿಗೆ ತಿಳಿಸಿದರು. ಈ ಸಂದರ್ಭದಲ್ಲಿ ತಹಶೀಲ್ದಾರ್ ಮಂಜುನಾಥ್ ಪಂಚಾಳ, ತಾಲೂಕ ಪಂಚಾಯತ್ ಆಡಳಿತ ಅಧಿಕಾರಿ ಬಳಿರಾಮ, ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್, ವೃತ್ತ ನಿರೀಕ್ಷಕ ಶ್ರೀನಿವಾಸ ಅಲ್ಲಾಪುರ್, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಲಿಂಗರಾಜ ಅರಸ್, ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ್ ಗುಡಾಳ್, ತಾಲೂಕ ವೈದ್ಯಾಧಿಕಾರಿ ಡಾ. ಶಿವಕುಮಾರ್ ಸಿದ್ದೇಶ್ವರ, ಕಾರ್ಮಿಕ ಅಧಿಕಾರಿ ಗಂಗಾಧರ್, ವಲಯ ಅರಣ್ಯಧಿಕಾರಿಗಳಾದ ಶ್ರೀಕಾಂತ ರಾಠೋಡ, ಉಮಾ ನಾಯಕ್ ಸೇರಿದಂತೆ ತಾಲೂಕ ಮಟ್ಟದ ಅನುಷ್ಠಾನ ಅಧಿಕಾರಿಗಳು, ಪಿಡಿಒಗಳು ಉಪಸ್ಥಿತರಿದ್ದರು.



ಬಸವಕಲ್ಯಾಣ :– ತಾಲೂಕಿನ ಘೋಟಾಳದ ಸರಕಾರಿ ಪ್ರೌಢ ಶಾಲೆಯಲ್ಲಿ ಮುಖ್ಯ ಗುರುಗಳಾಗಿ ಸೇವೆ ಸಲ್ಲಿಸಿ ನಿವೃತ್ತರಾದ ವಿಶ್ವನಾಥ ರೋಹಿಲೆ ಅವರನ್ನು ಇಲ್ಲಿನ ಹಾಗೂ ಹುಲಸೂರ ಪ್ರೌಢಶಾಲಾ ಶಿಕ್ಷಕರ ಸಂಘದಿಂದ ಸನ್ಮಾನಿಸಲಾಯಿತು. ಎರಡು ತಾಲೂಕಿನ ಅಧ್ಯಕ್ಷರು ಪದಾಧಿಕಾರಿಗಳು ಭಾಗವಹಿಸಿದ್ದರು.


## ಕೆಕೆಆರ್‌ಡಿಬಿ ಅನುದಾನದಲ್ಲಿ ಬಕ್ಕಪ್ರಭು ಯಾತ್ರಿ ನಿವಾಸ ಉದ್ಘಾಟನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ತಾಲೂಕಿನ ಕರಕನಳ್ಳಿ ಶ್ರೀ ಗುರು ಗಂಗಾಧರ್ ಬಕ್ಕಪ್ರಭು ದೇವಸ್ಥಾನದ ಆವರಣದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅನುದಾನದಲ್ಲಿ 2023–24ನೇ ಸಾಲಿನಲ್ಲಿ ಡಾ. ಶೈಲೇಂದ್ರ ಬೆಲ್ದಾಳೆ ಅವರು ಮಂಜೂರು ಮಾಡಿರುವ 34.77 ಲಕ್ಷ ರೂಪಾಯಿ ಅನುದಾನದಲ್ಲಿ ನಿರ್ಮಾಣಗೊಂಡಿರುವ ಯಾತ್ರಿ ನಿವಾಸ ಕಟ್ಟಡ ಮಂಗಳವಾರ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಧ್ಯ–ಕ್ಷೆ ಲೀಲಾವತಿ ಪಾಟೀಲ್, ತಹಶೀಲ್ದಾರ್ ಮಂಜುನಾಥ್ ಪಂಚಾಳ, ಕಾರ್ಯನಿರ್ವಾಹಕ ಅಧಿಕಾರಿ ಲಕ್ಷೀ ಬಿರಾದಾರ್, ಸಿಪಿಐ ಶ್ರೀನಿವಾಸ ಅಲ್ಲಾಪುರ್, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಲಿಂಗರಾಜ ಅರಸ್, ಪಿಡಿಓ ರಾಜಕುಮಾರ್ ಪಂಚಾಳ, ನಿರ್ಮಿತಿ ಕೇಂದ್ರದ ಇಂಜಿನಿಯರ್ ಸಚಿನ ಮಠಪತಿ, ಪ್ರಮುಖರಾದ ವೀರಶೆಟ್ಟಿ ಪಾಟೀಲ್, ಅಶೋಕರೆಡ್ಡಿ ಪಾಟೀಲ್, ಗೋಪಾಲರೆಡ್ಡಿ ನಿರ್ಣಾ, ರಾಜಪ್ಪ ಮುತ್ತ್ಯಾ, ಷಣ್ಮುಖಪ್ಪ ನಿಂಗನಬಾಡ, ಸಂತೋಷ ಹಳ್ಳಿಖೇಡ್, ಬಸವರಾಜ ಕಾಡವಾದ, ಕಲ್ಲಪ್ಪ ರಾಚೋಟಿ, ರಾಜಕುಮಾರ ರಾಚೋಟಿ, ಕಾಶಿನಾಥ್ ರಾಜಗೀರಾ, ಅಶೋಕರೆಡ್ಡಿ ಘಾಳಿ, ಕರಣಯ್ಯಾ ಸ್ವಾಮಿ, ವಿಜಯಕುಮಾರ್ ವಾಲಿ, ರಾಮಲು ಮಂತ್ರಿ ಸೇರಿದಂತೆ ಇತರರು ಉಪಸ್ಥಿತರಿದ್ದರು. ವಿಜಯಕುಮಾರ್ ರಾಜಗೀರಾ ಸ್ವಾಗತಿಸಿದರು. ಜಗನಾಥ ನಿರೂಪಿಸಿದರು.

## ನಂ.5 ಡಿಸ್ಟ್ರಿಬ್ಯೂಟರ್ ಉಪ ಕಾಲುವೆ ದುರಸ್ತಿಗೆ ರೈತರ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜಿಲ್ಲೆಯ ಅಗಳಕೇರಿ ಮತ್ತು ಹಿಟ್ನಾಳ ಸೀಮೆಯಲ್ಲಿ ಹಾದು ಹೋಗುವ ತುಂಗಭದ್ರಾ ಎಡದಂಡೆ ನಾಲೆಯ 5ನೇ ವಿತರಣಾ ಕಾಲುವೆಯ 1ನೇ ಪಿ.ಓ. ಕಾಲುವೆ ತ್ಯಾಜ್ಯದಿಂದ ತುಂಬಿಕೊಂಡಿದ್ದು ದುರಸ್ತಿಗೊಳಿಸುವಂತೆ ಕೃಷಿಕರು ತುಂಗಭದ್ರಾ ಜಲಮಂಡಳಿಗೆ ಮನವಿ ಮಾಡಿದ್ದಾರೆ.

ನಾಲೆಯ 5ನೇ ವಿತರಣಾ ಕಾಲುವೆಯಿಂದ ಕೋಳೂರಮ್ಮ ದೇವಿಯ ದೇವಾಲಯ ಹಿಂಭಾಗ ಮತ್ತು ಅಗಳಕೇರಿ ಹಳ್ಳದವರೆಗೆ ಹಾದು ಹೋಗಿರುವ ಉಪ ಕಾಲುವೆ ನೀರು ಪಕ್ಕದ ರೈತರ ಜಮೀನಿನಲ್ಲಿ ಊಟಿಯ ಸ್ವರೂಪದಲ್ಲಿ ಗೋಚರಿಸಿದೆ. ಸುಮಾರು ಅರ್ಧ ಕಿ.ಮೀ. ಉದ್ದದ ಉಪ ಕಾಲುವೆಯ ತುಂಬ ತ್ಯಾಜ್ಯದ ಗಿಡಗಳು ಬೆಳೆದು ನಿಂತಿವೆ. ಸಾಲದ್ದಕ್ಕೆ ಈ ಉಪ ಕಾಲುವೆಗೆ ವ್ಯರ್ಥವಾದ ಹಾಸಿಗೆ, ಬಟ್ಟೆಗಳನ್ನು ಬಿಸಾಡುವುದರಿಂದ ನೀರು ಜಮೆಗೊಂಡು ಮುಂದಕ್ಕೆ ಹರಿಯದಂತಾಗಿದೆ.

ಇದರಿಂದ ಕಾಲುವೆಯ ಕೆಳಭಾಗದ ರೈತರ ಜಮೀನಿನಲ್ಲಿ ನೀರು ಊಟಿ ಉಲ್ಬಣಿಸಿ, ವರ್ಷಪೂರ್ತಿ ನೀರು ಗದ್ದೆಯಲ್ಲಿ ಸಂಗ್ರಹಗೊಳ್ಳುತ್ತಿದೆ. ಇದರಿಂದ ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಭತ್ತ ನಾಟಿ ಮಾಡುವ ರೈತರ ಕೃಷಿ ಚಟುವಟಿಕೆಗಳಿಗೆ ಸಮಸ್ಯೆ ಉಲ್ಬಣಿಸಿದೆ. ತುಂಗಭದ್ರಾ ಜಲ ಮಂಡಳಿ ಅಧಿಕಾರಿಗಳು ತ್ಯಾಜ್ಯವನ್ನು ಸ್ವ ಚ್ಛಗೊಳಿಸಿ, ಸಿಮೆಂಟ್ ಕಾಂಕ್ರೀಟ್ ಕಾಲುವೆ ನಿರ್ಮಿಸಿ ರೈತರಿಗೆ ನೆರವಾಗಬೇಕು. ವ್ಯರ್ಥವಾಗಿ ಹರಿದು ಹೋಗುವ ನೀರನ್ನು ತಡೆ ಹಿಡಿಯಬೇಕೆಂದು ಕೋಳೂರಮ್ಮ ಗುಡಿ ವ್ಯಾಪ್ತಿಯ ರೈತರು 'ಕಾಡಾ' ಅಧಿಕಾರಿಗಳಲ್ಲಿ ಮನವಿ ಮಾಡಿದ್ದಾರೆ.

## ಕಿಶೋರ ಕಾರ್ಮಿಕರ ರಕ್ಷಣೆ



ಮಲ್ಲಮ್ಮ ನುಡಿ ವಾರ್ತೆ

ತುಮಕೂರು,ಜೂ.14–ತುಮಕೂರು ಉಪವಿಭಾಗದಲ್ಲಿ ಅಡಿಯಲ್ಲಿ ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಕಮಿಟಿ ಸದಸ್ಯರುಗಳೊಂದಿಗೆ ನಡೆಸಿದ ದಾಳಿಯಲ್ಲಿ ನಗರದ ಗುಬ್ಬಿ ಗೇಟ್ ರಿಂಗ್ ರಸ್ತೆಯ ಗ್ಯಾರೇಜ್‌ಗಳಲ್ಲಿ ಮಹಮ್ಮದ್ ಮಾಸ್ ಮತ್ತು ನಿರಜ್ ಕುಮಾರ್ ಬೋಟಿ ಎಂಬ ಕಿಶೋರ ಕಾರ್ಮಿಕರನ್ನು ರಕ್ಷಿಸಿ ಬಾಲ ಮಂದಿರಕ್ಕೆ ಸೇರಿಸಲಾಯಿತು.

ಈ ದಾಳಿಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನೂರುನ್ನೀಸ ಹಾಗೂ ತಾ.ಪಂ. ಕಾರ್ಯನಿರ್ವಹಣಾಧಿಕಾರಿ ಹರ್ಷಕುಮಾರ್, ಕಾರ್ಮಿಕ ಅಧಿಕಾರಿ ಕೆ. ತೇಜಾವತಿ ಹಾಗೂ ಸೆಕ್ಷನ್ 17 ಅಧಿಕಾರಿಗಳು ಪಾಲ್ಗೊಂಡಿದ್ದರು.

## ಮುಖ್ಯಮಂತ್ರಿಗಳ ಕಾರ್ಯಕ್ರಮ ಅಭೂತಪೂರ್ವ ಯಶಸ್ಸು: ಶಾಸಕರಾದ ಬಸನಗೌಡ ದದ್ದಲ್ ಅವರಿಂದ ಅಭಿನಂದನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 24 – ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಇವರ ಆಶ್ರಯದಲ್ಲಿ ಜೂನ್ 23ರಂದು ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಯರಗೇರಾ ಗ್ರಾಮದಲ್ಲಿ ನಡೆದ ಬುಡಕಟ್ಟು ಸಾಂಸ್ಕೃತಿಕ ಉತ್ಸವ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ನಾಮಫಲಕ ಅನಾವರಣ, 371(ಜೆ) ದಶಮಾನೋತ್ಸವ ಮತ್ತು 936 ಕೋಟಿ ರೂ.ಗಳ ವೆಚ್ಚದಲ್ಲಿ ವಿವಿಧ ಕಾಮಗಾರಿಗಳ ಅಡಿಗಲ್ಲು ಹಾಗೂ ಉದ್ಘಾಟನೆ ಕಾರ್ಯಕ್ರಮದಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಸಂಸದರಾದ (ರಾಜ್ಯ ಸಭೆ) ಡಾ.ಮಲ್ಲಿಕಾರ್ಜುನ ಖರ್ಗೆ, ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಮತ್ತು ಸಚಿವರು, ಶಾಸಕರು ಸೇರಿದಂತೆ ಅನೇಕ ಗಣ್ಯ ಮಹನಿಯರು ಮತ್ತು ಕ್ಷೇತ್ರದ ಜನರು ಭಾಗಿಯಾಗಿ ಯಶಗೊಳಿಸಿದ್ದು ತಮಗೆ ಸಂತಸ ತಂದಿದೆ ಎಂದು ಕರ್ನಾಟಕ ಶ್ರೀ ಮಹರ್ಷಿ ವಾಲ್ಮೀಕಿ ಪರಿಶಿಷ್ಠ ಪಂಗಡ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಶಾಸಕರಾದ ಬಸನಗೌಡ ದದ್ದಲ್ ಅವರು ತಿಳಿಸಿದ್ದಾರೆ.

ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಯರಗೇರಾ ಗ್ರಾಮದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕ್ಷೇತ್ರದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ನೆರೆದು ಕಾರ್ಯಕ್ರಮದ ಮೆರಗನ್ನು ಹೆಚ್ಚಿಸಿದರು. ಜೊತೆಗೆ ಬುಡಕಟ್ಟು ಸಾಂಸ್ಕೃತಿಕ ಕಾರ್ಯಕ್ರಮದ ಸೊಬಗನ್ನು ಕಣ್ತುಂಬಿಕೊಂಡರು. ವಿಶೇಷವಾಗಿ ತಾಯಂದಿರು, ಸಹೋದರಿಯರು ಸೇರಿದಂತೆ ಸಾರ್ವಜನಿಕರು ಉತ್ಸುಕರಾಗಿ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಿದ್ದು ತಮಗೆ ಸಂತಸ ತಂದಿದೆ.

ಈ ಅಭೂತಪೂರ್ವ ಕಾರ್ಯಕ್ರಮದಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಸಂಸದರಾದ (ರಾಜ್ಯ ಸಭೆ) ಡಾ.ಮಲ್ಲಿಕಾರ್ಜುನ ಖರ್ಗೆ, ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ, ಸಚಿವರು, ಶಾಸಕರು ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಿ ಸಂತೋಷವನ್ನು ಹೆಚ್ಚಿಸಿದ್ದಾರೆ. ಹಾಗಾಗಿ ಮಾನ್ಯ ಡಾ.ಮಲ್ಲಿಕಾರ್ಜುನ ಖರ್ಗೆ, ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರಿಗೆ, ಎಲ್ಲ ಸಚಿವರಿಗೆ, ಶಾಸಕರು, ವಿಧಾನ ಪರಿಷತ್ ಸದಸ್ಯರಿಗೆ, ವಿವಿಧ ನಿಗಮ, ಸಮಿತಿ, ಮಂಡಳಿ, ಪ್ರಾಧಿಕಾರಗಳ ಅಧ್ಯಕ್ಷರು, ಸದಸ್ಯರಿಗೆ, ನಾಮ ನಿರ್ದೇಶಿತ ಸದಸ್ಯರು ಹಾಗೂ ಇನ್ನೀತರ ಎಲ್ಲ ಗಣ್ಯ ಮಹನಿಯರಿಗೆ, ಕಾರ್ಯಕ್ರಮಕ್ಕೆ ಎಲ್ಲಾ ರೀತಿಯ ಸಹಕಾರ ನೀಡಿದ ಎಲ್ಲ ಮುಖಂಡರಿಗೆ, ಕಾರ್ಯಕರ್ತರಿಗೆ, ಅಭಿಮಾನಿಗಳಿಗೆ ಅಭಿನಂದನೆಗಳನ್ನು ತಿಳಿಸುವೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಪೊಲೀಸ್ ಇಲಾಖೆ ಸೇರಿದಂತೆ ಇನ್ನೀತರ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯಕ್ರಮದಲ್ಲಿ ಸಕ್ರಿಯ ಭಾಗಿಯಾಗಿದ್ದಾರೆ. ಪತ್ರಿಕಾ ಹಾಗೂ ವಿದ್ಯುನ್ಮಾನ ಮಾಧ್ಯಮದ ಪ್ರತಿನಿಧಿಗಳು ಈ ಕಾರ್ಯಕ್ರಮಕ್ಕೆ ವಿಶೇಷ ಪ್ರಚಾರ ನೀಡಿದ್ದಾರೆ. ಈ ಕಾರ್ಯಕ್ರಮಕ್ಕೆ ಪ್ರತ್ಯೇಕ್ಷವಾಗಿ, ಪರೋಕ್ಷವಾಗಿ ಶ್ರಮಿಸಿದ ಎಲ್ಲರಿಗೂ ಅಭಿನಂದಿಸುವೆ, ಧನ್ಯವಾದಗಳನ್ನು ಹೇಳುವೆ ಎಂದು ಶಾಸಕರಾದ ಬಸವನಗೌಡ ದದ್ದಲ್ ಅವರು ತಿಳಿಸಿದ್ದಾರೆ.

## ಐವರು ವಾಹನ ಚಾಲಕರ ಅಂತಿಮ ಆಯ್ಕೆಪಟ್ಟಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 24 – ಇಲ್ಲಿನ ಅಬಕಾರಿ ಇಲಾಖೆಯಲ್ಲಿ ಖಾಲಿ ಇರುವ 05 ವಾಹನ ಚಾಲಕರ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಕರ್ನಾಟಕ ಅಬಕಾರಿ (ನೇಮಕಾತಿ) ನಿಯಮಗಳು, 1996 ಮತ್ತು ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ನಿಯಮಗಳನುಸಾರ ಆಯ್ಕೆ ಪ್ರಕ್ರಿಯೆಗಳನ್ನು ನಡೆಸಿ ಅಂತಿಮ ಆಯ್ಕೆ ಪಟ್ಟಿಯನ್ನು 28–03–2025ರಂದು ಪ್ರಕಟಿಸಿ, ಈ ಆಯ್ಕೆಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಕಾಲಾವಕಾಶ ನೀಡಲಾಗಿತ್ತು. ಈ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಗೆ ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಶೀಲಿಸಿ ಅಂತಿಮ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿದೆ ಎಂದು ಅಬಕಾರಿ ಇಲಾಖೆಯ ವಾಹನ ಚಾಲಕರ ವೃಂದದ ನೇಮಕಾತಿ ಸಮಿತಿಯ ಅಧ್ಯಕ್ಷರು ಹಾಗೂ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

## ಮಾಜಿ ಸಚಿವ ರಾಜಶೇಖರ ಪಾಟೀಲ್ ಅಭಿಮತ
## ಬುದ್ಧ, ಬಸವಣ್ಣ, ಅಂಬೇಡ್ಕರ್ ತತ್ವ ಪಾಲಿಸಿ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಸರ್ವಜನಾಂಗದ ಒಳಿತನ್ನು ಬಯಸಿದ ಭಗವಾನ ಬುದ್ಧ, ಬಸವಣ್ಣ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ತತ್ವಗಳನ್ನು ಎಲ್ಲರೂ ಪಾಲಿಸಬೇಕು ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಹೇಳಿದರು.



ನೊಂದ ಜೀವಗಳಿಗೆ ಆಸರೆಯಾದ ಆಶ್ರಯ ದೀಪ ಟ್ರಸ್ಟ್ ಉದ್ಘಾಟನೆ ಮಾಡಿದ್ದು ನನಗೆ ಸಂತಸ ತಂದಿದೆ. ಪದಾಧಿಕಾರಿಗಳೆಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡಿದರೆ ಮಾತ್ರ ಆಶ್ರಯ ದೀಪ ಟ್ರಸ್ಟ್ ಉಳಿಯಲು ಸಾಧ್ಯವಾಗುತ್ತದೆ.
**–ಮಾಜಿ ಸಚಿವರು**
**ರಾಜಶೇಖರ ಬಿ.ಪಾಟೀಲ ಹುಮನಾಬಾದ**

ಪಟ್ಟಣದ ಸರಕಾರಿ ನೌಕರರ ಭವನದ ಸಭಾಂಗಣದಲ್ಲಿ ಆಶ್ರಯ ದೀಪ ಟ್ರಸ್ಟ್ ವತಿಯಿಂದ ಭಾನುವಾರ ನಡೆದ ಆಶ್ರಯ ದೀಪ ಟ್ರಸ್ಟ್ ಉದ್ಘಾಟನೆ ಸಮಾರಂಭ ಹಾಗೂ ಬುದ್ಧ, ಬಸವ, ಅಂಬೇಡ್ಕರ್ ಅವರ ಒಂದು ದಿನದ ವಿಚಾರ ಸಂಕಿರಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಮಾಜದಲ್ಲಿ ಅನ್ಯಾಯ ಮೇಲುಗೈ ಸಾಧಿಸಿದಾಗ ಅವತಾರ ಪುರುಷರು ಕಾಣಿಸಿಕೊಂಡು ಧರ್ಮವನ್ನು ಸ್ಥಾಪಿಸುತ್ತಾರೆ ಎಂಬ ನಂಬಿಕೆ ಇದೆ. 12ನೇ ಶತಮಾನದಲ್ಲಿ ಬಸವೇಶ್ವರ ಮತ್ತು 19ನೇ ಶತಮಾನದಲ್ಲಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ದೀನದಲಿತರು, ಶೋಷಿತರ ವಿಮೋಚನಕಾರರಾಗಿ, ಅಜ್ಞಾನ ಮತ್ತು ಮೂಢನಂಬಿಕೆಗಳ ವಿರುದ್ಧ ಸಮಾಜ ಸುಧಾರಕರಾಗಿ ಕಾಣಿಸಿಕೊಂಡರು ಎಂದರು.

ಗೌತಮ ಬುದ್ಧರು ಆಸೆಯೇ ಮೂಲ ಎಂದು ಸಾರಿದರೇ, ಬಸವಣ್ಣನವರು ಕಾಯಕವೇ ಕೈಲಾಸ ಎಂದು ಹಾಗೂ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಶಿಕ್ಷಣ, ಸಂಘಟನೆ ಮತ್ತು ಒಗ್ಗಟ್ಟಿನ ಹೋರಾಟ ಎಂಬ ಸಂದೇಶವನ್ನು ಸಮಾಜಕ್ಕೆ ಸಾರಿದ್ದಾರೆ. ಜೀವನದ ಸಾರವನ್ನು ತಿಳಿಸುವ ಈ ಸಂದೇಶಗಳು ಇಂದಿನ ಯುವಕ–ಯುತಿಯರು ಅರಿತುಕೊಳ್ಳಬೇಕು ಎಂದರು. ಹಿರೇಮಠ ಸಂಸ್ಥಾನದ ಪೀಠಾಧಿಪತಿಗಳಾದ ಶ್ರೀ ರೇಣುಕ ಗಂಗಾಧರ ಶಿವಾಚಾರ್ಯರು ದಿವ್ಯ ಸಾನ್ನಿಧ್ಯವಹಿಸಿ ಮಾತನಾಡಿ, ಬೆಳೆಯುತ್ತಿರುವ ತಂತ್ರಜ್ಞಾನದಲ್ಲಿನ ವಸ್ತುಗಳ ಬಳಕೆಯಿಂದ ಮಕ್ಕಳು ಚಿಕ್ಕಂದಿನಲ್ಲಿಯೇ ಅನೇಕ ತಾಪತ್ರಯಗಳಲ್ಲಿ ಸಿಕ್ಕು ನಲುಗುತ್ತಿದ್ದು, ಅದನ್ನು ಅರಿತು–ಕೊಂಡು ಪಾಲಕರು ಮಕ್ಕಳನ್ನು ಉತ್ತಮ ಮಾರ್ಗದತ್ತ ಕರೆತಂದು ಶಿಕ್ಷಣದ ಕಡೆಗೆ ವಿಶೇಷ ಗಮನ ಹರಿಸಬೇಕಿದೆ, ಮೊಬೈಲ್ ವಿದ್ಯಾರ್ಥಿ ಜೀವನವನ್ನು ಕತ್ತಲೆಯತ್ತ ಕೊಂಡೊಯ್ದ–ರೆ, ಪುಸ್ತಕ ಜ್ಞಾನಾರ್ಜನೆ ಸದಾ ಬೆಳಕಿನತ್ತ ಒಯ್ಯುತ್ತದೆ. ಅದಕ್ಕಾಗಿ ಮೊಬೈಲ್ ಬಳಕೆ ಬಿಟ್ಟು ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು, ಜ್ಞಾನಾರ್ಜನೆ ಜೀವನದ ಅಮೂಲ್ಯ ಸಂಪತ್ತು ಎಂದು ಹೇಳಿದರು. ಸಮಾಜ ಕಟ್ಟುವಂತಹ ಕೆಲಸಕ್ಕೆ ಪ್ರೇರಣೆ ನೀಡಿದರೆ ಅಧರ್ಮವು ಸಮಾಜ ಒಡೆಯುವಂತಹ ಕಾರ್ಯಕ್ಕೆ ಪ್ರೇರಣೆ ನೀಡುತ್ತದೆ, ಆದ್ದರಿಂದ ನಾವೆಲ್ಲರೂ ಸಮಾಜ ಕಟ್ಟುವ ಕೆಲಸಕ್ಕೆ ಕೈಜೋಡಿಸಬೇಕು ಅದುವೇ ನಿಜವಾದ ಧರ್ಮ ಎಂದರು.

ಈ ಸಂದರ್ಭದಲ್ಲಿ ರೇಣುಕವೀರ ಗಂಗಾಧರ ಶಿವಾಚಾರ್ಯರು, ರಾಮ ಮತ್ತು ರಾಜ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಡಾ. ನಾಗಶಟ್ಟಿ ಶೇರಿಕಾರ, ಸುರಪುರನ ವೀರಪ್ಪ ನಿಷ್ಠಿ ತಾಂತ್ರಿಕ ಕಾಲೇಜಿನ ಪ್ರಾಧ್ಯಪಕ ಪ್ರಶಾಂತ ಶೇರಿಕಾರ, ಡಾ. ಸಿದ್ರಾಮ ವಾಘ್ಮಾರೆ, ಸತೀಷ ಸಿಂಧೆ, ಹಣ್ಮುಪಾಜಿ, ಸಂತೋಷ ಜಿ., ರೇವಣಸಿದ್ದಯ್ಯ ಸ್ವಾಮಿ, ಅನಿಲ ದೊಡ್ಡಿ, ಭೀಮರೆಡ್ಡಿ ಸಿಂಧನಕೇರಾ, ಅರವಿಂದ ಜೋಗಿರೆ, ಮೋಹನಸಿಂಗ್ ರಜಪೂತ, ಉದಯಕುಮಾರ ವಾರದ, ಯುವರಾಜ ಐಹೋಳೆ ಸೇರಿ ಅನೇಕರಿದ್ದರು.

## ಜೂ.25 ರಂದು ಬಳ್ಳಾರಿ ಗ್ರಾಮೀಣ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.24–ಬಳ್ಳಾರಿ ಗ್ರಾಮೀಣ ಜೆಸ್ಕಾಂ ಉಪವಿಭಾಗ ವ್ಯಾಪ್ತಿಗೆ ಬರುವ ವಿದ್ಯುತ್ ಉಪ–ಕೇಂದ್ರದ ತ್ರೈಮಾಸಿಕ ನಿರ್ವಹಣೆ ಮತ್ತು ದುರಸ್ತಿ ಕಾರ್ಯ ಕೈಗೊಳ್ಳುತ್ತಿರುವುರಿಂದ ಮೋಕಾ ವಿದ್ಯುತ್ ಉಪ–ಕೇಂದ್ರ ಮತ್ತು 33/11ಕೆ.ವಿ ರ್‍ರಗುಡಿ ವಿದ್ಯುತ್ ಉಪಕೇಂದ್ರದಿಂದ ಸರಬರಾಜು ಆಗುವ ಮಾರ್ಗಗಳಲ್ಲಿ ಜೂ.25 ರಂದು ಬೆಳಿಗ್ಗೆ 11 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಮೋಹನಬಾಬು ಅವರು ತಿಳಿಸಿದ್ದಾರೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

ಎಫ್–01 ಬಿ.ಡಿ.ಹಳ್ಳಿ ಐಪಿ ಮಾರ್ಗದ ಮೋಕಾ ಬಿ.ಡಿ.ಹಳ್ಳಿ ಕೃಷಿ ಪ್ರದೇಶಗಳು. ಎಫ್–02 ಮಸೀದಿಪುರ ಐಪಿ ಮಾರ್ಗದ ಗೋಟೂರು, ಕೆ.ಕೆಹಾಳ್, ಮಸೀದಿಪುರ, ವಣೆನೂರು, ಬಾಣಾಪುರ, ಗುಡುದೂರು ಕೃಷಿ ಪ್ರದೇಶಗಳು. ಎಫ್–04 ಮೋಕಾ/ ಶಿವಪುರ ಐಪಿ ಮಾರ್ಗದ ಶಿವಪುರ, ಅಶೋಕನಗರ ಕ್ಯಾಂಪ್, ಕಪ್ಪಗಲ್ಲು, ಸಿರಿವಾರ, ಸಂಗನಕಲ್ಲು, ಚಾಗನೂರು ಕೃಷಿ ಪ್ರದೇಶಗಳು.

ಎಫ್–05 ವಾಟರ್ ವರ್ಕ್ಸ್ ಶಿವಪುರ ವಾಟರ್ ವರ್ಕ್ಸ್. ಎಫ್–12 ಬಸರಕೋಡು ಎನ್.ಜೆ.ವೈ ಮಾರ್ಗದ ಗೋಟೂರು, ಕೆ.ಕೆಹಾಳ್, ಮಸೀದಿಪುರ, ವಣೆನೂರು, ಕರ್ಚೇಡು, ಬಸರಕೋಡು, ಬಾಣಾಪುರ ಹೀರೆಹಡ್ಲಿಗಿ ಗ್ರಾಮಗಳು. ಎಫ್–13 ಬಸರಕೋಡು ಐಪಿ ಮಾರ್ಗದ ಮೋಕಾ, ಕರ್ಚೇಡು, ಬಸರ–ಕೋಡು, ಹೀರೆಹಡ್ಲಿಗಿ ಕೃಷಿ ಪ್ರದೇಶಗಳು.

ಎಫ್–14 ಕಪ್ಪಗಲ್ಲು ಮತ್ತು ಸೋಲಾರ್ ಮಾರ್ಗದ ಶಿವಪುರ, ಅಶೋಕನಗರ ಕ್ಯಾಂಪ್, ಕಪ್ಪಗಲ್ಲು, ಸಿರಿವಾರ ಗ್ರಾಮ. ಎಫ್–15 ಮೋಕಾ ಮತ್ತು ಸೋಲಾರ್ ಮಾರ್ಗದ ಮೋಕಾ ಮತ್ತು ಬಿ.ಡಿ.ಹಳ್ಳಿ ಗ್ರಾಮ. ಎಫ್–01 ಡಿ.ಎನ್.ಹಳ್ಳಿ ಐಪಿ ಮಾರ್ಗದ ಡಿಎನ್.ಹಳ್ಳಿ, ಜಿ.ಎನ್.ಹಳ್ಳಿ, ತಂಬ್ರಳ್ಳಿ, ಬ್ಯಾಲಚಿಂತೆ ಕೃಷಿ ಪ್ರದೇಶಗಳು. ಎಫ್–02 ಜಿ.ಎನ್ ಹಳ್ಳಿ ಐಪಿ ಮಾರ್ಗದ ಜಿ.ಎನ್. ಹಳ್ಳಿ, ತಂಬ್ರಳ್ಳಿ, ಬ್ಯಾಳಚಿಂತೆ ಕೃಷಿ ಪ್ರದೇಶಗಳು. ಎಫ್–03 ಹಳೆ ರ್‍ರಗುಡಿ ಐಪಿ ಮಾರ್ಗದ ಹಳೆ ಗುಡಿ, ಹೊಸ ರ್‍ರಗುಡಿ, ಸಿಂಧುವಾಳ, ಬೆಣಕಲ್ಲು ಕೃಷಿ ಪ್ರದೇಶಗಳು. ಎಫ್–04 ವೇದಾವತಿ ಐಪಿ ಮಾರ್ಗದ ಡಿ.ಎನ್ ಹಳ್ಳಿ, ಮೋಕಾ ಕೃಷಿ ಪ್ರದೇಶಗಳು. ಎಫ್–05 ಸಿಂಧುವಾಳ ಸೋಲಾರ್ ಮಾರ್ಗದ ಹಳೆ ಗುಡಿ, ಹೊಸ ರ್‍ರಗುಡಿ, ಸಿಂಧುವಾಳ, ಬೆಣಕಲ್ಲು, ಗೋನಾಳ್, ಜಾಲಿಹಾಳ್, ಬೊಮ್ಮನಹಾಳ್ ಗ್ರಾಮ. ಎಫ್–06 ಜಾಲಿಹಾಳ್ ಐಪಿ ಮಾರ್ಗದ ಎಂ.ಗೋನಾಳ್, ಜಾಲಿಹಾಳ್, ಬೊಮ್ಮನಹಾಳ್ ಕೃಷಿ ಪ್ರದೇಶಗಳು. 33ಕೆ.ವಿ ಮಾರ್ಗದ 33ಕೆ.ವಿ ಎನ್.ಡಿ.ಪಿ.ಎಲ್ ಸೇರಿದಂತೆ ಮುಂತಾದ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಎಲ್ಲಾ ಕೃಷಿ ಮಾರ್ಗಗಳಲ್ಲಿ ಜೂ.26 ರಂದು ಬೆಳಿಗ್ಗೆ 04 ಗಂಟೆಯಿಂದ ಬೆಳಿಗ್ಗೆ 11 ಗಂಟೆಯವರೆಗೆ ವಿದ್ಯುತ್ ಸರಬರಾಜು ಮಾಡಲಾಗುವುದು. ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಲ್ಲಮ್ಮ ನುಡಿ ಕನ್ನಡ ದಿನ ಪತ್ರಿಕೆಯಲ್ಲಿ ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:
7795896664

# ಡಿಜೆ ಸೌಂಡಿಗೆ ನಿರ್ಬಂಧ, ಡೊಳ್ಳು ಬಾರಿಸುವವರಿಗೆ, ಮತ್ತೆ ಮರು ಜೀವ ಬಂದಂತಾಗಿದೆ:ಸೋನಾರೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 24 : ಜಿಲ್ಲೆಯಲ್ಲಿ ಮದುವೆ ಜಯಂತಿ ಜನ್ಮದಿನ, ಆಚರಣೆಗಳು ಸೇರಿದಂತೆ ಯಾವುದೇ ಕಾರ್ಯಕ್ರಮಗಳು ಇದ್ದರೂ ಡಿಜೆಗಳು ಬಳಕೆ ಮಾಡುವುದು ಸರ್ವೆ ಸಾಮಾನ್ಯವಾಗಿತ್ತು, ಸಾರ್ವಜನಿಕ ಸ್ಥಳಗಳಲ್ಲಿ ಮುಖ್ಯವಾಗಿ ರಸ್ತೆಗಳ ಮೇಲೆಲ್ಲಾ ಡಿಜೆ ಹಾಕಿಕೊಂಡು ತಡರಾತ್ರಿವರೆಗೂ ಕುಣಿವುದು, ಹೆಚ್ಚಿನ ಪ್ರಮಾಣದಲ್ಲಿ ಕಿವಿಗಡಚ್ಚಿಸುವ ಶಬ್ದದಿಂದ ಜನರ ನೆಮ್ಮದಿ ಹಾಳಾಗಿತ್ತು, ರಸ್ತೆ ಸಂಚಾರಕ್ಕೂ ಅಡಚಣೆ ಉಂಟಾಗುತಿತ್ತು.

ಜನರು ಕಿವಿ ಮುಚ್ಚಿಕೊಂಡು ಓಡಾಡುವ ಪರಿಸ್ಥಿತಿ ನಿರ್ಮಿಸುತಿತ್ತು, ಅದರಲ್ಲೂ ಹೃದಯ ಸಂಬಂಧಿ ಕಾಯಿಲೆಯಿಂದ ಬಳಲುತ್ತಿರುವವರು ನವಜಾತ ಶಿಶುಗಳಿಗೆ ತುಂಬಾನೇ ಸಮಸ್ಯೆ ಕಾಡುತಿತ್ತು, ಇದರ ಮೇಲೆ



ನಿರ್ಬಂಧ ಹೇರಬೇಕೆಂದು ಸಾರ್ವಜನಿಕ ಕೂಗಾಗಿತ್ತು, ಸುಮಾರು ದಿನಗಳಿಂದ ಈ ಡಿಜೆ ನಿರ್ಬಂಧನಕ್ಕೆ ಕಡಿವಾಣ ಹಾಕಬೇಕೆಂದು ಸಮಾಜದಲ್ಲಿರುವ ಪ್ರಜ್ಞಾವಂತರ ಒತ್ತಾಯವಾಗಿತ್ತು, ಜನರ ನೆಮ್ಮದಿಗೆ ಭಂಗವನುಂಟು ಮಾಡುವ ಡಿಜೆ ಸೌಂಡಿಗೆ ನಿರ್ಬಂಧ ಹೇರಿರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಾರ್ಯಕ್ಕೆ ಕಲ್ಯಾಣ ಕರ್ನಾಟಕ ಕಲಾವಿದರ ಒಕ್ಕೂಟದ ಅಧ್ಯಕ್ಷರಾದ ವಿಜಯಕುಮಾರ್ ಸೋನಾರೆ ಅವರು ತುಂಬು ಹೃದಯದ ಧನ್ಯವಾದಗಳನ್ನು ತಿಳಿಸಿದ್ದಾರೆ.

ಈ ದಿಟ್ಟ ನಿರ್ಧಾರದಿಂದ ಜಿಲ್ಲೆಯಲ್ಲಿರುವ ಕಲಾವಿದರಿಗೆ ತುಂಬಾನೇ ಅನುಕೂಲವಾಗಲಿದೆ ಮದುವೆ ಮುಂಜಿ ಕಾರ್ಯಕ್ರಮದಲ್ಲಿ ಅದರಲ್ಲಿಯೂ ಹಲಗೆ ಬಾರಿಸುವವರು, ಡೊಳ್ಳು ಬಾರಿಸುವವರಿಗೆ, ಮತ್ತೆ ಮರು ಜೀವಾ ಬಂದಂತಾಗಿದೆ ಎಂದು ಸೋನಾರೆ ಅವರು ತಿಳಿಸಿದ್ದಾರೆ.

# ಪಾಲಕರು ಮಕ್ಕಳಿಗೆ ಆದರ್ಶ ಆಗಲಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 24 : ಪಾಲಕರು ಮಕ್ಕಳಿಗೆ ಆದರ್ಶರಾಗಬೇಕು ಎಂದು ಚಿದಂಬರ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ. ಶಿವಕುಮಾರ ಸ್ವಾಮೀಜಿ ಹೇಳಿದರು.

ನಗರದ ಶ್ರೀಮತಿ ಇಂದಿರಾಬಾಯಿ ಗುರುತಪ್ಪ ಶೆಟಕಾರ್ ಪ್ರೌಢಶಾಲೆಯಲ್ಲಿ ಮಂಗಳವಾರ ನಡೆದ ಚಿದಂಬರ ಚಿತ್ಕಳೆ ತಿಂಗಳ ಕಾರ್ಯಕ್ರಮ ಹಾಗೂ ಪಾಲಕರ ಸಮಾವೇಶದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಮಕ್ಕಳು ಪಾಲಕರನ್ನೇ ಅನುಕರಿಸುತ್ತಾರೆ. ಹೀಗಾಗಿ ಅವರನ್ನು ಉತ್ತಮ ಪ್ರಜೆಗಳನ್ನಾಗಿ ರೂಪಿಸುವಲ್ಲಿ ಪಾಲಕರ ಜವಾಬ್ದಾರಿ ಬಹಳ ಮಹತ್ವದ್ದಾಗಿದೆ ಎಂದು



ತಿಳಿಸಿದರು.

ಮಕ್ಕಳಿಗಿಂತ ಮುಂಚೆಯೇ ಪಾಲಕರು ಟಿವಿ, ಮೊಬೈಲ್ ನೋಡುತ್ತಾ ಕುಳಿತರೆ ಮಕ್ಕಳು ಕೂಡ ಅದನ್ನೇ ಮಾಡುತ್ತಾರೆ. ಮಗು ಶಾಲೆಯಲ್ಲಿ ವಿದ್ಯಾರ್ಜನೆ ಮಾಡಿದರೆ, ಉತ್ತಮ ಹವ್ಯಾಸ ಹಾಗೂ ಒಳ್ಳೆಯತನ ಪಾಲಕರಿಂದ ಕಲಿಯುತ್ತದೆ ಎಂದು ಹೇಳಿದರು.

ಮಕ್ಕಳು ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದರೆ ಸಾಲದು. ಅವರನ್ನು ಸಂಸ್ಕಾರವಂತರನ್ನಾಗಿ ರೂಪಿಸುವುದು ಅವಶ್ಯಕವಾಗಿದೆ ಎಂದು ರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷ ಜ್ಯೋತಿರ್ಮಯಾನಂದ ಸ್ವಾಮಿಜಿ ನುಡಿದರು.

ಮಕ್ಕಳಲ್ಲಿ ದಯೆ, ಕರುಣೆ, ಪ್ರೀತಿ, ನೈತಿಕ ಮೌಲ್ಯಗಳನ್ನು ಬೆಳೆಸಬೇಕಿದೆ ಎಂದು ಹೇಳಿದರು.

ಪ್ರಸ್ತುತ ಮಕ್ಕಳಿಗೆ ವಿದ್ಯೆ ಜತೆಗೆ ಜೀವನ ಮೌಲ್ಯಗಳನ್ನೂ ಹೇಳಿಕೊಡುವುದು ಬಹಳ ಜರೂರಿಯಾಗಿದೆ.

ಸಂಸ್ಥೆಯ ಕಾರ್ಯದರ್ಶಿ ಬಿ.ಜಿ. ಶೆಟಕಾರ್ ತಿಳಿಸಿದರು.

ಪಾಲಕರು ಮಕ್ಕಳ ಮೇಲೆ ನಿಗಾ ಇರಿಸಬೇಕು. ಮಗು ಶಾಲೆಯಲ್ಲಿ ಏನನ್ನು ಕಲಿತಿದೆ ಎನ್ನುವುದನ್ನು ತಿಳಿದುಕೊಳ್ಳಬೇಕು ಎಂದು ಮುಖ್ಯಶಿಕ್ಷಕ ಲಕ್ಷ್ಮಣ ಪೂಜಾರಿ ಹೇಳಿದರು.

ಪ್ರಸ್ತುತ ಮಕ್ಕಳಲ್ಲಿ ತಾಳ್ಮೆ ಇಲ್ಲ. ಆಲಸ್ಯ, ಸಿಡುಕುತನ ಹೆಚ್ಚಾಗಿದೆ. ಗುರುವಿನ ಮೇಲೆ ಭಕ್ತಿ ಇಟ್ಟುಕೊಂಡು ವಿದ್ಯೆ ಕಲಿತಾಗ ಮಾತ್ರ ಜೀವನ ಉಜ್ವಲಗೊಳ್ಳುತ್ತದೆ ಎಂದು ತಿಳಿಸಿದರು.

ಸಂಸ್ಥೆಯ ಆಡಳಿತಾಧಿಕಾರಿ ಡಾ. ಹಾವಗಿರಾವ್ ಮೈಲಾರೆ ಮಾತನಾಡಿದರು. ಪ್ರಾಚಾರ್ಯ ಡಾ. ಚಂದ್ರಪ್ಪ ಭತಮುರ್ಗೆ ಉಪಸ್ಥಿತರಿದ್ದರು. ಬಸವರಾಜ ಮ್ಯಾಗೇರಿ ಸ್ವಾಗತಿಸಿದರು. ನಾಗನಾಥ ಬಿರಾದಾರ ನಿರೂಪಿಸಿದರು. ಗೋಪಾಲ್ ಕುಲಕರ್ಣಿ ವಂದಿಸಿದರು. ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಮಕ್ಕಳ ಪಾಲಕರು ಪಾಲ್ಗೊಂಡಿದ್ದರು.

# ಪ್ರತಿಭೆಗಳಿಗೆ ಪ್ರೋತ್ಸಾಹ ಅಗತ್ಯ:ಡಾ.ಬಸವಲಿಂಗ ಪಟ್ಟದ್ದೇವರು



ಗಡಿಭಾಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಬಡವರು, ದಿನ ದುರ್ಬಲ ವರ್ಗದವರು, ನಿರಾಶ್ರತರಿಗೆ ಅನ್ನ, ಅಕ್ಷರ ಜ್ಞಾನ, ಆಶ್ರಯ ಕಲ್ಪಿಸಿ ಮಾನವೀಯತೆ ಮೆರೆದಿದ್ದಾರೆ. ದಿವ್ಯಾಂಜಲಿ ಕಲಾ ಕ್ಷೇತ್ರದಲ್ಲಿ ಯಶಸ್ಸು ಕಂಡು ರಾಜ್ಯಕ್ಕೆ ಉತ್ತಮ ಕೊಡುಗೆ ನೀಡಲಿ.

– ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.24:ಗಡಿಜಿಲ್ಲೆಬೀದರ್ ನಲ್ಲಿ ಅದ್ಭುತ ಪ್ರತಿಭೆಗಳಿದ್ದಾರೆ ಅವರನ್ನು ಅಂಥವರನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸ ಆಗಬೇಕಿದೆ ಎಂದು ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ ಝೀ ಕನ್ನಡ ವಾಹಿನಿಯ ಮಹಾನಟಿ ಸ್ಪರ್ಧೆ 2ರ ಸ್ಪರ್ಧೆಗೆ ಆಯ್ಕೆಯಾಗಿರುವ ದಿವ್ಯಾಂಜಲಿ ಅವರನ್ನು ಆಶೀರ್ವದಿಸಿ ಅವರು ಮಾತನಾಡಿದರು.

ನಮ್ಮ ಸಂಸ್ಥೆಯಲ್ಲಿ ಅನ್ನ, ಅಕ್ಷರ, ಆಶ್ರಯ ಪಡೆದಿರುವ ದಿವ್ಯಾಂಜಲಿ ಝೀ ಕನ್ನಡ ನಡೆಸಿ ಕೊಡುವ ಪ್ರತಿಷ್ಠಿತ ಮಹಾನಟಿ ಸ್ಪರ್ಧೆಗೆ ಆಯ್ಕೆ ಆಗಿರುವುದು ಹೆಮ್ಮೆ ತರಿಸಿದೆ.

ಮೊದಲಿನಿಂದಲೂ ದಿವ್ಯಾಂಜಲಿಗೆ ನಾಟಕ, ಕಲೆಯಲ್ಲಿ ಆಸಕ್ತಿ ಹೊಂದಿದ್ದಳು. ಆರನೆಯ ತರಗತಿಯಲ್ಲಿ ಓದುತ್ತಿರುವಾಗಲೇ ಭಗತಸಿಂಗ್ ಪಾತ್ರ ನಿರ್ವಹಿಸಿ ಆ ಪಾತ್ರಕ್ಕೆ ಜೀವ ತುಂಬಿದ್ದಳು.

ಅಂದೆ ಅವಳಲ್ಲಿನ ಪ್ರತಿಭೆ ಗುರುತಿಸಿದೆ. ಪಿಯುಸಿ ಪೂರ್ಣಗೊಳ್ಳುತ್ತಲೇ ನಾಟಕ, ಕಲೆ ತರಬೇತಿಗಾಗಿ ಸಾಣೇಹಳ್ಳಿಯ ಶ್ರೀ ಶಿವಕುಮಾರ ಕಲಾಸಂಘ ನಡೆಸುವ ಶಿವಕುಮಾರ ರಂಗಪ್ರಯೋಗ ಶಾಲೆಯ ರಂಗ ಡಿಪ್ಲೊಮಾ ಕೋರ್ಸ್ಗೆ ಸೇರಿಸಲಾಯಿತು.

ಅಲ್ಲಿ ಎರಡು ವರ್ಷ ಉತ್ತಮ ತರಬೇತಿ ಪಡೆದು ಮಹಾನಟಿ ಸ್ಪರ್ಧೆಗೆ ಆಯ್ಕೆಯಾಗಿ ತನ್ನ ಅಭಿಯನದ ಮೂಲಕ ರಾಜ್ಯದ ಗಮನ ಸೆಳೆದಿದ್ದಾಳೆ. ಮುಂದೆಯೂ ಎಲ್ಲ ಹಂತದ ಸುತ್ತುಗಳಲ್ಲಿ ಉತ್ತಮ ಪ್ರದರ್ಶನ ತೋರಿ ವಿಜಯಶಾಲಿ ಆಗಲಿ ಎಂದು ಹಾರೈಸಿದರು.

ನೇತೃತ್ವವಹಿಸಿದ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಸಮಾಜದ ಹಿತಕ್ಕಾಗಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ತಮ್ಮ ಬದುಕು ಮುಡಿಪಾಗಿಟ್ಟಿದ್ದಾರೆ.

ಧರ್ಮ ಪ್ರಚಾರ ಪ್ರಸಾರದ ಜತೆಗೆ ಶಿಕ್ಷಣ, ಸಾಹಿತ್ಯ, ಕಲೆ ಸೇರಿ ಎಲ್ಲ ಕ್ಷೇತ್ರಗಳಲ್ಲಿ ಅದ್ಭುತ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತ ಪಡಿಸಿದ್ದರು.

ಈ ಸಂದರ್ಭದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ, ಆಡಳಿತಾಧಿಕಾರಿ ಮೋಹನ ರೆಡ್ಡಿ, ಎಸ್ಸೆಸ್ಸೆಲ್ಸಿ ಸಂಯೋಜಕ ಪ್ರವೀಣ ಖಂಡಾಳೆ, ಪ್ರೌಢ ಶಾಲೆಯ ಮುಖ್ಯಗುರು ಮಹೇಶ ಮಹಾರಾಜ, ಮಹೇಶ ಕುಲಕರ್ಣಿ ಸೇರಿದಂತೆ ಮುಂತಾದವರು ಇದ್ದರು. ಲಕ್ಷ ??ಣ ಮೇತ್ರೆ ನಿರೂಪಿಸಿ, ವಂದಿಸಿದರು.

# ಯೋಗವು ಪರಿವರ್ತನಾತ್ಮಕ ಅಭ್ಯಾಸವಾಗಿದೆ : ಮನೋಜ ಹಿರೇಮಠ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.24: ಯೋಗವು ಪರಿವರ್ತನಾತ್ಮಕ ಅಭ್ಯಾಸ ವಾಗಿದ್ದು, ಇದು ಮನಸ್ಸು ಮತ್ತು ದೇಹದ ಸಾಮರಸ್ಯ, ಆಲೋಚನೆ ಮತ್ತು ಕ್ರಿಯೆಯ ನಡುವಿನ ಸಮತೋಲನ ಮತ್ತು ಸಂಯಮ ಮತ್ತು ತೃಪ್ತಿಯ ಏಕತೆಯನ್ನು ಪ್ರತಿನಿಧಿಸುತ್ತದೆ ಎಂದು ಮುಖ್ಯಶಿಕ್ಷಕ ಮನೋಜಕುಮಾರ ಹಿರೇಮಠ ಹೇಳಿದರು. ಪಟ್ಟಣದ ಶಾಸ್ತ್ರಿಯ ಶಿಕ್ಷಣ ಸಂಸ್ಥೆ ಸಹಯೋಗದಲ್ಲಿ ನಡೆಯುತ್ತಿರುವ ಭಾಗಿರಥಿ ಪಬ್ಲಿಕ್ ಶಾಲೆಯಲ್ಲಿ ಶನಿವಾರ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಯೋಗ ದೇಹ ಮನಸ್ಸು, ಆತ್ಮವನ್ನು ಸಂಯೋಜಿಸುತ್ತದೆ. ನಮ್ಮ ಕಾರ್ಯನಿರತ ಜೀವನಕ್ಕೆ ಶಾಂತಿಯನ್ನು ತರುವ ಆರೋಗ್ಯ ಮತ್ತು ಯೋಗಕ್ಷೇಮಕ್ಕೆ ಸಮಗ್ರ ವಿಧಾನವನ್ನು ನೀಡುತ್ತದೆ. ಅದರ ರೂಪಾಂತರ ಶಕ್ತಿಯನ್ನು ನಾವು ಈ ಜ.21 ರಂದು ವಿಶೇಷ ದಿನವೆಂದು ಆಚರಿಸುತ್ತೇವೆ ಎಂದರು.

ವಿಜಯಕುಮಾರ ಬನವಾಸೆ, ಸಂಗಮೇಶ ಬಿರಾದಾರ, ಉಮಾಕಾಂತ ಹಿರೇಮಠ ಮಾತನಾಡಿದರು. ಶಿಕ್ಷಕ ಸಿಬ್ಬಂದಿ ಶ್ರೀದೇವಿ ಸೋನಕಾಂಬಳೆ, ಸಂಗೀತಾ ಕಾಂಬಳೆ, ಶೀತಲ ನಂದುಕುಮಾರ, ದೀಪಮಾಲಾ ಸೂರ್ಯವಂಶಿ, ರಾಜಶ್ರೀ ಸಿರಗಿರೆ, ಅಂಜಲಿ ಕಾಂಬಳೆ, ಈಶ್ವರಿ, ಅಂಬಿಕಾ ಸಂಗಮೇಶ, ಮಲ್ಲಿಕಾರ್ಜುನ ಮೇತ್ರೆ ಹಾಗೂ ಮಕ್ಕಳು ಇದ್ದರು.

# ಬೆಳೆ ವಿಮೆ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಲು ರೈತಬಾಂಧವರಲ್ಲಿ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 24 : ಬೆಳೆ ನಷ್ಟ, ಬೆಳೆ ವಿಫಲಗೊಂಡ ಸಂದರ್ಭದಲ್ಲಿ ನಷ್ಟಹೊಂದಿದ ರೈತರ ಕೈಹಿಡಿಯಲು ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದ ಸಹಭಾಗೀತ್ವದಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯನ್ನು ಅನುಷ್ಠಾನಗೊಳಿಸಿದೆ. ಪ್ರಧಾನಮಂತ್ರಿ ಫಸಲ್ ಭೀಮಾ (ವಿಮಾ) ಯೋಜನೆಯಡಿ ವಿಮೆ ಕಂತು ಕಟ್ಟಿದ್ದ ರೈತರಿಗೆ ಬೆಳೆನಷ್ಟ ಮತ್ತು ಪ್ರಕೃತಿ ವಿಕೋಪದಡಿ ಬೆಳೆ ನಷ್ಟ ಆದರೆ ಬೆಳೆ ವಿಮೆ ಮಾಡಿಸಿರುವ ರೈತರಿಗೆ ಎಕರೆವಾರು ವಿಮಾ ಮೊತ್ತವನ್ನು ಪಾವತಿ ಮಾಡುವ ಯೋಜನೆ ಇದಾಗಿರುವುದರಿಂದ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಈ ಯೋಜನೆಯಲ್ಲಿ ಭಾಗವಹಿಸಿ ಲಾಭ ಪಡೆಯಬಹುದಾಗಿದೆ ಎಂದು ಬಸವಕಲ್ಯಾಣ ಸಹಾಯಕ ಕೃಷಿ ನಿರ್ದೇಶಕರಾದ ಗೌತಮ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯನ್ನು ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಮುಖ್ಯ ಬೆಳೆಗಳಿಗೆ ಗ್ರಾಮ ಪಂಚಾಯತಿ/ನಗರ ಸ್ಥಳೀಯ ಸಂಸ್ಥೆ ಮಟ್ಟದಲ್ಲಿ ತೊಗರಿ (ಮಳೆಯಾಶ್ರಿತ(ಮ.ಆ)) ಮತ್ತು ಸೋಯಾಅವರೆ (ಮ.ಆ) ಬೆಳೆಗಳು ಮತ್ತು ಇತರೆ ಬೆಳೆಗಳಾದ ಹೆಸರು (ಮ.ಆ), ಸೂರ್ಯಕಾಂತಿ (ಮ.ಆ), ಉದ್ದು (ಮ.ಆ), ಶೇಂಗಾ (ಮ.ಆ), ಜೋಳ (ಮ.ಆ), ಎಳ್ಳು (ಮ.ಆ), ಸಜ್ಜೆ (ಮ.ಆ), ಭತ್ತ (ನೀ ಮತ್ತು ಮ.ಆ) ಬೆಳೆಗಳನ್ನು ಬಸವಕಲ್ಯಾಣ ಹಾಗೂ ಹುಲಸೂರ ತಾಲ್ಲೂಕುಗಳಿಗೆ ನಿಗದಿಪಡಿಸಿ, ಹೋಬಳಿ ಮಟ್ಟಕ್ಕೆ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ.

ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಯೂನಿವರ್ಸಲ್ ಸೋಂಪೊಜನರಲ್ ಇನ್ಶ್ಯೂರೆನ್ಸ್ ಕಂಪನಿಯನ್ನು ನಿಗದಿಪಡಿಸಲಾಗಿದೆ. ತೋಗರಿ (ಮ.ಆ), ಸೋಯಾಅವರೆ (ಮ.ಆ), ಉದ್ದು (ಮ.ಆ), ಹೆಸರು (ಮ.ಆ), ನೆಲಗಡಲೆ (ಮ.ಆ.) ಭತ್ತ (ಮ.ಆ), ಭತ್ತ (ನೀ, ಸಜ್ಜೆ (ಮ.ಆ), ಎಳ್ಳು (ಮ.ಆ), ಜೋಳ (ಮ.ಆ) ಬೆಳೆಗಳಿಗೆ ವಿಮಾ ಕಂತು ತುಂಬಲು ದಿನಾಂಕ: 31–07–2025 ಹಾಗೂ ಸೂರ್ಯಕಾಂತಿ (ಮ.ಆ) ಬೆಳೆಗೆ ವಿಮಾ ಕಂತು ತುಂಬಲು ದಿನಾಂಕ: 16–08–2025 ಕೊನೆಯ ದಿನಾಂಕವಾಗಿರುತ್ತದೆ.

ಬೆಳೆ ಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ/ಆಧಾರ ಸಂಖ್ಯೆ ಜೊಡಿಸಿದ ಬ್ಯಾಂಕ್ ಖಾತೆ, ಪಾಸ ಪುಸ್ತಕ, ಕಂದಾಯ ರಶೀದಿ ಮತ್ತು ಆಧಾರ ಕಾರ್ಡ್ನ ಪ್ರತಿಯನ್ನು ಸಂಬಂಧಿಸಿದ ಬ್ಯಾಂಕ, ಗ್ರಾಮಒನ್, ಕರ್ನಾಟಕ ಒನ್ ಅಥವಾ ಸಿ.ಎಸ್.ಸಿ. ಕೇಂದ್ರಗಳಿಗೆ ಒದಗಿಸಿ ನೋಂದಣಿ ಮಾಡಿಸಬಹುದು. ಒಟ್ಟಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ಬೆಳೆ ವಿಮಾ ಯೋಜನೆ ರೈತ ಸಮುದಾಯಕ್ಕೆ ಉಪಯುಕ್ತವಾದ ಯೋಜನೆಯಾಗಿದೆ. ಹೆಚ್ಚಿನ ವಿವರಗಳಿಗೆ ಸ್ಥಳೀಯ ವಾಣಿಜ್ಯ/ಗ್ರಾಮೀಣ/ಸಹಕಾರಿ/ಬ್ಯಾಂಕುಗಳನ್ನು/ಸಾರ್ವಜನಿಕ ಸೇವಾ ಕೇಂದ್ರ ಅಥವಾ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರ ಅಥವಾ ಸಂಬಂಧಪಟ್ಟ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಒತ್ತಡ ಬದುಕು ನಿವಾರಣೆಗೆ ಯೋಗ ಸಹಕಾರಿ:ನ್ಯಾ.ವಿಜಯಕುಮಾರ ಎಂ.ಆನಂದಶೆಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 24 : ಒತ್ತಡ ಬದುಕು ನಿವಾರಣೆಗೆ ಯೋಗ ಸಹಕಾರಿಯಾಗಿರುವುದರಿಂದ ಎಲ್ಲರೂ ದಿನನಿತ್ಯ ಯೋಗ ಮಾಡಬೇಕೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ವಿಜಯಕುಮಾರ ಎಂ ಆನಂದಶೆಟ್ಟಿ ಹೇಳಿದರು.

ಅವರು ಇತ್ತೀಚಿಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೀದರ, ಜಿಲ್ಲಾ ನ್ಯಾಯಾಂಗ ಇಲಾಖೆ ಹಾಗೂ ಜಿಲ್ಲಾ ವಕೀಲರ ಸಂಘ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ನ್ಯಾಯಾಲಯ ಆವರಣ ಬೀದರದಲ್ಲಿ ಹಮ್ಮಿಕೊಂಡಿದ್ದ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಯೋಗವನ್ನು ಇದೀನ ಮಾತ್ರ ಸಿಮಿತವಾಗಿಡದೆ ದಿನನಿತ್ಯ ಜೀವನದಲ್ಲಿ ಅಳವಡಿಸಿಕೊಂಡು ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕು. ದೇಹದ ಸರ್ವ ಅಂಗಗಳು ಕೆಲಸಕ್ಕೆ ವ್ಯಾಯಾಮ ಬಹುಮುಖ್ಯವಾಗಿರುವುದರಿಂದ ಎಲ್ಲರೂ ಯೋಗಕ್ಕೆ ಒತ್ತು ನೀಡಬೇಕೆಂದರು.

ಈ ಸಂದರ್ಭದಲ್ಲಿ ಬೀದರ ತಾಲೂಕಿನ ಎಲ್ಲಾ ನ್ಯಾಯಾಧೀಶರು, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರು ಮತ್ತು ವಕೀಲರು, ಜಿಲ್ಲಾ ನ್ಯಾಯಾಂಗ ಇಲಾಖೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸಿಬ್ಬಂಧಿ ವರ್ಗದವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಜೂ.30 ರಂದು ತಾಪಂ ಕೆಡಿಪಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 24 : ಬೀದರ ದಕ್ಷಿಣ ಶಾಸಕರಾದ ಡಾ.ಶೈಲೇಂದ್ರ ಕೆ.ಬೆಲ್ದಾಳೆ ಅವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಅಬಿವೃದ್ಧಿ ಕಾರ್ಯಕ್ರಮಗಳ (ಕೆಡಿಪಿ) ತ್ರೈಮಾಸಿಕ ಸಭೆಯನ್ನು ಜೂನ್.30 ರಂದು ಬೆಳಿಗ್ಗೆ 11 ಗಂಟೆಗೆ ಬೀದರ ತಾಲ್ಲೂಕ ಪಂಚಾಯತ ಸಭಾಂಗಣದಲ್ಲಿ ನಿಗದಿಪಡಿಸಲಾಗಿದೆ ಎಂದು ಬೀದರ ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕಾರಣ ಸದರಿ ಸಭೆಗೆ ಎಲ್ಲಾ ತಾಲ್ಲೂಕು ಮಟ್ಟದ ಅನುಷ್ಠಾನಾಧಿಕಾರಿಗಳು ತಮ್ಮ ಇಲಾಖೆಗೆ ಸಂಬಂಧಿಸಿದ ಮೇ.2025ರ ಅಂತ್ಯದವರೆಗಿನ ಪ್ರಗತಿ ವರದಿಯೊಂದಿಗೆ ಖುದ್ದಾಗಿ ಸಭೆಗೆ ಹಾಜರಾಗಬೇಕೆಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀಕಾಂತ ಚವ್ಹಾಣ್ ರ ಅಮಾನತಿಗೆ ಜಾನಸನ್ ಘೋಡೆ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 24 : ಅವ್ಯವಹಾರದ ಹಿನ್ನೆಲೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಲೆಕ್ಕಾಧಿಕಾರಿ ಶ್ರೀಕಾಂತ ವಿ. ಹಾಗೂ ಆಡಳಿತ ಸಹಾಯಕ ನಿರ್ದೇಶಕ ಜಯಪ್ರಕಾಶ್ ಚವ್ಹಾಣ್ ಅವರನ್ನು ಸೇವೆಯಿಂದ ಅಮಾನತುಗೊಳಿಸಬೇಕು ಎಂದು ಕರ್ನಾಟಕ ಪತ್ರಕರ್ತರ ಧ್ವನಿ ಸಂಘಟನೆಯ ರಾಜ್ಯ ಕಾರ್ಯದರ್ಶಿ ಜಾನಸನ್ ಘೋಡೆ ಆಗ್ರಹಿಸಿದ್ದಾರೆ.

ಅವರು ಈ ಕುರಿತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ



ಪ್ರಿಯಾಂಕ್ ಖರ್ಗೆ ಅವರಿಗೆ ಬರೆದ ಮನವಿ ಪತ್ರವನ್ನು ನಗರದಲ್ಲಿ ಮಂಗಳವಾರ ಜಿಲ್ಲಾಧಿಕಾರಿ ಅವರಿಗೆ ಸಲ್ಲಿಸಿದ್ದಾರೆ.

ಇಬ್ಬರೂ ಅಧಿಕಾರಿಗಳು ಹಲವು ವರ್ಷಗಳಿಂದ ಬೀದರನಲ್ಲೇ ಬಿಡಾರ ಹೂಡಿದ್ದು, ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆ. ಸಾರ್ವಜನಿಕರಿಗೆ ತೊಂದ–ರೆ ಕೊಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಮೇಲಧಿಕಾರಿಗಳು ಇವರ ವಿರುದ್ಧ ವಿಚಾರಣೆಗೆ ನೇಮಿಸಿದ ಅಧಿಕಾರಿಗಳು ಇವರಿಂದ ದುಡ್ಡು ಪಡೆದು ಮನಬಂದಂತೆ ವರದಿ ಸಲ್ಲಿಸಿದ್ದಾರೆ ಎಂದು

ದೂರಿದ್ದಾರೆ. ಕೂಡಲೇ ಅಧಿಕಾರಿಗಳನ್ನು ಅಮಾನತುಗೊಳಿಸಬೇಕು. ಇಲ್ಲವಾದಲ್ಲಿ ಹೈಕೋರ್ಟ್ ಮೊರೆ ಹೋಗಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.

## ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಗ್ರಾಮ ಪಂಚಾಯಿತಿ ಸದಸ್ಯರ ಮಹಾ ಒಕ್ಕೂಟದ ವತಿಯಿಂದ ಮನವಿ




ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್: ತಾಲೂಕಿನ ಚಿನ್ನಾಕಾರ ಗ್ರಾಮ ಪಂಚಾಯತ ಸೇರಿದಂತೆ18ಗ್ರಾಮಪಂಚಾಯತಿಗಳ ಅಧಿಕಾರಿಗಳು ಪ್ರತಿಯೊಂದು ಕೆಲಸಕ್ಕೂ ಲಂಚ ಪಡೆಯುವ ಭ್ರಷ್ಟಅಧಿಕಾರಿಗಳ ವಿರುದ್ಧ ಕಠಿಣ ಕ್ರಮಕ್ಕೆಆಗ್ರಹಿಸಿ ಕ.ರಾ.ಗ್ರಾ.ಪಂ.ಸ.ಮ. ಒಕ್ಕೂಟದ ಅಧ್ಯಕ್ಷ ಸುರೇಶ ಚಿನ್ನಾರಾಠೋಡ ತಾ. ಪಂ. ಕಾರ್ಯನಿರ್ವಾಹಕ ಅಧಿಕಾರಿ ಅಂಬರೀಷ ಪಾಟೀಲ ಅವರಿಗೆ ಮನವಿ ನೀಡಿದರು.

ತಾಲೂಕ ಪಂಚಾಯತ್ ಆವರಣದಲ್ಲಿ ಮನವಿ ನೀಡಿ ಮಾತನಾಡಿದ ಅವರು, ಗ್ರಾಮ ಪಂಚಾಯತ ಪಿಡಿಓ ಮತ್ತು ಎಲ್ಲಾ ಸಿಬ್ಬಂದಿ ವರ್ಗಾದವರ ಬೇಡಿಕೆ ಮತ್ತು ಲಂಚ ಪಡೆಯುವ ಪ್ರಯುಕ್ತ ಎಲ್ಲಾ ಕಾಮಗಾರಿಗಳು ಕುಂಠಿತವಾಗಿದೆ ಎಂದು ಆರೋಪ ಮಾಡಿದರು.

ಚಿನ್ನಕಾರ ಗ್ರಾಮ ಪಂಚಾಯತ್ ನಲ್ಲಿ ಪ್ರಧಾನ ಮಂತ್ರಿ ಆವಾಸ ಯೋಜನೆಯವಸತಿಯೋಜನೆಯಲ್ಲಿ ಪ್ರತಿ ಮನೆಗೆ 3000 ರೂಪಾಯಿ ಲಂಚದ ಬೇಡಿಕೆಯಿದೆ ರೈತರಿಂದ ಜಮೀನಿನ 9–11 ಮಾಡಲು 12000 ರೂಪಾಯಿ ಲಂಚದ ಬೇಡಿಕೆ.

ಚಿನ್ನಾಕಾರ ಸೇರಿದಂತೆ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ 15 ನೇ ಹಣಕಾಸು ಕಾಮಗಾರಿ ಮಾಡಿದರೆ ಪಿಡಿಓ–5% ಹಣ, ಅಧ್ಯಕ್ಷರು–5%ಹಣ, ಎಇ–5%ಹಣ, ಎಇಇ–2%ಹಣ, ಕಂಪ್ಯೂಟರ್ ನಿರ್ವಾಹಕ 2%ಹಣ, ಅಂ–ದಾಜು ಮಾಡುವವರು 1000 ರೂಪಾಯಿ ಹಣ, GSTMB ಮಾಡುವವರು 1000 ರೂಪಾಯಿ, GPS ಮಾಡುವವರು 1000 ರೂಪಾಯಿ ಲಂಚದ ಬೇಡಿಕೆ ಇಡುತ್ತಿದ್ದಾರೆ.

ಯಾವುದೇ ಸಭೆ ಮಾಡದೇ ಚಿನ್ನಕಾರ ಗ್ರಾಮ ಪಂಚಾಯತಿಯಲ್ಲಿ ಒಂದೆ ತಿಂಗಳನಲ್ಲಿ ಸುಮಾರು 5–6 ಲಕ್ಷಗಳು ಬಿಲ್ ಪಾವತಿ ಮಾಡುತ್ತಾರೆಎಂದುಆರೋಪಿಸಿದರು.

ನೀರಿನ ಸಮಸ್ಯೆಗೆ ಪರಿಹಾರ ಕಲ್ಪಿಸಿದ ರೈತ ಜನರಿಗೆ (ತಮ್ಮ ಬೋರವೆಲ್ ಮುಖಾಂತರ) 1 ವರ್ಷ ಕಳೆದರೂ ಅವರಿಗೆ ಬಿಲ್ ಪಾವತಿ ಮಾಡಿರುವುದಿಲ್ಲ.

ನರೇಗಾ ಕಾಮಗಾರಿಯ ಕುರಿತು ಯಾವುದೇ ಒಂದು ಪಂಚಾಯತಿಯಲ್ಲಿ ಸಭೆ ಕರೆದಿಲ್ಲ ಹಾಗೂ ಕಾಮಗಾರಿ ಮುಗಿದು 6 ತಿಂಗಳು ಕಳೆದರೂ ಪಾವತಿ ಇಲ್ಲ.

ಚಿನ್ನಕಾರಗ್ರಾಮಪಂಚಾಯತಿಯಲ್ಲಿ ಎಲ್ಲಾ ಸದಸ್ಯರಿಗೆ ಒಂದೇ ರೀತಿಯ ಗೌರವದಿಂದ ನೋಡುವುದಿಲ್ಲ, ಬದಲಾಗಿ ಕೆಲವರಿಗೆ ಏಕವಚನ ಶಬ್ದ ಬಳಕೆ ಮಾಡುತ್ತಿದ್ದಾರೆ.

ಸರಿಯಾಗಿ ಸಮಯಕ್ಕೆ ಗ್ರಾಮ ಪಂಚಾಯತ ಗೌರವಧನ ಪಾವತಿ ಮಾಡುತ್ತಿಲ್ಲ ಎಂದು ಅವರು ಆರೋಪಿಸಿ ಇವುಗಳ ಸುಧಾರಣೆಗೆ ಆಗ್ರಹಮಾಡಿ10 ದಿನಗಳಲ್ಲಿಗಡುವು ನೀಡಿದ್ದಾರೆ, ಪ್ರತಿಕ್ರಿಯಿಸದಿದ್ದಲ್ಲಿ ಜಿಲ್ಲಾ ಪಂಚಾಯತ್ ಮುತ್ತಿಗೆ ಹಾಕಲಾಗುವುದು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಮಹಾ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಆನಂದ ಭಜಂತ್ರಿ, ಭೀಮರಾಯ ಎಲ್ಹೇರಿ, ಹಣಮಂತ, ಆನಂದ ವಿಶ್ವಕರ್ಮ, ನಾರಾಯಣ, ಆನಂದ ಎಂಪಾಡ ಸೇರಿದಂತೆ ವಿವಿಧ ಗ್ರಾಮದ ಸದಸ್ಯರು ಹಾಜರಿದ್ದರು.

ಪ್ರಮುಖ ನಗರ–ಪಟ್ಟಣಗಳಲ್ಲಿ ಖಾಸಗಿ ವಾಹನಗಳ ನಿಲುಗಡೆಗೆ

## ಸ್ಥಳ ನಿಯೋಜನೆ ಮಾಡಲು ಚಾಲಕರ ಒಕ್ಕೂಟ ನಿಯೋಗ ಸಚಿವರಲ್ಲಿ ಮನವಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜಿಲ್ಲೆಯ ಎಲ್ಲಾ ತಾಲ್ಲೂಕಾ ಕೇಂದ್ರಗಳಲ್ಲಿ, ಜಿಲ್ಲಾ ಕೇಂದ್ರದಲ್ಲಿ ಹಾಗೂ ಕೆಲವು ಪಟ್ಟಣ ಕೇಂದ್ರಗಳಲ್ಲಿ ಹಲವಾರು ವರ್ಷಗಳಿಂದ ಸಾರ್ವಜನಿಕರ ಸೇವೆಯಲ್ಲಿ ತೊಡಗಿರುವ ಖಾಸಗಿ ವಾಹನ ಚಾಲಕರಿಗೆ ತಮ್ಮ ವಾಹನಗಳನ್ನು ನಿಲ್ಲಿಸಲು(ಪಾರ್ಕಿಂಗ್) ಸೂಕ್ತಸ್ಥಳ ನಿಯೋಜನೆಮಾಡಿಲ್ಲ, ಪರಿಣಾಮ ತೊಂದರೆ ಅನುಭವಿಸುತ್ತಿದ್ದೇವೆ, ಸಮಸ್ಯೆಪರಿಹಾರಮಾಡಬೇಕೆಂದು ಕರ್ನಾಟಕಚಾಲಕರಒಕ್ಕೂಟ(ರಿ) ಜಿಲ್ಲಾಘಟಕದ ಅಧ್ಯಕ್ಷ ಬಸವರಾಜ ಎಂ.ಚಟ್ನಳ್ಳಿ ನೇತೃತ್ವದಲ್ಲಿ ನಿಯೋಗ ಮಂಗಳವಾರ ನಗರದ ಪ್ರವಾಸಿ ಮಂದಿರದಲ್ಲಿ ರಾಜ್ಯ ಸಣ್ಣಕೈಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪೂರ ಅವರನ್ನು ಭೇಟಿಯಾಗಿ ಮನವಿ ಪತ್ರ ಸಲ್ಲಿಸಿ, ಸಮಸ್ಯೆಗಳನ್ನು ಪ್ರಸ್ತಾಪಿಸಿದರು.

ಈ ಮೊದಲು ಶಹಾಪೂರ ನಗರದಲ್ಲಿ ಈ ಹಿಂದೆ ಚಾಲಕರು ಪಾರ್ಕಿಂಗ್ ಸ್ಥಳ ಗುರುತಿಸಬೇಕೆಂದು ಮನವಿ ಮಾಡಿದ ಹಿನ್ನೆಲೆಯಲ್ಲಿ ಈಗಾಗಲೇ ಶಹಾಪೂರದ ಹೊಸ ಬಸ್ ನಿಲ್ದಾಣ ಪಕ್ಕದಲ್ಲಿ ವಾಹನಗಳ ಪಾರ್ಕಿಂಗ್ ನಿಲುಗಡೆಗೆ ಸ್ಥಳ ಗುರುತಿಸಲಾಗಿದೆ, ಬೇರೆ ಕಡೆ ಆ ಭಾಗದ ಚುನಾಯಿತ ಜನಪ್ರತಿನಿಧಿಗಳನ್ನು ಹಾಗೂ ಅಧಿಕಾರಿಗಳನ್ನು ಭೇಟಿಯಾಗಿ ವಾಹನಗಳ ಪಾರ್ಕಿಂಗ್ ಸ್ಥಳ ಗುರುತಿಸಿಕೊಳ್ಳಿ, ನಾನು ಕೂಡ ಅವರಿಗೆ ಕ್ರಮ ಕೈಗೊಳ್ಳಲು ಸೂಚಿಸುತ್ತೇನೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಸರಡ್ಡಿ ಪಾಟೀಲ್ ಅನಪೂರ, ಮುಖಂಡರಾದ ಸಿದ್ಲಿಂಗರಡ್ಡಿ ಉಳ್ಳೆಸೂಗೂರ, ಚಿದಾನಂದಪ್ಪ ಕಾಳೆಬೆಳಗುಂದಿ, ಭೀಮರಾಯ ಠಾಣಾಗುಂದಿ, ಶಾಮಸನ್ ಮಾಳಿಕೇರಿ, ಚಂದ್ರು ಕಂದಳ್ಳಿ, ಬಾಬುಗೌಡ ಮಾಚನೂರ, ವಾಹನ ಚಾಲಕರ ಒಕ್ಕೂಟ–ದ ಜಿಲ್ಲಾ ಸಂಘದ ಪ್ರಧಾನ ಕಾರ್ಯದರ್ಶಿ ರಾಘವೇಂದ್ರ, ಮಲ್ಲಿಕಾರ್ಜುನ ಸಾಹುಕಾರ, ಬಸ್ಸುಗೌಡ ಹಿರೇಗೌಡ, ಪ್ರಭು, ಹೊನ್ನಪ್ಪ ಜಂಗಳಿ ಶಹಾಪೂರ, ದೇವು ಪಾಟೀಲ್ ಸುರಪುರ. ನಿಂಗಾರಡ್ಡಿ ಗುರುಮಿಠಕಲ್, ವೆಂಕಟೇಶ ನಾಯಕ ಹುಣಸಗಿ, ಸಾಬು ನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಯಾದಗಿರಿ ತಾಲೂಕಿನಲ್ಲಿ ಎಗ್ಗಿಲ್ಲದೆ ನಡೆಯುತ್ತಿರುವ ಅಕ್ರಮ ಮರಳುಗಾರಿಕೆ..!!!

## ಜಿಲ್ಲೆಯಲ್ಲಿ ಕೃಷ್ಣ ಮತ್ತು ಭೀಮ ನದಿಗಳಲ್ಲಿ ಮರಳುಗಾರಿಕೆ ಬಂದಾದ ತಕ್ಷಣ ಗ್ರಾಮಗಳಲ್ಲಿರುವ ಹಳ್ಳದ ಕಡೆ ಮುಖ........!

(ಎಂ.ರಫೀಕ್ ಪಟೇಲ್

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ತಾಲೂಕಿನ ಹತ್ತಿಕುಣಿ ಡ್ಯಾಮ್ ನಿಂದ ಬರುವ ಯಡ್ಡಳ್ಳಿ ಹೊರುಂಚ ಗ್ರಾಮದ ಹಳ್ಳದಲ್ಲಿ ರಾತ್ರಿ ಹಾಗಲು ಎನ್ನದೇ ಅಕ್ರಮ ಮರಳುಗಾರಿಕೆ ನಡೀತಾ ಇದ್ರು ಕಂದಾಯ ಇಲಾಖೆಯ ಅಧಿಕಾರಿಗಳು ಮೌನಕ್ಕೆ ಶರಣಾಗಿರುವುದು ಹಲವು ಅನುಮಾನಕ್ಕೆ ಎಡೆ ಮಾಡಿಕೊಟ್ಟದೆ.



> ಹೆಸರು ಹೇಳಲು ಇಚ್ಚಿಸದ ಯಡ್ಡಳ್ಳಿ ಗ್ರಾಮ ಜನರು ರಾತ್ರಿಯಲ್ಲ ಟ್ಯಾಕ್ಟರ್ ಮತ್ತು ಟಿಪ್ಪರ್ಗಳ ಶಬ್ದದಿಂದ ಬೇಸತ್ತು ಹೋಗಿದ್ದೇವೆ ಟ್ಯಾಕ್ಟರ್ ದವರಿಗೆ ಏನಾದರೂ ಪ್ರಶ್ನೆ ಮಾಡಲು ಹೋದರೆ ನಮ್ಮ ಹಿಂದೆ ಪ್ರಭಾವಿಗಳು ಇದ್ದಾರೆ ಎಂದು ಬೆದರಿಕೆ ಹಾಕುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ, ಯಡ್ಡಳ್ಳಿ ಗ್ರಾಮಕ್ಕೆ ಪೊಲೀಸ್ ಅಧಿಕಾರಿಗಳು ಮತ್ತು ಗಣಿ ಭೂ ವಿಜ್ಞಾನ ಅಧಿಕಾರಿಗಳು ಹಲವು ಬಾರಿ ಯಡ್ಡಳ್ಳಿ ಗ್ರಾಮಕ್ಕೆ ಬಂದರು ಯಾವುದೇ ಕ್ರಮ ಕೈಗೊಂಡಿಲ್ಲ ಅಧಿಕಾರಿಗಳು ಸಹ ಇವರ ಜೊತೆ ಕೈ ಜೋಡಿಸಿದ್ದಾರೆ ಎಂದು ಅನುಮಾನಗಳು ವ್ಯಕ್ತಪಡಿಸುತ್ತಿದ್ದಾರೆ.

ಯಡ್ಡಳ್ಳಿ ಹೊರುಂಚ ಗ್ರಾಮದ ಪಕ್ಕದಲ್ಲಿ ಹರಿಯುತ್ತಿರುವ ಹಳ್ಳ ಹಾಗೂ ಪಟ್ಟಾ ಜಮೀನಿನಲ್ಲಿ ಹದುಗಿರುವಮರಳನ್ನುಅಕ್ರಮವಾಗಿ ಎತ್ತಿ ಟ್ರ್ಯಾಕ್ಟರ್ ಮತ್ತು ಟ್ರಕ್ ಗಳ ಮೂಲಕ ಸಾಗಾಟದ ದಂಧೆ ಜೋರಾಗಿದೆ.

ಕಳೆದ ಹಲವು ವರ್ಷಗಳಲ್ಲಿ ಹಳ್ಳದಲ್ಲಿ ಸಂಗ್ರಹವಾಗುತ್ತಿದ್ದ ಮರಳನ್ನು ಕದ್ದು ಮುಚ್ಚಿ ಮಾರಾಟ ಮಾಡುತ್ತಿದ್ದ ಅಕ್ರಮ ಮರಳುಗೊಳ್ಳರು ಈಗ ಸಾಗುವಳಿ ಮಾಡುತ್ತಿರುವ ಜಮೀನಿನಲ್ಲಿ ಮತ್ತು ಹಳ್ಳಗಳಲ್ಲಿ ಜೆಸಿಬಿ ಮೂಲಕ ಕಂದಕತ್ತೋಡಿ ಅದರಲ್ಲಿ ಅಡಗಿರುವ ಮರಳನ್ನು ಎತ್ತಿ ರಾಜರೋಷವಾಗಿ ಸಾಗಿಸುತ್ತಿದ್ದಾರೆ.

"ಜೆಸಿಬಿ ಮೂಲಕ ಹೊಲದಲ್ಲಿ ಹಳ್ಳತೋಡಿ ಹಾಗೆಬಿಡುವುದರಿಂದ ನೀರು ತುಂಬಿಕೊಂಡಿರುವ ಗುಂಡಿಯ ಆಳ ಗೊತ್ತಾಗದೆ ಮಕ್ಕಳು ಈಜಲು ಹೋಗಿ ಗುಂಡಿಯಲ್ಲಿ ಬಿದ್ದು ಪ್ರಾಣ ಬಿಟ್ಟ ಉದಾಹರಣೆಗಳು ಸಾಕಷ್ಟಿದ್ದರೂ ಅಕ್ರಮ ಮರಳು ಗಣಿಗಾರಿಕೆ ಮಾಡುವವರಿಗೆ ಇದ್ಯಾವುದು ಕಣ್ಣಿಗೆ ಕಾಣಿಸುತ್ತಿಲ್ಲ".

ಅಹೋರಾತ್ರಿ ಅಕ್ರಮವಾಗಿ ಮರಳು ಎತ್ತಿ ಹೊಲಗಳಲ್ಲಿ ಹಾದು ಹೋಗುತ್ತಿರುವ ಮರಳು ಕಳ್ಳರನ್ನು ಪ್ರಶ್ನಿಸಿದರೆ ಅವರಿಗೆ ಜೀವ ಬೆದರಿಕೆ ಹಾಕುವ ಮೂಲಕ ದರ್ಪ ತೋರಿಸುತ್ತಿದ್ದಾರೆ ಎಂದು ಹೆಸರು ಹೇಳಲು ಇಚ್ಚಿಸದ ಕೆಲವು ಗ್ರಾಮಸ್ಥರು ಅಳಲು ತೋಡಿಕೊಳ್ಳುತ್ತಿದ್ದಾರೆ.

ಜಿಲ್ಲಾ ಗಣಿ ಮತ್ತು ಭೂವಿಜ್ಞಾನ ಇಲಾಖೆಯ(Department of Mines and Geology) ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಕ್ರಮ ಕೈಗೊಳ್ಳುತ್ತಾರಾ ಎಂದು ಕಾದು ನೋಡಬೇಕಾಗಿದೆ.

## ಲಿಗಾಡೆ ತಾಯಿ ಕನ್ನಡದ ಅಂತಃಕರಣದ ಪರಿಚಾರಕಿ: ನಾಗರಾಜ ಹಾವಣ್ಣ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :ಹುಲಸೂರ:– ಜೂ 24 ಡಾ. ಜಯದೇವಿತಾಯಿ ಲಿಗಾಡೆ ಅವರು ಕನ್ನಡದ ಅಂತಃಕರಣದ ಪರಿಚಾರಕಿಂ–ಯಾಗಿದ್ದರು. ಅವರ ಇಡೀ ಬದುಕು ಕನ್ನಡಮಯವಾಗಿತ್ತು ಎಂದು ತಾಲೂಕು ಕಸಾಪ ಅಧ್ಯಕ್ಷ ನಾಗರಾಜ ಹಾವಣ್ಣ ಹೇಳಿದರು.

ತಾಲೂಕಿನ ಗಡಿಗೌಡಗಾಂವ ಗ್ರಾಮದಲ್ಲಿ ತಾಲೂಕು ಮತ್ತು ವಲಯ ಕನ್ನಡ ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ ಏರ್ಪಡಿಸಿದ್ದ ಡಾ. ಜಯದೇವಿತಾಯಿ ಲಿಗಾಡೆ ಅವರ ಜಯಂತ್ಯೋತ್ಸವ ಹಾಗೂ ಉಪನ್ಯಾಸ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ ಲಿಗಾಡೆ ತಾಯಿಯವರು ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಮೊದಲ ಮಹಿಳಾ ಅಧ್ಯಕ್ಷತೆಗೆ ಭಾಜನರಾಗಿದ್ದು ಹೆಮ್ಮೆಯ ವಿಚಾರ ಎಂದರು.

ಕನ್ನಡವೇ ಕನ್ನಡಿಗರ ನಿಜವಾದ ಧರ್ಮ ಎಂಬ ಸಿದ್ಧಾಂತವನ್ನು ಲಿಗಾಡೆ ತಾಯಿಯವರು ಪ್ರತಿಪಾದಿಸಿದ್ದರು. ಅವರ ಸಾಹಿತ್ಯದ ಮತ್ತು ಸಮಾಜದ ಸೇವೆ ಎಲ್ಲರಿಗೂ ಅನುಕರಣೀಯ ಎಂದರು.

ಐ ಸ್ಕೂಲ್ ಸಂಸ್ಥಾಪಕ ಯುವರಾಜ ಪಾಟೀಲ ಮಾತನಾಡಿ, ಕರ್ನಾಟಕದಲ್ಲಿ ನೆಲೆಸಿದ ಎಲ್ಲರಿಗೂ ಓದು, ಬರಹ ಮತ್ತು ಮಾತನಾಡಲು ಕನ್ನಡ ಬರಲೇಬೇಕು. ಮಾತೃಭಾಷೆಯಿಂದ ಸಮಾಜವನ್ನುಚೆನ್ನಾಗಿತಿಳಿದುಕೊಳ್ಳಲು ಸಾಧ್ಯ. ಲಿಗಾಡೆ ತಾಯಿಯವರ ಕನ್ನಡ ಪ್ರೇಮ ಇಡೀ ನಾಡಿಗೆ ಮಾದರಿ ಎಂದರು

ಡಾ. ಜಯದೇವಿತಾಯಿ ಲಿಗಾಡೆ ಪ್ರತಿಷ್ಠಾನದ ನಿರ್ದೇಶಕ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ಲಿಗಾಡೆತಾಯಿಯವರು ವಚನಕಾರರ ವೈಚಾರಿಕ ನಿಲುವು ತಮ್ಮ ಸಾಹಿತ್ಯ ಮತ್ತು ಬದುಕಿನಲ್ಲಿ ಅಳವಡಿಸಿಕೊಂಡಿದ್ದರು. ಮಹಿಳಾ ಶಿಕ್ಷಣ, ಸ್ವಾವಲಂಬನೆ, ಸ್ವಾತಂತ್ರ್ಯಕ್ಕೆ, ಮಹಿಳೆಯರ ಆರೋಗ್ಯಕ್ಕೆ ಹೆಚ್ಚು ಮನ್ನಣೆ ನೀಡಿದ್ದರು.

ಸ್ವಾತಂತ್ರ್ಯ ಚಳುವಳಿ, ಕರ್ನಾಟಕ ಏಕೀಕರಣ ಅವರ ಕನಸಾಗಿತ್ತು. ಕನ್ನಡ ನುಡಿ ಮತ್ತು ನಾಡಿನ ಬೆಳವಣಿಗೆಅವರಬದುಕಿನಪ್ರಧಾನ ಭಾಗವಾಗಿತ್ತು. ಅದಕ್ಕಾಗಿಯೇ ಬದುಕಿನುದ್ದಕ್ಕೂ ಶ್ರಮಿಸಿದ್ದರು. ಕಾವ್ಯ, ಮಹಾಕಾವ್ಯ ಬರೆದ ಅವರು ಶೂನ್ಯ ಸಂಪಾದನೆ ಮತ್ತು ವಚನಗಳು ಮರಾಠಿಗೆ ಅನುವಾದಿಸಿದರು. ಲಿಗಾಡೆ ತಾಯಿಯವರು ಕನ್ನಡ ಮತ್ತು ಮರಾಠಿ ಬಾಂಧವ್ಯದ ಸಾಂಸ್ಕೃತಿಕ ಸೇತುವೆ ಎಂದರು.

ಗ್ರಾಮ ಪಂಚಾಯಿತಿ ಸದಸ್ಯ ಅಶೋಕತೇಲಂಗ, ಮುಖಂಡರಾದ

ಬಾಬುರಾವ ಪಾಟೀಲ, ಧೂಳಪ್ಪ ಭರಮಶೆಟ್ಟೆ, ಅಖಿಲೇಶ ಪಾಟೀಲ, ಲಹು ವಾಗ್ದರೆ, ರವಿ ಸ್ವಾಮಿ, ನಾಗಪ್ಪ ಮೇತ್ರಿ, ಪ್ರಮೋದ್ ಭರಮಶೆಟ್ಟೆ, ಗೋರಖ ಖಪಲೆ, ದತ್ತಾತ್ರಿ ಮೇತ್ರಿ, ಯುವರಾಜ ವಗ್ಗೆ, ಶಿವಕುಮಾರ್ ಮೇತ್ರೆ, ಶಂಕರ್ ಅಟ್ಲೂರೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ವಲಯ ಕಸಾಪ ಅಧ್ಯಕ್ಷ ದೀಪಕ ಪಾಟೀಲ ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು.

ಶಿವಕುಮಾರ ಭರಮಶೆಟ್ಟೆ ನಿರೂಪಿಸಿದರು.

## ಗುರು ನೆನಹದಿಂದ ಜೀವನ್ಮುಕ್ತಿ – ಹಾರಕೂಡ ಶ್ರೀ.





ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜೂ 24 ಸಂಸಾರ ಶರಧಿಯಲ್ಲಿ ಮುಳುಗದೆ ನಿಶ್ಚಿತ ದಡ ಸೇರಲು ಗುರುನೆನಹ ನಮ್ಮನ್ನು ಶ್ರೀರ–ಕ್ಷೆಯಾಗಿ ಕಾಪಾಡುತ್ತದೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನಹಾರಕೂಡಶ್ರೀಮಠದಲ್ಲಿ ಹಾರಕೂಡ ಗ್ರಾಮದ ಡಾವರೆ ಮತ್ತು ಸಂಗೊಳಗೆ ಪರಿವಾರದ ಹೆಣ್ಣುಮಕ್ಕಳಿಂದ ಆಯೋಜಿಸಿದ ಗುರುವಂದನೆ842ನೇತುಲಾಭಾರ ಸಮಾರಂಭದ ಸನ್ನಿಧಾನ ವಹಿಸಿ ಮಾತನಾಡಿ ಜೀವನ ಶರಧಿಯಲ್ಲಿ ಕಷ್ಟ ಸು:ಖಗಳೆಂಬ ನೋವು ನಲಿವುಗಳೆಂಬ, ಅಲೆಗಳು ಬರುವುದು ಸಹಜ, ಆದರೆ ಕಷ್ಟದಲೆ ಬಂದಾಗ ಅಲುಗಾಡದೆ ಸು:ಖದಲೆ ಬಂದಾಗ ಮೈಮರೆಯದೆ ಸಮಚಿತ್ತವೆಂಬ ದೋಣಿಯಲ್ಲಿ ಗುರುವಿನ ನೆನಹವೆಂಬ ಹುಟ್ಟು ಸದಾ ಜಾಗೃತಿಯಿಂದ ಹಾಕುತ್ತಿರಬೇಕು.

ಇದರಿಂದ ಗುರುಕಾರುಣ್ಯ ಪ್ರಾಪ್ತವಾಗಿ ಜೀವನ್ಮುಕ್ತಿಯ ದಡ ಸೇರಬಹುದಾಗಿದೆ.

ಭಕ್ತಿಶ್ರದ್ಧೆ ಘನೀಕರಣಗೊಂಡಷ್ಟು ಗುರು ಕರುಣೆ ಹೊನಲಾಗಿ ಹರಿದು ಬರುತ್ತದೆ.

ಡಾವರೆ ಹಾಗೂ ಸಂಗೋಳಗೆ ಪರಿವಾರದ ಹೆಣ್ಣು ಮಕ್ಕಳು ಹಾರಕೂಡ ಅಜ್ಜನವರ ಮೇಲೆ ಇಟ್ಟಿರುವ ಭಕ್ತಿಯಿಂದ ಅವರ ಬಾಳಸಿರಿ ನೂರ್ಮಡಿ ವೃದ್ಧಿಸಲಿ ಎಂದು ಶುಭ ಹಾರೈಸಿದರು. ಅಶ್ವಿನಿ ಬಿರಾದಾರ ಅನಿಸಿಕೆ ವ್ಯಕ್ತಪಡಿಸಿದರು. ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿ ಬಿ. ಕೆ. ಹಿರೇಮಠ, ಮಲ್ಲಿನಾಥ ಹಿರೇಮಠ ಹಾರಕೂಡ, ಮೇಘರಾಜ ನಾಗರಾಳೆ, ಹೇಮಲತಾ ಹಿರೇಮಠ, ಶ್ರೀದೇವಿ ಹಿರೇಮಠ, ಕಾಶಪ್ಪ ದೇಗಾಂವ, ರೇವಣ್ಣ ಧನ್ನೂರ, ದುರ್ಯೋಧನ ಸಂಗೋಳಗೆ, ಗುಂಡರಾವ್ ಪಾಟೀಲ ಧನ್ನೂರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಗೌರಮ್ಮ ಕಾಲೋಜಿ ಸ್ವಾಗತಿಸಿದರು.

ನೀಲಾಂಬಿಕಾ ಬಸವರಾಜ ಪಾಟೀಲ ಮತ್ತು ಸುಹಾಸನಿ ಪಾಟೀಲ ಸ್ವಾಗತ ಗೀತೆ ಹಾಡಿದರು.

ಅಪೂರ್ವ ಡಾವರೆ ಹಾಗೂ ಶ್ರೀನಿಧಿ ಪಾಟೀಲ ಸಂಸ್ಕೃತಿಕ ನೃತ್ಯ ಪ್ರದರ್ಶನ ಮಾಡಿದರು.

ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನಾ ಗೀತೆ ಹಾಡಿದರು. ಸುಜಾತಾ ಪಾಟೀಲ ನಿರೂಪಿಸಿದರು.

## ಮಮ್ಮಾರವರ ಆದರ್ಶಗಳನ್ನು ಅನುಸರಿಸೋಣ : ಬ್ರ.ಕು.ರೇಖಾ ಅಕ್ಕಾ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾ ಎಲ್ಲರ ಮನೋ ಕಾಮನೆಗಳನ್ನು ಈಡೇರಿಸುವ ಮಮ್ಮಾರವರ ಆದರ್ಶವನ್ನು ನಾವೇಲ್ಲರು ಅನುಸರಿಸೋಣವೆಂದು ಗದುಗಿನ ಬ್ರ.ಕು. ರೇಖಾ ಅಕ್ಕರವರು ಹೇಳಿದರು. ಪಟ್ಟಣದ ಈಶ್ವರಿ ವಿಶ್ವವಿದ್ಯಾಲಯದಲ್ಲಿ ರಾಜಯೋಗಿನಿ ಜಗದಂಭಾ ಸರಸ್ವತಿ (ಮಮ್ಮಾ) ಸ್ಮತಿ ದಿನಾಚರಣೆಯಲ್ಲಿ ವಿಶೇಷ ಉಪನ್ಯಾಸ ನೀಡಿದ ಅವರು ಮಮ್ಮಾರವರು 14 ನೇ ವರುಷದಲ್ಲಿ ಬಾಬಾನ ಮಗುವಾಗಿದ್ದಳು

ನಾವು ಜೀವಿಸುವ ಘಳಿಗೆ ಅಂತಿಮ ಘಳಿಗೆ ಎಂದು ತಿಳಿದಾಗ ಪ್ರತಿಯೊಂದು ಕ್ಷಣವನ್ನು ಸಾರ್ಥಕ ಪಡಿಸಿಕೊಳ್ಳಬಹುದು. ಒಂದು ಸಲ ತಪ್ಪು ಮಾಡಿದರೆ ಮತ್ತೆ ಇಡೀ ಜೀವಮಾನದಲ್ಲಿ ತಪ್ಪುಗಳನ್ನು ಮಾಡದೇ ಜೀವನವನ್ನು ಸುಮಧುರವಾಗಿ ಮಾಡಿಕೊಂಡ ಏಕೈಕವ್ಯಕ್ತಿ ಅಂದರೆ ಅದು ಮಮ್ಮಾ ಎಂದರು.

ಸಂಕಷ್ಟಗಳನ್ನು ಸವಾಲಾಗಿ ಸ್ವೀಕರಿಸಿ ಸಮರ್ಥವಾಗಿ ಜೀವನು ಸಾಗಿಸಿದವರು. ಮಮ್ಮಾರವರ ಆದರ್ಶ ಹಾಗೂ ನಡಾಳಿಕೆಯನ್ನೂ ನಾವು ರೂಢಿಸಿಕೊಂಡಾಗ ಅವರ ಆತ್ಮಕ್ಕೆ ನಿಜವಾದ ಶಾಂತಿ ದೊರಕುತ್ತದೆ ಎಂದರು. ಪವಿತ್ರತೆಯನ್ನು ಪ್ರತಿಯೊಬ್ಬರು ಕಾಪಾಡಿಕೊಳ್ಳಬೇಕೆಂದು ಕರೆ ನೀಡಿದರು.

ಕಪ್ಪತಗುಡ್ಡದ ಯೋಗ ಗುರುಮಾತೆ ಓಂಕಾರೇಶ್ವರಿ. ನಿ. ಶಿಕ್ಷಕ ಇ . ಈಶ್ವರಪ್ಪ. ಬಸವರಾಜ. ರವಿ ಸಂಶಿ. ಪ್ರೊ. ಎ.ಬಿ.ಕೆಂಚರಡ್ಡಿ .ಸಿದ್ದಯ್ಯ ಕೊಣ್ಣೂರು. ಬಸನಗೌಡ ಪಾಟೀಲ. ವೀರಯ್ಯ ಶಿವಪ್ಪಯ್ಯನಮಠ. ದೊಡ್ಡಬಸಪ್ಪ ಹಕಾರಿ.ರಣಬಸಪ್ಪ ದಾನಕ್ಕೈ. ವೀರಣ್ಣ ನಿಂಗೋಜಿ .ನಿಂಗಪ್ಪ ಯರಾಶಿ.. ಚಂದ್ರು ಮಸಬಹಂಚಿನಾಳ. ಮುತ್ತಯ್ಯ ಮಲಕಸಮುದ್ರ .ಇನ್ನಿತರರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಕೊನೆಗೆ ನೂರಾರು ಜನ ಅಕ್ಕಂದಿರು ಹಾಗೂ ಅಣ್ಣಂದಿರು ಬ್ರಹ್ಮ ಭೋಜನವನ್ನು ಸವಿದರು.

ಸ್ಥಳೀಯ ಬ್ರ.ಕು. ಗೀತಕ್ಕ ಸ್ವಾಗತಿಸಿ ವಂದಿಸಿದರು.

## ಕಡ್ಡಾಯವಾಗಿ ನೀರಿನ ಮೂಲಗಳ ಸುರಕ್ಷತೆ ಖಚಿತ ಪಡಿಸಿಕೊಳ್ಳಿ: ಜಿಪಂ ಸಿಇಒ ಮಹಮ್ಮದ್ ಹ್ಯಾರಿಸ್ ಸುಮ್ಮೈರ್ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.24– ಮಾನ್ಸೂನ್ ಮಳೆ ಆರಂಭವಾದ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಮೂಲಗಳು ಕಲುಷಿತಗೊಳ್ಳುವ ಸಾಧ್ಯತೆಗಳು ಇರುವುದರಿಂದ ಎಲ್ಲ ಗ್ರಾಮಗಳಲ್ಲಿಯ ಕುಡಿಯುವ ನೀರಿನ ಮೂಲಗಳಾದ ಕೆರೆ, ಬಾವಿ, ಕೊಳವೆಬಾವಿ ಮುಂತಾದವುಗಳ ಸುರಕ್ಷತೆ–ಯ ಕುರಿತು ಸಂಬಂಧಿಸಿದ ಅಧಿಕಾರಿಗಳು ಖಚಿತ ಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮ್ಮೈರ್ ಅವರು ತಿಳಿಸಿದರು.

ಗುರುವಾರದಂದು, ಕುಡಿಯುವ ನೀರು ಸರಬುರಾಜು, ಶುದ್ಧೀಕರಣ, ತಾಂತ್ರಿಕ ಬೆಂಬಲ ನೀಡುವುದರ ಕುರಿತು ಸಂಬಂಧಿಸಿದ ಕಾರ್ಯನಿರ್ವಾಹಕ ಅಭಿಯಂತರರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಆರೋಗ್ಯ ಇಲಾಖೆಯ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ವಿಡಿಯೋ ಸಂವಾದ ಕೈಗೊಂಡು ಅವರು ಮಾತನಾಡಿದರು.


ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಸಂಭಾವ್ಯ ವಾಂತಿ–ಭೇದಿ ಪ್ರಕರಣಗಳು ಸಂಭವಿಸದಂತೆ ಕೆರೆ, ಕೈ–ಪಂಪು, ಕೊಳವೆ ಬಾವಿಗಳ ಸುತ್ತಮುತ್ತ ಸ್ವಚ್ಛತೆ, ನೀರಿನ ಮೂಲಗಳ ಹತ್ತಿರವಿರುವ ಮುಖ್ಯ ವಾಲ್‌ಗಳು (ರೈಸಿಂಗ್ ವಾಲ್) ಮತ್ತು ಸರಬರಾಜು ಪೈಪ್‌ಲೈನ್ ಸೋರಿಕೆ ಪತ್ತೆಹಚ್ಚುವಿಕೆ ಹಾಗೂ ದುರಸ್ಥಿ, ಓವರ್‌ಹೆಡ್ ಟ್ಯಾಂಕ್ ಒಳಗಡೆ ಮತ್ತು ಹೊರಗಡೆ ಸುತ್ತಮುತ್ತ ಸ್ವಚ್ಛಗೊಳಿಸುವುದು. ಶುದ್ಧ ನೀರಿನ ಘಟಕ ನಿರ್ವಹಣೆ, ತೆರೆದ ಬಾವಿಗಳ ನಿರ್ವಹಣೆ, ಎಲ್ಲಾ ನೀರಿನ ಮೂಲಗಳನ್ನು ಸ್ವಚ್ಛಗೊಳಿಸಿ ಶೇ.33 ಕ್ಲೋರಿನ್ ಅಂಶವಿರುವ ಗುಣಮಟ್ಟದ ಬ್ಲೀಚಿಂಗ್ ಪೌಡರ್‌ನಿಂದ ಕ್ಲೋರಿನೇಷನ್ ಮಾಡಿಸಿ ಜೈವಿಕ ಪರೀಕ್ಷೆಗೆ ಒಳಪಡಿಸಿದ ನಂತರ ಕುಡಿಯಲು ಯೋಗ್ಯವೆಂದು ವರದಿ ಬಂದ ನಂತರವೇ ಸಾರ್ವಜನಿಕರಿಗೆ ಅನಾನೂಕಲತೆಯಾಗದ ಸಮಯದಲ್ಲಿ ವಿದ್ಯುತ್ ಸರಬರಾಜು ಇರುವ ಕುರಿತು ಖಾತ್ರಿಪಡಿಸಿಕೊಂಡು ನೀರು ಸರಬರಾಜು ಮಾಡಲು ಕ್ರಮಕೈಗೊಳ್ಳಬೇಕು ಎಂದು ಸೂಚಿಸಿದರು.

ಶಾಲಾ ಆವರಣದಲ್ಲಿಯ ನೀರಿನ ಸಂಗ್ರಹಕಗಳ ನೀರನ್ನು ಪರೀಕ್ಷೆಗೆ ಒಳಪಡಿಸಿ ಅಶುದ್ಧವೆಂದು ಕಂಡು ಬಂದಲ್ಲಿ ತಕ್ಷಣವೇ ನಿಯಮಾನುಸಾರ ಕ್ಲೋರಿನೇಷನ್ ಕೈಗೊಳ್ಳಬೇಕು ಎಂದರು.

ಈ ಸಂಧರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ ಬಾಬು, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಹಾಗೂ ಪ್ರಭಾರಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಆರ್.ಅಬ್ದುಲ್ಲಾ ಸೇರಿದಂತೆ ಗ್ರಾಮೀಣ ನೀರು ಸರಬರಾಜು ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಸ್ಥಳೀಯ ಸಂಸ್ಥೆಗಳ ಅಧಿಕಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಸೇರಿದಂತೆ ಇತರರು ಭಾಗವಹಿಸಿದ್ದರು.

————————

## ಕುದರಿಮೋತಿ ಶಾಲೆಯಲ್ಲಿ ವಿಶ್ವಬಂಧು ಸೇವಾ ಗುರುಬಳಗದಿಂದ ಗೋಡೆ ಬರಹ ಸೇವೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜಿಲ್ಲೆಯ ಕುಕನೂರ ತಾಲೂಕಿನ ಕುದರಿಮೋತಿಯ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ

ವಿಶ್ವಬಂಧುಸೇವಾಗುರುಬಳಗದಿಂದ ಬೆಳಿಗ್ಗೆ 10 ಗಂಟೆಯಿಂದ ಸಂಜೆ 7 ಗಂಟೆಯವರೆಗೆ 23 ನೇ ಗೋಡೆ ಬರಹ ಸೇವಾ ಕಾರ್ಯ ಜರುಗಿತು.

ಶಾಲೆಯ ಮುಖ್ಯ ಶಿಕ್ಷಕರಾದ ಮಂಗಳೇಶ ಯಲಿಗಾರ ರವರು ಮಾತನಾಡಿಶಾಲೆಯನ್ನುಕಲಿಕಾಂಶಗಳು, ಚಿತ್ರ, ನುಡಿಮುತ್ತುಗಳಿಂದ ಸುಂದರಗೊಳಿಸಿದ ಬಳಗದ ಕಾರ್ಯ ಶ್ಲಾಘನೀಯ ಎಂದರು.

ವಿಶ್ವಬಂಧು ಸೇವಾ ಗುರುಬಳಗದ ಮುಖ್ಯಸ್ಥರಾದ ಸಿದ್ದಲಿಂಗಪ್ಪ ಶ್ಯಾಗೋಟಿ ರವರು ಮಾತನಾಡಿ ಸರ್ಕಾರಿ ಶಾಲೆಗಳ ಸಬಲೀಕರಣ ದೃಷ್ಟಿಯಿಂದ ಸಮಾನ ಮನಸ್ಕ ಸ್ನೇಹಿತರೊಂದಿಗೆ ಸೇರಿ ಹಲವಾರು ಸಮಾಜಮುಖಿ ಕಾರ್ಯಗಳನ್ನು ಹಮ್ಮಿಕೊಂಡಿದ್ದು ಅದರಲ್ಲಿ ಗೋಡೆ ಬರಹ ಸೇವೆ ಅತ್ಯಂತ ಪ್ರಮುಖವಾದುದಾಗಿದೆ. ಬಳಗದ ಸದಸ್ಯರ ನಿಸ್ವಾರ್ಥ ಸೇವಾ ಮನೋಭಾವದಿಂದ ರಚನಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸಾದ್ಯವಾಗಿದೆ ಎಂದರು.

ಹಿರಿಯ ಕಲಾವಿದರಾದ ಕಳಕೇಶ ಬಳಿಗಾರ ರವರು ಮಾತನಾಡಿ ಸೇವಾ ಮನೋಭಾವದಿಂದ ಮಾಡುವ ತಮಗೆಲ್ಲರಿಗೂ ಒಳ್ಳೆಯದಾಗಲಿದೆ ಸೇವೆ ಹೀಗೆಯೇ ಮುಂದುವರೆಯಲಿ ನಮ್ಮ ಸಹಕಾರ ಇರಲಿದೆ ಎಂದರು.. ಪ್ರಮುಖರಾದ ಮಹಾವೀರ ಕಲ್ಭಾವಿ ವಿವಿಧ ಭಾಗಗಳಿಂದ ಆಗಮಿಸಿ ಸೇವೆ ಸಲ್ಲಿಸಿದ ಸರ್ವ ಸೇವಾರ್ಥಿಗಳಿಗೆ ಕೃತಜ್ಞತೆ ಸಲ್ಲಿಸಿದರು.

ಸೇವಾ ಕಾರ್ಯದಲ್ಲಿ ಪ್ರಭು ಶಿವನಗೌಡ್ರ, ಖಾಜಾಸಾಬ ಹೊಸಳ್ಳಿ, ವಿರೇಶ ಮ್ಯಾಗಳೇಶಿ, ಶಂಕರ್ ಹಳ್ಳಿ , ಕೊಟ್ರೇಶ ಪಟ್ಟಣ, ಪರಮೇಶ ಚಿಂತಾಮಣಿ, ಶರಣು ವಾಳದ, ಬಸವರಾಜ ಮುಳುಗುಂದ, ಮಂಜುನಾಥ ಕೊಡಕೇರಿ, ಶಿವಕುಮಾರ ಮುತ್ತಾಳ, ಮಾರುತಿ ಹಾದಿಮನಿ, ಕಳಕನಗೌಡ ಪಾಟೀಲ್, ಅನ್ವರಹುಸೇನ ಸಂತು, ಬಸವರಾಜ ಒಳಗುಂದಿ, ಬಾಬುಸಾಬ ಗುಡಿಹಿಂದಲ್, ಬಸವರಾಜ ಕಮತರ, ಬಸವರಾಜ ಸಾರಂಗಮಠ, ಸೋಮಣ್ಣ ನಾಯಕ, ಗಣೇಶ ಎ, ರಾಜೇಶ್ವರಿ ಮಾಮನಿ, ದಾವಲಸಾಬ ಹೆಬ್ಬಳ್ಳಿ, ಗವಿಸಿದ್ದಪ್ಪ ಹಾಗೂ ಶಾಲೆಯ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಸೂಚನೆ

# ಕುಡಿಯುವ ನೀರು ಕಲುಷಿತಗೊಳ್ಳದಂತೆ ನಿಗಾವಹಿಸಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.24–ನಗರ ಮತ್ತು ಗ್ರಾಮಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಮೂಲಗಳು ಕಲುಷಿತಗೊಳ್ಳದಂತೆ ಮಹಾನಗರ ಪಾಲಿಕೆ ಅಧಿಕಾರಿಗಳು, ಆಯಾ ತಾಲ್ಲೂಕು ತಹಶೀಲ್ದಾರರು ನಿಗಾವಹಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡೀಯೋ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಮಿತಿ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಮುಂಗಾರು ಮಳೆಗಾಲ ಆರಂಭವಾಗಿರುವುದರಿಂದ ಕೊಳಚೆ ನೀರು ಕುಡಿಯುವ ನೀರಿನೊಂದಿಗೆ ಬೆರೆಯದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ನಿಗಾವಹಿಸಬೇಕು. ಆಯಾ ತಾಲ್ಲೂಕು ಆರೋಗ್ಯಾಧಿಕಾರಿಗಳ ಜೊತೆ ನಿರಂತರ ಸಂಪರ್ಕದಲ್ಲಿರಬೇಕು. ಪ್ರತಿ 15 ದಿನಗಳಿಗೊಮ್ಮೆ ಸಭೆ ನಡೆಸಿ, ಸಮಸ್ಯೆಗಳಿದ್ದಲ್ಲಿ ಪರಿಹರಿಸಿಕೊಳ್ಳಬೇಕು ಎಂದು ತಿಳಿಸಿದರು.

ಈ ಭಾಗದ ತುಂಗಭದ್ರಾ ಜಲಾಶಯವು ಪ್ರಸ್ತುತದಲ್ಲಿ 48.270 ಟಿಎಂಸಿ ನೀರಿನ ಸಂಗ್ರಹಣಾ ಮಟ್ಟ ತಲುಪಿದೆ. ಮಲೆನಾಡು ವ್ಯಾಪ್ತಿಯಲ್ಲಿ ವ್ಯಾಪಕ ಮಳೆಯಾಗುತ್ತಿರುವುದರಿಂದ ಮುಂಬರುವ ದಿನಗಳಲ್ಲಿ ಜಲಾಶಯದಿಂದ ನದಿಗೆ ನೀರು ಹರಿಸುವ ಸಾಧ್ಯತೆ ಇರಲಿದೆ. ಹಾಗಾಗಿ ಕಂಪ್ಲಿ, ಸಿರುಗುಪ್ಪ ಭಾಗದ ನದಿಪಾತ್ರದ ಗ್ರಾಮಗಳಿಗೆ ಎಚ್ಚರಿಕೆ ನೀಡಬೇಕು ಎಂದು ಆಯಾ ತಾಲ್ಲೂಕು ತಹಶೀಲ್ದಾರರಿಗೆ ನಿರ್ದೇಶನ ನೀಡಿದರು.

ಕಾಳಜಿ ಕೇಂದ್ರಗಳನ್ನು ಸಿದ್ಧತೆಯಲ್ಲಿಟ್ಟುಕೊಳ್ಳಲು ಅಗತ್ಯ ವ್ಯವಸ್ಥೆ ಮಾಡಿಕೊಳ್ಳಬೇಕು. ಒಟ್ಟಾರೆ–ಯಾಗಿ ಅಧಿಕಾರಿಗಳು ಯಾವುದೇ ತುರ್ತು ಸಂದರ್ಭ ನಿರ್ವಹಣೆಗೆ ಸಿದ್ಧರಿರಬೇಕು ಎಂದು ತಿಳಿಸಿದರು.

ಮಳೆಯಿಂದಾಗಿ ಸಾರ್ವಜನಿಕ ಆಸ್ತಿಹಾನಿ, ಮಾನವ, ಜಾನುವಾರು ಜೀವಹಾನಿ, ಬೆಳೆ ಹಾನಿ, ಮನೆಗಳ ಹಾನಿ ಬಗ್ಗೆ ಗ್ರಾಮಲೆಕ್ಕಿಗರು, ರಾಜಸ್ವ ನಿರೀಕ್ಷಕರಿಂದ ವರದಿ ಪಡೆದು, ತಾಲ್ಲೂಕುವಾರು ಕ್ರೋಢೀಕರಿಸಿ ವರದಿ ಸಲ್ಲಿಸಬೇಕು ಎಂದು ತಹಶೀಲ್ದಾರರಿಗೆ ಸೂಚಿಸಿದರು.

ಸಾಂಕ್ರಾಮಿಕ ರೋಗಗಳು ಹರಡಲು ಅವಕಾಶ ನೀಡದಂತೆ ಚರಂಡಿಗಳ ಸ್ವಚ್ಛತೆಗೆ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ವಹಿಸಬೇಕು. ಜಿಲ್ಲೆಯಲ್ಲಿ ಈಗಾಗಲೇ ಮುಂಗಾರು ಹಂಗಾಮಿನಲ್ಲಿ ಶೇ.17 ರಷ್ಟು ಬಿತ್ತನೆಯಾಗಿದ್ದು, ಅಗತ್ಯ ಬಿತ್ತನೆ ಬೀಜ, ರಸಗೊಬ್ಬರ ದಾಸ್ತಾನು ಇಟ್ಟುಕೊಳ್ಳಬೇಕು ಎಂದು ಕೃಷಿ ಅಧಿಕಾರಿಗಳಿಗೆ ತಿಳಿಸಿದರು.

ನಗರ ಮತ್ತು ಗ್ರಾಮಗಳಲ್ಲಿ ಮಳೆ ನೀರು ಸರಾಗವಾಗಿ ಹರಿಯಲು ರಾಜ ಕಾಲುವೆ, ಚರಂಡಿ, ಸೇತುವೆ ಹೂಳುತೆಗೆದು ಸ್ವಚ್ಛಗೊಳಿಸುವುದರ ಸಂಬಂಧ ಕ್ರಮವಹಿಸಬೇಕು ಎಂದು ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದರು.

ನಗರವ್ಯಾಪ್ತಿಯಲ್ಲಿ ಮಳೆಯಿಂದ ಹೆಚ್ಚು ನೀರು ನಿಲ್ಲುವ ಸ್ಥಳಗಳಲ್ಲಿ ನಿರೇತ್ತಲು 3 ಡಿಸೇಲ್ ಮತ್ತು 3 ಎಲೆಕ್ಟ್ರಿಕಲ್ ಮಷಿನ್‌ಗಳನ್ನು ಸಿದ್ಧವಾಗಿಟ್ಟುಕೊಳ್ಳಲಾಗಿದೆ. ನಗರ ವ್ಯಾಪ್ತಿಯ 28 ಕಿ.ಮೀ ವ್ಯಾಪ್ತಿಯ ರಾಜಕಾಲುವೆಯಲ್ಲಿ ಈಗಾಗಲೇ 24 ಕಿ.ಮೀ ಸ್ವಚ್ಛಗೊಳಿಸಲಾಗಿದೆ ಎಂದು ಮಹಾನಗರ ಪಾಲಿಕೆಯ ಅಧಿಕಾರಿಗಳು ಸಭೆಗೆ ತಿಳಿಸಿದರು.

ಮಳೆಗಾಲದಲ್ಲಿ ವಿದ್ಯುತ್ ಸರಬರಾಜು ಮೇಲೆ ಉಂಟಾಗಬಹುದಾದ ವ್ಯತ್ಯಯ ಅಂಶಗಳನ್ನು ಗಮನದಲ್ಲಿರಿಸಿ ವಿದ್ಯುತ್ ಮೂಲಸೌಕರ್ಯಗಳನ್ನು ಬಲಪಡಿಸುವುದು, ಯಾವುದೇ ವಿದ್ಯುತ್ ಕಡಿತ, ತುರ್ತುಸ್ಥಿತಿಗೆ ಹಾಜರಾಗಲು ಮತ್ತು ವಿದ್ಯುತ್ ಸರಬರಾಜನ್ನು ತ್ವರಿತವಾಗಿ ಪುನಃಸ್ಥಾಪಿಸಲು ರಚಿಸುವುದು ಮತ್ತು ವಿದ್ಯುತ್ ತಂತಿ ಹಾದು ಹೋಗುವ ಮಾರ್ಗಗಳಲ್ಲಿ ಮಳೆಗಾಳಿಗೆ ಬೀಳುವಂತಹ ಮರಗಳನ್ನು ಕೊಂಬೆಗಳನ್ನು ಕತ್ತರಿಸಬೇಕು. ಜೆಸ್ಕಾಂ ಸಹಾಯವಾಣಿ ಸಂಖ್ಯೆ 1912 ಬಗ್ಗೆ ಸಾರ್ವಜನಿಕರಿಗೆ ಹೆಚ್ಚಿನ ಮಾಹಿತಿ ನೀಡಬೇಕು ಎಂದು ಜೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು.

ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯಲ್ಲಿ ಲಭ್ಯವಿರುವ ಎಲ್ಲಾ ರಕ್ಷಣಾ ಸಲಕರಣೆಗಳನ್ನು ಸುಸ್ಥಿತಿಯಲ್ಲಿರುವಂತೆ ಕ್ರಮ ವಹಿಸಬೇಕೆಂದು ಅಗ್ನಿ ಶಾಮಕ ಮತ್ತು ಗೃಹ ರಕ್ಷಕದಳ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ತುರ್ತು ಸಂದರ್ಭಗಳಲ್ಲಿ ಇತರೆ ಎಲ್ಲಾ ಇಲಾಖೆಗಳನ್ನು ಒಳಗೊಂಡಂತೆ ರಕ್ಷಣಾ ಕಾರ್ಯಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳು ಸನ್ನದ್ಧರಾಗಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

**ಮರುಪರಿಶೀಲನೆ ನಡೆಸಿ:**

ಜಿಲ್ಲೆಯಲ್ಲಿ ಕನಿಷ್ಠ ಬೆಂಬಲ ಯೋಜನೆಯಡಿ ಖರೀದಿಸಲಾಗುತ್ತಿರುವ ಜೋಳ ಪ್ರಕ್ರಿಯೆಯಲ್ಲಿ ಅವ್ಯವಹಾರ ನಡೆಯುತ್ತಿರುವುದಾಗಿ ದೂರುಗಳು ಕೇಳಿ ಬರುತ್ತಿದೆ. ರೈತರ ಎಫ್‌ಐಡಿ ಹೆಸರಿನಲ್ಲಿ ವ್ಯಾಪಾರಿಗಳು ಜೋಳ ಮಾರಾಟ ಮಾಡುತ್ತಿದ್ದಾರೆ. ಮಾರುಕಟ್ಟೆ ಬೆಲೆಗಿಂತ ಕನಿಷ್ಠ ಬೆಂಬಲ ಯೋಜನೆಯಡಿಯ ಬೆಲೆಯು ಅಧಿಕವಾಗಿರುವುದರಿಂದ ಹೆಚ್ಚಾಗಿ ಮಾರಾಟವಾಗುತ್ತಿರುವುದಾಗಿ ತಿಳಿದುಬಂದಿದೆ. ಹೀಗಾಗಿ ಎಲ್ಲಾ ತಹಶೀಲ್ದಾರರು, ಜೋಳ ಮಾರಾಟಕ್ಕೆ ನೋಂದಣಿ ಮಾಡಿಕೊಂಡ ಎಲ್ಲಾ ರೈತರ ಎಫ್‌ಐಡಿಗಳನ್ನು ಮರು ಪರಿಶೀಲಿಸಬೇಕು ಎಂದರು.

ಬಳ್ಳಾರಿ, ಕುರುಗೋಡು ಮತ್ತು ಕಂಪ್ಲಿ ಭಾಗದಲ್ಲಿ ಹೆಚ್ಚಾಗಿ ಈ ಸಮಸ್ಯೆ ಕಂಡುಬರುತ್ತಿದ್ದು, ವ್ಯಾಪಾರಿಗಳ ಹಾವಳಿ ಹೆಚ್ಚಾಗಿದ್ದು, ಈ ಬಾರಿ ಪಿಆರ್ ಗಳ ನೇಮಕ ಮಾಡುವಲ್ಲಿ ಎಚ್ಚರ ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಕೃಷಿ ಜಂಟಿ ನಿರ್ದೇಶಕ ಸೋಮಸುಂದರ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ತಹಶೀಲ್ದಾರರು ಉಪಸ್ಥಿತರಿದ್ದರು.

ಬಳ್ಳಾರಿ: 'ರಕ್ತದಾನ ಶಿಬಿರ'ದಲ್ಲಿ ರಕ್ತದಾನ ಮಾಡಿದ ಡಿಸಿ, ಎಸ್ಪಿ

# ಜೀವ ಉಳಿಸಲು ರಕ್ತ ಅವಶ್ಯಕ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.24–ಅಪಘಾತ, ತುರ್ತು ಶಸ್ತ್ರಚಿಕಿತ್ಸೆಗಳ ಸಂದರ್ಭದಲ್ಲಿ ಜೀವ ಉಳಿಸಲು ರಕ್ತ ಅವಶ್ಯಕವಾಗಿದ್ದು, ಆರೋಗ್ಯವಂತರು ತಪ್ಪದೇ ರಕ್ತದಾನ ಮಾಡಿ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಸಹಯೋಗ ಮತ್ತು ಮಿನೇರಾ ಸ್ಟೀಲ್ ಇವರ ಸಹಕಾರದಲ್ಲಿ ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನದ ಆವರಣದಲ್ಲಿ ಮಂಗಳವಾರ ಆಯೋಜಿಸಿದ್ದ 'ಬೃಹತ್ ರಕ್ತದಾನ ಶಿಬಿರ'ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಕ್ತದಾನ ಮಾಡುವುದರಿಂದ ಹಲವಾರು ರೀತಿಯ ಪ್ರಯೋಜನಗಳಿದ್ದು, ಅದರಲ್ಲಿ ಹೊಸ ರಕ್ತದ ಉತ್ಪತ್ತಿ ಆಗುವುದರ ಜೊತೆಗೆ ರಕ್ತಚಲನೆಯ ಕಾರ್ಯತತ್ಪರತೆ ಮತ್ತು ಜ್ಞಾಪಕ ಶಕ್ತಿ ವೃದ್ಧಿಯಾಗುತ್ತದೆ ಎಂದರು.

ಈ ಹಿಂದೆ ಜೆಎಸ್‌ಡಬ್ಲ್ಯೂ ಜೆನಲ್ಲಿ 5000 ಯುನಿಟ್ ರಕ್ತ ಶೇಖರಿಸುವ ಮೂಲಕ ಕಲ್ಯಾಣ ಕರ್ನಾಟಕ ಭಾಗದಲ್ಲಿ ದೊಡ್ಡ ಮಟ್ಟದಲ್ಲಿ ದಾಖಲೆಯಾಗಿದೆ. ಮುಂಬರುವ ದಿನಗಳಲ್ಲಿಯೂ ರಕ್ತದಾನ ಶಿಬಿರಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ ಅವರು ಮಾತನಾಡಿ, ರಕ್ತದಾನವು ಒಂದು ಮಹಾದಾನ. ರಕ್ತದಾನ ಶಿಬಿರಗಳಲ್ಲಿ ಸಾರ್ವಜನಿಕರು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಬೇಕು. ಆರೋಗ್ಯವಂತ ಪ್ರತಿಯೊಬ್ಬ ವ್ಯಕ್ತಿ ರಕ್ತದಾನ ಮಾಡುವುದರಿಂದ ಮತ್ತೊಬ್ಬರ ಆರೋಗ್ಯವನ್ನೂ ಸಹ ಉಳಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಮಾತನಾಡಿ, ಜಿಲ್ಲೆಯಲ್ಲಿ 2024–25 ರ ಸಾಲಿನಲ್ಲಿ 18,000 ಯುನಿಟ್ ಶೇಖರಿಸುವ ಮೂಲಕ ಮಾದರಿ ಜಿಲ್ಲೆಯಾಗಿದೆ. ಬೇರೆ ಜಿಲ್ಲೆಗಳಿಗೂ ಸಹ ರಕ್ತ ರವಾನಿಸಲಾಗುತ್ತಿದೆ. ಈ ಶಿಬಿರದಲ್ಲಿ 1500 ಯುನಿಟ್ ರಕ್ತ ಸಂಗ್ರಹಣೆ ಗುರಿ ಹೊಂದಲಾಗಿದೆ. ರಕ್ತಹೀನತೆಯಿಂದ ಬಳಲುವ ಗರ್ಭಿಣಿ ಸ್ತ್ರೀಯರಿಗೆ, ಶಸ್ತ್ರಚಿಕಿತ್ಸಾ ಹೆರಿಗೆ ವೇಳೆ ಹಾಗೂ ಕ್ಯಾನ್ಸರ್ ರೋಗಿಗಳಿಗೆ ಜೀವ ಉಳಿಸಲು ರಕ್ತ ಸಹಕಾರಿ ಆಗುತ್ತದೆ. ಮುಂಬರುವ ದಿನಗಳಲ್ಲಿ ಜಿಲ್ಲೆಯಲ್ಲಿ ರಕ್ತದ ಕೊರತೆಯಾಗದಂತೆ ಕ್ರಮ ವಹಿಸಲಾಗುವುದು. ಜೀವ ಉಳಿಸುವ ಪುಣ್ಯದ ಕಾರ್ಯಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದರು. ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭರಾಣಿ ವಿ.ಜೆ ಅವರು ರಕ್ತದಾನ ಮಾಡುವ ಮೂಲಕ ಇತರರಿಗೆ ಮಾದರಿಯಾದರು. ಬಳಿಕ ಪ್ರಮಾಣ ಪತ್ರ ನೀಡಲಾಯಿತು.

ಈ ವೇಳೆ ಜಿಲ್ಲೆಯಲ್ಲಿ ಅತಿ ಹೆಚ್ಚು ರಕ್ತದಾನ ಮಾಡಿದ ಆಶಾ ಕಾರ್ಯಕರ್ತೆ ಪರಿಮಳ, ವಂಶಿ ಕಲ್ಯಾಣಿ ರೆಡ್ಡಿ, ಮಂಜುನಾಥ, ಲೋಕೇಶ್ ಅವರಿಗೆ ಸನ್ಮಾನ ಮಾಡಲಾಯಿತು. ರಕ್ತದಾನ ಮಾಡಿದ ವ್ಯಕ್ತಿಗಳಿಗೆ ಪ್ರಮಾಣ ಪತ್ರ ಜೊತೆಗೆ ಹಣ್ಣು, ಜ್ಯೂಸ್ ನೀಡಲಾಯಿತು. ಈ ಸಂದರ್ಭದಲ್ಲಿ ಬಿಎಂಸಿಆರ್‌ಸಿ ನಿರ್ದೇಶಕ ಟಿ.ಗಂಗಾಧರ ಗೌಡ, ಜಿಲ್ಲಾ ಶಸ್ತ್ರಚಿಕಿತ್ಸಕ ಎನ್.ಬಸರೆಡ್ಡಿ, ಮಿನೇರ ಸ್ಟೀಲ್ಸ್ ಪ್ರೈವೇಟ್ ಲಿಮಿಟೆಡ್‌ನ ನಿರ್ದೇಶಕ ಟಿ.ಹನುಮಂತ ರೆಡ್ಡಿ, ಉಪಾಧ್ಯಕ್ಷ ಗಿರೀಶ್ ಕುಮಾರ್, ಇಂಡಸ್ಟ್ರೀಸ್‌ನ ಹಿರಿಯ ಸಹಾಯಕ ನಿರ್ದೇಶಕ ವರುಣ್ ಕುಮಾರ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಆಸೀಫ್, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಹಾಗೂ ಏಡ್ಸ್ ನಿಯಂತ್ರಣಾಧಿಕಾರಿ ಡಾ.ಇಂದ್ರಾಣಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರದಾಸಪ್ಪನವರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ, ತಾರಾನಾಥ ವೈದ್ಯಕೀಯ ವಿದ್ಯಾಲಯದ ಪ್ರಶಿಕ್ಷಣಾರ್ಥಿಗಳು, ಸಾರ್ವಜನಿಕರು, ಇನ್ನಿತರರು ಉಪಸ್ಥಿತರಿದ್ದರು.

ನಿರ್ಗತಿಕ ಮಕ್ಕಳ ಆಧಾರ್ ದಾಖಲೆಗಾಗಿ ಜಿಲ್ಲಾ ಸಾಥಿ ಸಮಿತಿ ರಚನೆ

# ನಿರ್ಗತಿಕ ಮಕ್ಕಳು ಕಂಡುಬಂದಲ್ಲಿ ಮಾಹಿತಿ ನೀಡಿ: ನ್ಯಾ.ರಾಜೇಶ್ ಎನ್.ಹೊಸಮನೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.24–ರಾಷ್ಟ್ರೀಯ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಜಿಲ್ಲಾ ಮಟ್ಟದಲ್ಲಿ ನಿರ್ಗತಿಕ ಮಕ್ಕಳನ್ನು ಗುರುತಿಸಿ ಆಧಾರ್ ನೋಂದಣಿಯಲ್ಲಿ ಮಕ್ಕಳ ಹೆಸರನ್ನು ಸೇರಿಸಿ ಅವರಿಗೆ ಶಿಕ್ಷಣ, ವೈದ್ಯಕೀಯ ಮತ್ತು ಸರ್ಕಾರದಿಂದ ಬರುವ ಯೋಜನೆಗಳನ್ನು ದೊರಕಿಸಿಕೊಡುವ ಅಭಿಯಾನವನ್ನು ಕಾರ್ಯಗತಗೊಳಿಸಲು ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ "ಜಿಲ್ಲಾ ಸಾಥಿ ಸಮಿತಿ" ಯನ್ನು ರಚಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ತಿಳಿಸಿದ್ದಾರೆ.

18 ವರ್ಷದೊಳಗಿನ ನಿರ್ಗತಿಕ ಮಕ್ಕಳು ಅಂದರೆ ಸರ್ಕಾರಿ ಸಂಸ್ಥೆಗಳಲ್ಲಿ ಪಾಲನೆ ಪಡೆಯುತ್ತಿರುವ ಅಥವಾ ಆಶ್ರಯ ಮತ್ತು ರಕ್ಷಣೆ ಪಡೆಯುತ್ತಿರುವ ಮಕ್ಕಳು, ಬೀದಿಗಳಲ್ಲಿ, ಕೊಳಗೇರಿಗಳಲ್ಲಿ ಅಥವಾ ರೈಲ್ವೆ ನಿಲ್ದಾಣಗಳಲ್ಲಿ ವಾಸಿಸುತ್ತಿರುವ ಮಕ್ಕಳು, ಮಕ್ಕಳ ಆರೈಕೆ ಸ್ಥಳಗಳಲ್ಲಿ ವಾಸಿಸುವ ಮಕ್ಕಳು, ಅನಾಥರು, ಪರಿತ್ಯಕ್ತ ಮಕ್ಕಳು, ಏಕ ಪೋಷಕರ ಮಕ್ಕಳು, ಕಳ್ಳ ಸಾಗಾಣಿಕೆಯಲ್ಲಿ ಸಿಲುಕಿದ ಮಕ್ಕಳು, ಬಾಲ ಕಾರ್ಮಿಕ ಮಕ್ಕಳು, ಭಿಕ್ಷಾಟನೆ ಮಾಡುತ್ತಿರುವ ಮಕ್ಕಳು, ಒಂಟಿಯಾಗಿರುವ ಮಕ್ಕಳು, ಮಾದಕ ವ್ಯಸನ ಮಕ್ಕಳು, ಲೈಂಗಿಕ ದೌರ್ಜನ್ಯಕ್ಕೆ ಒಳಗಾದ ಮಕ್ಕಳು, ಹಿಂಸೆ ಮತ್ತು ಅತ್ಯಾಚಾರ–ಕ್ಕೆ ಒಳಗಾದ ಮಕ್ಕಳು, ಜೀತ ಪದ್ಧತಿಯಿಂದ ರಕ್ಷಿಸಲ್ಪಟ್ಟಿರುವ ಮಕ್ಕಳು, ಅನೌಪಚಾರಿಕ ಆಶ್ರಯಗಳಲ್ಲಿ ಅಥವಾ ನೋಂದಾಯಿಸದ ಮಕ್ಕಳ ಆರೈಕೆ ಮನೆಗಳಲ್ಲಿ ವಾಸಿಸುವ ಮಕ್ಕಳನ್ನು ಗುರುತಿಸಿ ಅವರಿಗೆ ಆಧಾರ್ ದಾಖಲಾತಿಯನ್ನು ಮಾಡಿಸಿ, ಕಾನೂನಿನ ನೆರವು, ಆರೋಗ್ಯ ರಕ್ಷಣೆ, ಶಿಕ್ಷಣ ಹಾಗೂ ಸರ್ಕಾರದ ಸೌಲಭ್ಯಗಳನ್ನು ಒದಗಿಸಲಾಗುತ್ತದೆ ಮತ್ತು ಆ ಮಕ್ಕಳ ಪೋಷಕರನ್ನು ತಂದೆ–ತಾಯಿಗಳನ್ನು ಗುರುತಿಸಿ ಅವರನ್ನು ಕುಟುಂಬಕ್ಕೆ ಮರಳಿಸಲಾಗುತ್ತದೆ. ಇದು ಜಿಲ್ಲಾ ಸಾಥಿ ಸಮಿತಿಯ ಅಭಿಯಾನದ ಉದ್ದೇಶವಾಗಿದೆ ಎಂದು ಅವರು ತಿಳಿಸಿದ್ದಾರೆ.

ಪಾಲನೆ ಮತ್ತು ಸಂರಕ್ಷಣೆ ಅಗತ್ಯವಿರುವ ಮಕ್ಕಳಿಗೆ ಆಧಾರ್ ನೋಂದಣಿ, ಸರಕಾರಿ ಯೋಜನೆಗಳ ಸೇರ್ಪಡೆ ಮತ್ತು ಟ್ರ್ಯಾಕಿಂ–ಗ್‌ಗಾಗಿ 'ಸಾಥಿ' ಅಭಿಯಾನದ ಸಮಿತಿಯನ್ನು ರಚಿಸಲಾಗಿದ್ದು, ಸಾಥಿ ಅಭಿಯಾನ ಸಮಿತಿಯ ಅಧ್ಯಕ್ಷರಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಸದಸ್ಯರಾಗಿ ಎರಡು ಜಿಲ್ಲೆಯ ತಾಲ್ಲೂಕುಗಳ ತಹಶೀಲ್ದಾರರು, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಡಿಡಿಪಿಐ, ಜಿಲ್ಲಾ ಆರೋಗ್ಯ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳು, ಅನಾಥಾಶ್ರಮ ಮತ್ತು ಮಕ್ಕಳ ಕಾಳಜಿ ಕೇಂದ್ರಗಳ ಅಧಿಕಾರಿಗಳು, ಪ್ಯಾನಲ್ ವಕೀಲರು ಮತ್ತು ಅರೆ–ಕಾಲಿಕ ಕಾನೂನು ಸ್ವಯಂ ಸೇವಕರು ಸಮಿತಿಯೊಂದಿಗೆ ಕಾಲೇಜು ವಿದ್ಯಾರ್ಥಿಗಳು, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ಸರ್ಕಾರೇತರ ಸಂಘಟನೆ (ಎನ್‌ಜಿಓ) ಗಳು ಸಹ ಕೆಲಸ ನಿರ್ವಹಿಸುತ್ತಾರೆ.

ಈ ಅಭಿಯಾನಕ್ಕೆ ಸಾರ್ವಜನಿಕರು ಸಹ ಕೈ ಜೋಡಿಸಿದಾಗ ಮಾತ್ರ ಯಶಸ್ವಿಯಾಗುತ್ತದೆ. ಹಾಗಾಗಿ ಸಾರ್ವಜನಿಕರು ಯಾವುದೇ ರೀತಿಯ ನಿರ್ಗತಿಕ ಮಕ್ಕಳನ್ನು ನೋಡಿದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ದೂ.08392–278077, ಮೊ.9141193929, ಮಕ್ಕಳ ಸಹಾಯವಾಣಿ ಸಂಖ್ಯೆ 1098 ಹಾಗೂ ಉಚಿತ ಕಾನೂನು ಸೇವೆ ಸಂಖ್ಯೆ 15100 ಗೆ ಕರೆ ಮಾಡಿ ಮಾಹಿತಿ ನೀಡಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಕಸ್ಮಿಕ ದಾಳಿ; 09 ಬಾಲ ಕಾರ್ಮಿಕರ ರಕ್ಷಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.24–ನಗರದ ಅನಂತಪುರ ರಸ್ತೆ, ತಾಳೂರು ರಸ್ತೆ, ಸಿರುಗುಪ್ಪ ರಸ್ತೆಯ ವಿವಿಧ ಸ್ಥಳಗಳಲ್ಲಿರುವ ಗ್ಯಾ–ರೇಜ್, ಮೆಕ್ಯಾನಿಕ್ ಶಾಪ್, ಬೇಕರಿ ಇತ್ಯಾದಿ ಉದ್ದಿಮೆಗಳ ಮೇಲೆ ಟಾಸ್ಕ್ ಪೋರ್ಸ್ ಸಮಿತಿ ಅಧಿಕಾರಿಗಳ ತಂಡವು ಮಂಗಳವಾರ ಆಕಸ್ಮಿಕ ಭೇಟಿ ನೀಡಿ ಪರಿವೀಕ್ಷಣೆ ನಡೆಸಿದಾಗ 09 ಬಾಲಕಾರ್ಮಿಕರು ಕೆಲಸ ಮಾಡುತ್ತಿರುವುದು ಕಂಡುಬಂದಿದ್ದು, ಎಲ್ಲಾ ಮಕ್ಕಳನ್ನು ಮಕ್ಕಳ ಕಲ್ಯಾಣ ಸಮಿತಿಗೆ ಹಾಜರುಪಡಿಸಲಾಗಿದ್ದು, ಮಕ್ಕಳ ವಯಸ್ಸಿನ ದೃಢೀಕರಣ ದಾಖಲೆ ಹಾಗೂ ಮಾಲೀಕರ ದಾಖಲೆ ಪಡೆದು ಮಾಲೀಕರ ವಿರುದ್ಧ ಬಾಲ ಹಾಗೂ ಕಿಶೋರ ಕಾರ್ಮಿಕ ಕಾಯ್ದೆಯಡಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾಧಿಕಾರಿ ಮೌನೇಶ್ ತಿಳಿಸಿದ್ದಾರೆ.

# ಅಂಚೆ ಇಲಾಖೆಯಲ್ಲಿ ಸುಧಾರಿತ ಹಾಗೂ ವೇಗದ ಸೇವೆಗೆ ಹೊಸ ತಂತ್ರಾಂಶ ಜಾರಿ: ಪಿ.ಚಿದಾನಂದ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.24:ಅಂಚೆ ಇಲಾಖೆಯಲ್ಲಿ ಅಡ್ವಾನ್ಸಡ್ ಪೋಸ್ಟಲ್ ಟೆಕ್ನಾಲಜಿ (ಎಟಿಪಿ 2.0) ತಂತ್ರಾಂಶ ಅಂಚೆ ಇಲಾಖೆಯ ಎಲ್ಲ ಗ್ರಾಹಕರಿಗೆ ಸುಧಾರಿತ ಹಾಗೂ ತೃಪ್ತಿದಾಯಕವಾದ ಸೇವೆಗಳನ್ನು ನೀಡುವಲ್ಲಿ ಪ್ರಮುಖ ಪಾತ್ರವಹಿಸಲಿದೆ ಎಂದು ಅಂಚೆ ಅಧೀಕ್ಷಕ ಪಿ.ಚಿದಾನಂದ ಅವರು ಹೇಳಿದರು.

ಮಂಗಳವಾರ ನಗರದ ಪ್ರಧಾನ ಅಂಚೆ ಕಚೇರಿಯಲ್ಲಿ ಬಳ್ಳಾರಿ ಅಂಚೆ ವಿಭಾಗದ ಬಳ್ಳಾರಿ ಪ್ರಧಾನ ಅಂಚೆ ಕಚೇರಿ ಹಾಗೂ ಅದರಡಿ ಬರುವ ಎಲ್ಲಾ ಉಪ ಅಂಚೆ ಕಚೇರಿಗಳು ಮತ್ತು ಶಾಖಾ ಅಂಚೆ ಕಚೇರಿಗಳಲ್ಲಿ ಎಪಿಟಿ 2.0 ತಂತ್ರಾಂಶ ಅಳವಡಿಕೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಭಾರತೀಯ ಅಂಚೆ ಇಲಾಖೆಯು 170 ವರ್ಷಗಳ ಸುದೀರ್ಘ ಇತಿಹಾಸ ಹೊಂದಿದ್ದು, ಭಾರತೀಯ ಜನಸಮುದಾಯದ ನಾಡಿ ಮಿಡಿತವಾಗಿ ಕಾರ್ಯ ನಿರ್ವಹಿಸುತ್ತಿದೆ. ಆಧುನಿಕ ಯುಗದ ಸವಾಲುಗಳಿಗೆ ಒಡ್ಡಿಕೊಂಡು ತನ್ನ ಗ್ರಾಹಕರಿಗೆ ಯಾವಾಗಲೂ ಉತ್ತಮವಾದ ಸೇವೆಗಳನ್ನು ಒದಗಿಸುವಲ್ಲಿ ಇಲಾಖೆಯು ಸದಾ ಮುಂಚೂಣಿಯಲ್ಲಿದೆ. ಈ ನಿಟ್ಟಿನಲ್ಲಿ ಕರ್ನಾಟಕದ ಮೈಸೂರುನಲ್ಲಿರುವ 'ಸೆಂಟ–ರ್ ಫಾರ್ ಎಕ್ಸಲೆನ್ಸ್ ಇನ್ ಪೋಸ್ಟಲ್ ಟೆಕ್ನಾಲಜಿ' ಎನ್ನುವ ತನ್ನದೇ ತಾಂತ್ರಿಕ ವಿಭಾಗದ ನುರಿತ ಸಿಬ್ಬಂದಿ ವರ್ಗದವರೇ ರೂಪುಗೊಳಿಸಿದ ಹೊಸದಾದ ಅತ್ಯಂತ ಸುಧಾರಿತ ಮತ್ತು ಗ್ರಾಹಕ ಸ್ನೇಹಿ ತಂತ್ರಾಂಶವನ್ನು ದೇಶದ ಎಲ್ಲಾ ಅಂಚೆ ಕಚೇರಿಗಳಲ್ಲಿ ಅಳವಡಿಸಿಕೊಳ್ಳಲು ಮುಂದಾಗಿದೆ ಎಂದು ತಿಳಿಸಿದರು.

ಜೂ.23 ರಿಂದ ಬಳ್ಳಾರಿ ಅಂಚೆ ವಿಭಾಗದ ವ್ಯಾಪ್ತಿಗೆ ಬರುವ ಬಳ್ಳಾರಿ ಪ್ರಧಾನ ಅಂಚೆ ಕಚೇರಿ, ಬಳ್ಳಾರಿ ನಗರದಲ್ಲಿರುವ ಇತರೆ ಎಲ್ಲಾ ಅಂಚೆ ಕಚೇರಿಗಳು, ಸಿರುಗುಪ್ಪ, ಸಿರುಗುಪ್ಪ ಸದಾಶಿವನಗರ, ಹಚ್ಚೊಳ್ಳಿ, ತೆಕ್ಕಲಕೋಟೆ, ಎಮ್ಮಿಗನೂರು, ಕುರುಗೋಡು, ಸಿರಿಗೇರಿ, ಕರೂರು, ಕೋಳೂರು, ಮೋಕಾ, ಚೆಳ್ಳಗುರ್ಕಿ, ಕುಡುತಿನಿ, ಬಿ.ಟಿ.ಪಿ.ಎಸ್, ತೋರಣಗಲ್ಲು, ವಿದ್ಯಾನಗರ, ಶಂಕರಹಿಲ್ ಟೌನ್, ಸಂಡೂರು, ಸಂಡೂರು ಲಕ್ಷ್ಮೀಪುರ, ದೇವಗಿರಿ, ದೋಣಿಮಲೈ ಟೌನ್ ಶಿಪ್, ಯಶವಂತನಗರ, ಉಪ ಅಂಚೆ ಕಚೇರಿಗಳು ಹಾಗೂ ಸಂಬಂಧಿತ ಶಾಖಾ ಅಂಚೆ ಕಚೇರಿಗಳಲ್ಲಿ ಅಡ್ವಾನ್ಸಡ್ ಪೋಸ್ಟಲ್ ಟೆಕ್ನಾಲಜಿ 2.0 ನಲ್ಲಿಯೇ ಎಲ್ಲಾ ತರಹದ ವಹಿವಾಟುಗಳು ಜರುಗುತ್ತವೆ ಎಂದು ತಿಳಿಸಿದರು.

ಈ ಮೊದಲು ಬಳಸುತ್ತಿದ್ದ ತಂತ್ರಾಂಶಗಳು ಅನ್ಯ ಟೆಕ್–ಕಂಪೆನಿಗಳಿಂದ ಪಡೆದದ್ದ–ರಿಂದ ಬಹಳ ತೊಂದರೆಗಳನ್ನು ಎದುರಿಸಬೇಕಾಗಿತ್ತು. ಹಾಗಾಗಿ ಅಂಚೆ ಇಲಾಖೆಯು ತನ್ನದೇ ನುರಿತ ತಂತ್ರಜ್ಞರಿಂದ ಗ್ರಾಹಕರಿಗೂ ಹಾಗೂ ತಂತ್ರಾಂಶವನ್ನು ಬಳಸುವ ಉದ್ಯೋಗಿಗಳಿಗೂ ಅನುಕೂಲವಾಗುವಂತೆ ಅಡ್ವಾನ್ಸಡ್ ಪೋಸ್ಟಲ್ ಟೆಕ್ನಾಲಜಿ 2.0 ಅನ್ನು ರೂಪಿಸಲಾಗಿದೆ ಎಂದರು.

ಪೋಸ್ಟ್ ಮ್ಯಾನ್ ಕಾಗದ–ಪತ್ರಗಳನ್ನು ಬಟವಾಡೆ ಮಾಡುವ ಪ್ರಕ್ರಿಯೆಯನ್ನು ಸುಧಾರಿಸಲಾಗಿದ್ದು, ಗ್ರಾಹಕರ ಮನೆಯ ಬಾಗಿಲಿನಲ್ಲಿಯೇ ಕಾಗದ ಪತ್ರ ಬಟವಾಡೆಯಾದ ಬಗ್ಗೆ ಮಾಹಿತಿಯು ಪತ್ರಸ್ವೀಕರಿಸಿದವರ ಮೊಬೈಲ್ ಸಂಖ್ಯೆಗೂ ಹಾಗೂ ಪತ್ರವನ್ನು ಕಳುಹಿಸಿದವರ ಮೊಬೈಲ್ ಸಂಖ್ಯೆಗೂ ರವಾನೆಯಾಗಲಿದೆ.

ಅಂಚೆ ಕಚೇರಿಯಲ್ಲಿ ಕಾಗದ ಪತ್ರಗಳನ್ನು ಬುಕ್ ಮಾಡಲು, ಮನೀ ಆರ್ಡರ್ ಕಳುಹಿಸಲು ಇನ್ನು ಮುಂದೆ ಯಾವುದೇ ನೆಟ್‌ವರ್ಕ್ ಸಮಸ್ಯೆಯನ್ನು ಎದುರಿಸುವ ಅಗತ್ಯವಿಲ್ಲ. ಹೊಸ ತಂತ್ರಾಂಶವು ಯಾವುದೇ ಪಬ್ಲಿಕ್ ನೆಟ್‌ವರ್ಕ್ ನಲ್ಲಿ ಕಾರ್ಯ ನಿರ್ವಹಿಸುವ ಸಾಮರ್ಥ್ಯವನ್ನು ಹೊಂದಿದೆ. ಹಾಗಾಗಿ ಗ್ರಾಹಕರು ಇನ್ನೂ ಹೆಚ್ಚಿನ ವೇಗದಲ್ಲಿ ತಮ್ಮ ಸೇವೆಗಳನ್ನು ಅಂಚೆ ಕಚೇರಿಗಳಿಂದ ಪಡೆಯಬಹುದು ಎಂದು ತಿಳಿಸಿದರು.

ಹೊಸ ತಂತ್ರಾಂಶದಲ್ಲಿ ಅಂಚೆ ಇಲಾಖೆಯ ಗ್ರಾಹಕರು ತಮ್ಮ ಮನೆಯಿಂದಲೇ ಕಾಗದ ಪತ್ರಗಳನ್ನು ಬುಕ್ ಮಾಡಿಕೊಳ್ಳಬಹುದು ಹಾಗೂ ಅವುಗಳನ್ನು ತಮ್ಮ ಮನೆಯಿಂದಲೇ ಅಂಚೆ ಕಚೇರಿಗೆ ತೆಗೆದುಕೊಂಡು ಹೋಗುವಂತೆ ಪಿಕ್–ಅಪ್ ಸೇವೆಯನ್ನು ಸಹ ಬಳಸಿಕೊಳ್ಳಬಹುದು. ಇದು ಅತ್ಯಂತ ಆಕರ್ಷಣೀಯವಾದ ಹಾಗೂ ಗ್ರಾಹಕೋಪಯೋಗಿ ಸೇವೆಯಾಗಿದೆ ಎಂದರು.

ಜೂ.24 ರಿಂದ ಬಳ್ಳಾರಿಯ ಪ್ರಧಾನ ಅಂಚೆ ಕಚೇರಿಯಲ್ಲಿ 'ಸಂಜೆ ಅಂಚೆ' ಎನ್ನುವ ಹೊಸ ಸೇವೆಯನ್ನು ಜಾರಿಗೊಳಿಸಲಾಗುತ್ತಿದೆ. ಗ್ರಾಹಕರು ಸಂಜೆ 04 ರಿಂದ 7.30 ರ ವರೆಗೆ ತಮ್ಮ ಸ್ಪೀಡ್ ಪೋಸ್ಟ್, ರೆಜಿಸ್ಟರ್ಡ್ ಕಾಗದ ಪತ್ರಗಳು, ಪಾರ್ಸಲ್ ಗಳನ್ನು ಕಳುಹಿಸಲು ಮತ್ತು ಅಂಚೆ ಚೀಟಿಗಳನ್ನು ಖರೀದಿಸಲು ಈ ಸೇವೆಯನ್ನು ಉಪಯೋಗಿಸಿಕೊಳ್ಳಬಹುದಾಗಿದೆ ಎಂದು ಅಂಚೆ ಅಧೀಕ್ಷಕ ಪಿ.ಚಿದಾನಂದ ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಬಳ್ಳಾರಿ ಪ್ರಧಾನ ಅಂಚೆ ಕಚೇರಿಯ ಅಂಚೆ ಪಾಲಕರಾದ ಭೀಮಸೇನ ಜೋಶಿ, ಸಹಾಯಕ ಅಂಚೆ ಪಾಲಕರಾದ ರಾಜಶೇಖರ, ವಿ.ತಿಂದಪ್ಪ ಮತ್ತು ನಾಗಭೂಷಣ, ಲೆಕ್ಕಪಾಲಕರಾದ ರಾಮಪ್ರಸಾದ, ತಾಂತ್ರಿಕ ಪರಿಣಿತರಾದ ಶರತ್ ಕುಮಾರ್, ಪ್ರತಾಪ್ ರೆಡ್ಡಿ, ಪ್ರತಾಪ್ ನಾಯಕ, ಪ್ರಧಾನ ಅಂಚೆ ಕಚೇರಿಯ ಎಲ್ಲಾ ಅಂಚೆ ಸಹಾಯಕರು, ಅಂಚೆ ಪೇದೆಗಳು, ಎಂಟಿಎಸ್ ಹಾಗೂ ಜಿಡಿಎಸ್ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಯುವ ಸಬಲೀಕರಣ, ಕ್ರೀಡಾ ಇಲಾಖೆ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.24–ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 'ನಮ್ಮೂರ ಶಾಲೆಗೆ ನಮ್ಮ ಯುವಜನರು' ಯೋಜನೆಯಡಿ ಪ್ರಸ್ತಕ ಸಾಲಿಗೆ ತಾಲ್ಲೂಕು, ಜಿಲ್ಲೆ, ರಾಜ್ಯ ಮತ್ತು ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಉತ್ತಮ ಸಾಧನೆ ತೋರುವ ಕ್ರೀಡಾಪಟುಗಳನ್ನು ಹೊಂದಿರುವ ಸರ್ಕಾರಿ ಶಾಲೆಗೆ ರೂ.1 ಲಕ್ಷ ಪ್ರೋತ್ಸಾಹಧನ ನೀಡಲು ಉದ್ದೇಶಿಸಲಾಗಿದ್ದು, ಆಸಕ್ತಿಯುಳ್ಳ ಸರ್ಕಾರಿ ಶಾಲೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಅನುದಾನದಲ್ಲಿ ಆಯ್ಕೆಯಾದ ಶಾಲೆಯ ದೈಹಿಕ ಶಿಕ್ಷಕರಿಗೆ ರೂ.10 ಸಾವಿರ ಮತ್ತು ಉಳಿದ ರೂ.90 ಸಾವಿರ ಶಾಲೆಯ ಎಸ್‌ಡಿಎಂಸಿಗೆ ಅಗತ್ಯ ಕ್ರೀಡಾ ಸಾಮಾಗ್ರಿಗಳನ್ನು ಖರೀದಿಸಲು ನೀಡಲಾಗುವುದು.

ಹಾಗಾಗಿ ಜಿಲ್ಲೆಯಲ್ಲಿ ಪ್ರೋತ್ಸಾಹಧನ ಪಡೆಯಬಯಸುವ ಸರ್ಕಾರಿ ಶಾಲೆಗಳು 2024–25ನೇ ಸಾಲಿಗೆ ಕ್ರೀಡೆಯಲ್ಲಿ ಉತ್ತಮ ಸಾಧನೆ ತೋರಿರಬೇಕು ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಪಟುಗಳನ್ನು ಹೊಂದಿರಬೇಕು. ಅರ್ಜಿ ಸಲ್ಲಿಸಲು ಜೂ.27 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ನಗರದ ನಲ್ಲಚೇರುವು ಪ್ರದೇಶದ ಜಿಲ್ಲಾ ಕ್ರೀಡಾಂಗಣದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರ ಧನ್ಯತಾಭಾವದ ಪ್ರತೀಕವೇ ಮಣ್ಣೆತ್ತಿನ ಅಮವಾಸ್ಯೆ

ಬಾಗಲಕೋಟೆ,ಜೂ.24– ಭಾರತ ವೈವಿಧ್ಯಮಯ ದೇಶ. ನಮ್ಮಲ್ಲಿರುವ ಸಂಪ್ರದಾಯ, ಹಬ್ಬ, ಆಚರಣೆಗಳಿಗೆ ಸಾಂಸ್ಕೃತಿಕವಾಗಿ ಬಹಳ ಮಹತ್ವವಿದೆ. ರೈತ ವರ್ಗಕ್ಕೆ ಹಲವಾರು ನೆಲಮೂಲ ಸಂಸ್ಕೃತಿ ಮತ್ತು ಪರಂಪರೆ ಹೊಂದಿರುವ ಹಬ್ಬಗಳಿವೆ. ಅದರಲ್ಲಿ ಮಣ್ಣೆತ್ತಿನ ಅಮಾವಾಸ್ಯೆ ಸಾಮಾನ್ಯ ಜನರಿಗೆ ಮತ್ತು ರೈತಾಪಿ ವರ್ಗದವರಿಗೆ ವಿಶೇಷತೆ ಹಬ್ಬವಾಗಿದೆ. ಮಣ್ಣೆತ್ತಿನ ಅಮಾವಾಸ್ಯೆ ದಿನ ಮಣ್ಣಿನಿಂದ ಮಾಡಿದ ಎತ್ತುಗಳಿಗೆ ಅಲಂಕರಿಸಿ, ಹಬ್ಬವನ್ನು ಆಚರಿಸಲಾಗುವುದು. ಮಣ್ಣಿನ ಎತ್ತಿನ ಪ್ರತಿಮೆಗಳಿಗೆ ಸಿಂಗರಿಸಿ, ಪೂಜೆ ಮಾಡುವ ಈ ಸಂಪ್ರದಾಯವು ಉತ್ತರ ಕರ್ನಾಟಕದಲ್ಲಿ ವಿಶೇಷವಾಗಿದೆ.

ಉತ್ತರ ಕರ್ನಾಟಕದಲ್ಲಿಂದು ವಿಶೇಷವಾಗಿ ರೈತರ ಪರಂಪರೆಯಲ್ಲಿ ಮುಂಗಾರು ಹಂಗಾಮು ಪ್ರಾರಂಭದೊಂದಿಗೆ ರೈತರು ಕೃಷಿ ಕಾರ್ಯಚಟುವಟಿಕೆಗಳೊಂದಿಗೆ ಪಾರಂಪರಿಕವಾಗಿ ಬಂದಿರುವ ನೆಲಮೂಲ ಸಂಸ್ಕೃತಿಯನ್ನು ಹೊಂದಿರುವ ಹಬ್ಬಗಳು ಪ್ರಾರಂಭವಾಗುತ್ತವೆ. ಒಂದೆಡೆ ಕೃಷಿಕರು ತಮ್ಮ ತಮ್ಮ ಮನೆಗಳಲ್ಲಿರುವ ಬಸವಣ್ಣನ ಸ್ವರೂಪಿಯಾದ ಎತ್ತುಗಳನ್ನು ಪೂಜಿಸಿದರೆ, ಈ ಮಣ್ಣೆತ್ತಿನ ಅಮಾವಾಸ್ಯೆಯಲ್ಲಿ ನಗರ, ಪಟ್ಟಣದ ವಾಸಿಗಳಿಗೆ ಮಣ್ಣಿನ ಎತ್ತುಗಳನ್ನು ತಂದು ಪೂಜಿಸುವುದು ಪಾರಂಪರಿಕವಾಗಿ ಬೆಳೆಸಿಕೊಂಡು ಬಂದಿದ್ದಾರೆ.



ಗ್ರಾಮೀಣ ಪರಿಸರದಲ್ಲಿ ರೈತರು ತಾವೇ ತಮ್ಮ ಹೊಲದಲ್ಲಿರುವ ಮಣ್ಣನ್ನು ತಂದು ಹದವಾಗಿ ಕಲಿಸಿ, ಅದರಿಂದ ಎತ್ತುಗಳನ್ನು ತಯಾರಿಸಿ ಪೂಜಿಸುವ ಪರಂಪರೆಯನ್ನು ರೂಢಿಸಿಕೊಂಡು ಬಂದಿದ್ದಾರೆ.

ರೈತರ ಸ್ನೇಹಿತವಾಗಿರುವ ಎತ್ತುಗಳು ಅನ್ನದಾತರ ಜೀವದ ಸಂಗಾತಿಗಳಾಗಿವೆ. ರೈತರ ಕೃಷಿ ಬದುಕಿನಲ್ಲಿ ಅವರ ಜೀವನದಲ್ಲಿ ಆಧಾರ ಸ್ತಂಬವಾಗಿ ನಿಲ್ಲುವ, ಹೊಲದಲ್ಲಿ ರೈತರ ಬೆನ್ನೆಲುಬಾಗಿ ದುಡಿಯುವ ಎತ್ತುಗಳನ್ನು ಬಸವಣ್ಣನೆಂದೆ ನಂಬಿ ನಮ್ಮ ರೈತರು ಪೂಜಿಸಿಕೊಂಡು ಬಂದಿದ್ದಾರೆ. ಮಣ್ಣೆತ್ತಿನ ಅಮಾವಾಸ್ಯೆಗೆ ಮಣ್ಣಿನ ಬಸವಣ್ಣನನ್ನು ಮನೆಗೆ ತಂದು ಪೂಜಿಸುತ್ತಾರೆ. ಇದರೊಂದಿಗೆ ತಮ್ಮ ಮನೆಯ ಆಧಾರ ಸ್ಥಂಬವಾಗಿರುವ ನೈಜ ಎತ್ತುಗಳಿಗೂ ಕೂಡ ಅಲಂಕಾರ ಮಾಡಿ, ಭಕ್ತಿಯಿಂದ ಪೂಜಿಸುವ ಪರಂಪರೆಯು ರೈತರದ್ದಾಗಿದೆ.

ದೇಶಿಯ ಹಬ್ಬಗಳಿಗೆ ಸಂಬಂಧಿಸಿದ ಹಾಗೆ ಪರಿಸರಕ್ಕೆ ಪೂರಕವಾದ ಮಣ್ಣಿನಿಂದ ಮಾಡಿರುವ ಮೂರ್ತಿಗಳು ಪೂಜೆಗೆ ಸರ್ವಶ್ರೇಷ್ಠ ಎಂದು ನಮ್ಮ ಹಿರಿಯ ಹೇಳಿದ್ದಾರೆ. ಈ ಮೊದಲು ಗ್ರಾಮೀಣ ಪರಿಸರದಲ್ಲಿ ಹಬ್ಬಗಳನ್ನು ಆಚರಿಸುವುದೆಂದರೆ ಎಲ್ಲಿಲ್ಲದ ಹಿಗ್ಗು. ಮನೆ ಮಂದಿ ಎಲ್ಲ ಸೇರಿ, ಹಬ್ಬದ ಆಚರಣೆ ಮಾಡುತ್ತಿದ್ದರು. ಆದರೆ ಇತ್ತೀಚಿನ ದಿನಗಳಲ್ಲಿ ಹಬ್ಬದ ಸಂಭ್ರಮ ಕೇವಲ ಸಂಪ್ರದಾಯ ಆಚರಣೆಗೆ ಮಾತ್ರ ಸೀಮಿತವಾಗಿ ಉಳಿದಿದೆ.

"ಮೊದ್ಲ ಮನ್ಯಾಗ ಸಾಕಷ್ಟ ಮಂದಿ ಇರತಿದ್ರು. ಹಬ್ಬ ಎಲ್ಲಾರೂ ಕೂಡಿ ಮಾಡತಿದ್ರು. ಆದ್ರೆ ಈಗೇನ ಮಾಡುದ್ರಿ, ಮನ್ಯಾಗ ಮಕ್ಕಳನ ಸಾಲಿಗೆ ಕಳಸಬೇಕು. ನಾವ ನೌಕರಿಗೆ ಹೋಗಬೇಕು. ಅಂಥಾದ್ರಾಗ ಹಬ್ಬ ಮಾಡಾಕ ಎಲ್ಲಿ ಟೈಮ್ ಸಿಗತೈತಿ. ಬೆಳಿಗ್ಗೆ ಪೂಜಾ ಮಾಡಿ, ಕೈ ಮುಗದ್ರ ಮುಗೀತಪ ಹಬ್ಬ" ಎನ್ನುವುದು ಇಂದಿನ ಸಮುದಾಯಗಳ ಚಿಂತನೆ ಆಗಿದೆ.

ಈ ದಿನ ರೈತರು ತಮ್ಮ ಹೊಲಕ್ಕೆ ಹೋಗಿ, ಹೊಲದ ಮಣ್ಣು ತಂದು ಆ ಮಣ್ಣಿನಿಂದ ಜೋಡಿ ಎತ್ತುಗಳನ್ನು ತಯಾರಿಸುತ್ತಾರೆ. ನಂತರ ಅವುಗಳಿಗೆ ಬಣ್ಣ ಹಚ್ಚಿ ಸಿಂಗಾರ ಮಾಡಿ, ಪೂಜಿಸಲಾಗುವುದು. ನಂತರ ಎತ್ತುಗಳಿಗೆ ಹೋಳಿಗೆ, ಸಿಹಿ ಕಡಬು ಇಟ್ಟು ಸಮರ್ಪಿಸಲಾಗುತ್ತದೆ. ನಂತರ ತಮ್ಮ ಜಮೀನಿನಲ್ಲಿ ಆ ಎತ್ತುಗಳನ್ನು ಇಟ್ಟು ಭೂತಾಯಿ ಹಾಗೂ ಎತ್ತುಗಳು ತಮ್ಮ ಬೆಳೆಯನ್ನು ರಕ್ಷಣೆ ಮಾಡಿ ಎಂದು ಬೇಡಿಕೊಳ್ಳುವುದು ಸಂಪ್ರದಾಯವಿದೆ. ಜೊತೆಗೆ ಈ ಮೂಲಕ ಮಣ್ಣಿನ ಆರಾಧನೆಯನ್ನು ಕೂಡ ಮಾಡಲಾಗುವುದು. ಮಣ್ಣಿನಿಂದ ಮಾಡಿದ ಗಣಪತಿ, ನಾಗಪ್ಪನ ನಾವು ಗಣೇಶ ಚತುರ್ಥಿ ಮತ್ತು ನಾಗರಚೌತಿ ದಿನ ಪೂಜಿಸುವಂತೆ ರೈತರು ಮಣ್ಣೆತ್ತಿನ ಅಮಾವಾಸ್ಯೆ ಹಬ್ಬದಂದು ಮಣ್ಣಿನಿಂದ ಮಾಡಿದ ಎತ್ತುಗಳನ್ನು ಪೂಜೆ ಮಾಡುವ ಮೂಲಕ ಆಚರಿಸುತ್ತಾರೆ.

ಉತ್ತರ ಕರ್ನಾಟಕ ಮತ್ತು ನಾಡಿನಾದ್ಯಂತ ಇಂದಿನಿಂದ ಮುಂದೆ ಬರುವ ಹಬ್ಬಗಳು ವಿಶೇಷವಾಗಿ ಮಣ್ಣಿನಿಂದಲೆ ತಯಾರಿಸಿದ ಹಬ್ಬಗಳಾಗಿವೆ. ನಾಗರಪಂಚಮಿಯಂದು ನಾಗಪ್ಪ, ಗೌರಿ ಹುಣ್ಣಿಮೆಯಂದು ಗೌರಿ, ಗಣೇಶ ಚೌತಿಯಂದು ಗಣಪತಿ ಹೀಗೆ ಮಣ್ಣಿನ ಮೂರ್ತಿಗಳನ್ನೇ ಆರಾಧಿಸುವ ಪದ್ಧತಿ ಮೊದಲಿನಿಂದಲೂ ಬಂದಿದೆ. ಈ ಪವಿತ್ರವಾದ ಮಣ್ಣೆತ್ತಿನ ಅಮಾವಾಸ್ಯೆಯ ದಿನದಂದು ಭಕ್ತಿಯಿಂದ ಪೂಜೆಯಲ್ಲಿ ತೊಡಗಿರುವ ಎಲ್ಲ ಸಮಸ್ತ ನಾಗರಿಕರಿಗೆ, ವಿಶೇಷವಾಗಿ ರೈತರಿಗೆ ಒಳ್ಳೆಯದಾಗಲಿ ಎಂಬುದು ಎಲ್ಲರ ಆಶಯ.

**ಡಾ.ಚಂದ್ರಶೇಖರ ಕಾಳನ್ನವರ**
**ಉಪನ್ಯಾಸಕರು, ತೆಗ್ಗಿ,**
**ಗುಳೇದಗುಡ್ಡ ತಾಲೂಕು**

# ಶಾಲಾ ಮಕ್ಕಳಿಗೆ ಕಲಿಕಾ ಸಾಮಗ್ರಿ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.24– ನಗರದ ಹುಲಿಗೆಮ್ಮದೇವಿ ಸೇವಾ ಸಂಘದ ವತಿಯಿಂದ ಹಮಾಲರ ಕಾಲೋನಿಯಲ್ಲಿರುವ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಸಾಹಿತಿ ರಾಜು ಯಾದವ, ಸರಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಉತ್ತಮ ಶಿಕ್ಷಣ ಸಿಗುತ್ತಿದೆ. ಅಲ್ಲಿನ ಬಡ ಮಕ್ಕಳಿಗೆ ಸಂಘ–ಸಂಸ್ಥೆಗಳ ಸಹಕಾರ, ಪ್ರೋತ್ಸಾಹ ತುಂಬಾ ಅಗತ್ಯವಾಗಿದೆ. ಹುಲಿಗೆಮ್ಮ ದೇವಿ ಸೇವಾ ಸಂಘದಿಂದ ಸರ್ಕಾರಿ ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ಕಲಿಕೆಗೆ ನೆರವಾಗಲೆಂದು ಕಲಿಕಾ ಸಾಮಗ್ರಿ ವಿತರಿಸುತ್ತಿದ್ದು ಇದು ಸಮಾಜಕ್ಕೆ ಪ್ರೇರಣೆ–ಯಾಗಿದೆ ಎಂದು ಹೇಳಿದರು. ಸಂಘದ ಅಧ್ಯಕ್ಷ ನಿಂಗರಾಜ ಮಬ್ರುಮಕರ ಮಾತನಾಡಿ, ಮೂರು ವರ್ಷದಿಂದ ಸರಕಾರಿ ಶಾಲೆ ಮಕ್ಕಳಿಗೆ ಕಲಿಕಾ ಸಾಮಗ್ರಿಗಳಾದ ನೋಟ್ ಬುಕ್ಸ್, ಡ್ರಾಯಿಂಗ್ ಬುಕ್, ಕಂಪಾಸ್, ಪೆನ್ ಹಾಗೂ ಪೆನ್ಸಿಲ್ ಮುಂತಾದ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಗುತ್ತಿದೆ. ಮಕ್ಕಳು ಶ್ರದ್ಧೆಯಿಂದ ಓದು ಬರಹದಲ್ಲಿ ತೊಡಗಿಸಿಕೊಳ್ಳಬೇಕು. ಶಿಕ್ಷಣ ಮಾತ್ರ ಮನುಷ್ಯನನ್ನು ಎತ್ತರಕ್ಕೆ ಕೊಂಡೊಯ್ಯುವ ಸಾಧನವಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸಮಾಜ ಸೇವಕಿ ರೇಣುಕಾ ನ್ಯಾಮಗೌಡರ, ಯೋಗಗುರು ಎನ್.ಬಿ.ಮದಕಟ್ಟಿ, ಓಂಕಾರ ದಳವಾಯಿ, ಮುಖ್ಯಗುರುಮಾತೆ ಎಸ್.ಸಿ.ಮೆಣಸಗಿ, ಶಿಕ್ಷಕಿ ಆರ್.ಬಿ..ಪದರಾ, ನೂರ್‌ಜಹಾನ್ ರೊಳ್ಳಿ, ಮಲ್ಲಪ್ಪ ನ್ಯಾಮಗೌಡರ ಮುಂತಾದವರು ಪಾಲ್ಗೊಂಡಿದ್ದರು.




# ಬಸವರಾಜ ಸಿಂಪಿಗೆ ರಾಜ್ಯಮಟ್ಟದ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.24–ದ್ವಿತಿಯ ಪಿಯುಸಿಯ ವಿಜ್ಞಾನ ವಿಭಾಗದಲ್ಲಿ ಶೇ.92.5 ರಷ್ಟು ಅಂಕ ಗಳಿಸಿದ ಜಿಲ್ಲೆಯ ಇಲಕಲ್ಲ ತಾಲೂಕಿನ ಕಂದಗಲ್ಲ ಪತ್ರಕರ್ತ ವೀರೇಶ ಶಿಂಪಿ ಅವರ ಪುತ್ರ ಬಸವರಾಜ ಸಿಂಪಿಯನ್ನು ಈಚೆಗೆ ಚಾಮರಾಜನಗರ ಜಿಲ್ಲೆಯ ಮಲೆ ಮಹದೇಶ್ವರ ಬೆಟ್ಟದಲ್ಲಿ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ನಡೆದ ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಸನ್ಮಾನಿಸಲಾಯಿತು.

ರಾಜ್ಯ ಪಶು ಸಂಗೋಪನ ಮತ್ತು ರೇಷ್ಮೆ ಸಚಿವರಾದ ಕೆ.ವೆಂಕಟೇಶ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ, ಪದಾಧಿಕಾರಿಗಳು ಹಾಗೂ ಚಾಮರಾಜನಗರ ಜಿಲ್ಲಾಧಿಕಾರಿಗಳು, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳು ಮತ್ತು ಮುಖಂಡರು ವೀರೇಶ ಸಿಂಪಿ ಸೇರಿ ಅನೇಕ ಜನ ಪತ್ರಕರ್ತರ ಪ್ರತಿಭಾನ್ವಿತ ಮಕ್ಕಳನ್ನು ಸನ್ಮಾನಿಸಿ, ಪ್ರಮಾಣಪತ್ರ ನೀಡಲಾಯಿತು.

ಜಿಲ್ಲೆಯ ಪ್ರತಿನಿಧಿಯಾಗಿ ಪ್ರಶಸ್ತಿ, ಸನ್ಮಾನ ಪಡೆದ ಬಸವರಾಜ ಸಿಂಪಿಯನ್ನು ಕಂದಗಲ್ಲ ಗ್ರಾಮದ ಚನ್ನಪ್ಪಗೌಡ ನಾಡಗೌಡ್ರ, ಮಹಾಂತೇಶ ಕಡಿವಾಲ, ಮಹ್ಮದಸಾಬ ಭಾವಿಕಟ್ಟಿ, ಅಮರೇಶ ಕೊಡಕೇರಿ, ಲಿಂಗರಾಜು ಶಿರಗುಂಪಿ, ಸಂಗಣ್ಣ ಹವಾಲ್ದಾರ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಆನಂದ ಧಲಬಂಜನ, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಮಹೇಶ ಅಂಗಡಿ, ಪತ್ರಕರ್ತರಾದ ಬಿ.ಬಾಬು, ನಾಗೇಶ ನಿಲೂಗಲ್ಲ, ಕಾನಿಪ ಇಲಕಲ್ಲ ಅಧ್ಯಕ್ಷ ವಿನೋದ ಬಾರಿಗಿಡದ, ಜಾಕೀರಹುಸೇನ ತಾಳಿಕೋಟಿ, ಪ್ರಕಾಶ ಗುಳೇದಗುಡ್ಡ, ಗುರು ಗಾಣಿಗೇರ, ಭೀಮಣ್ಣ ಗಾಣಿಗೇರ, ಜಗದೀಶ ಹದ್ಲಿ ಅಭಿನಂದಿಸಿದ್ದಾರೆ.

ನಿರ್ದೇಶಕ ಸಾಯಿಪ್ರಕಾಶ್ ಹೇಳಿಕೆ

# 'ಸೆಪ್ಟಂಬರ್ 10' ಚಲನಚಿತ್ರ ಜುಲೈನಲ್ಲಿ ಬಿಡುಗಡೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.24–ಖ್ಯಾತ ನಿರ್ದೇಶಕ, ನಟ ಸಾಯಿಪ್ರಕಾಶ್ ನಿರ್ದೇಶನದ "ಸೆಪ್ಟಂಬರ್ 10" ಚಲನಚಿತ್ರ ಜುಲೈ ಎರಡನೇ ವಾರದಲ್ಲಿ ಬಿಡುಗಡೆಗೊಳ್ಳಲಿದೆ.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ಪ್ರಕಟಿಸಿದ ಸಾಯಿಪ್ರಕಾಶ್, ಇದು ತಮ್ಮ ನಿರ್ದೇಶನದ 105 ನೇ ಚಿತ್ರವಾಗಿದ್ದು, ಈ ಹಿಂದೆ ತವರಿಗೆ ಬಾ ತಂಗಿ, ಮುದ್ದಿನ ಮಾವ, ಅಣ್ಣ ತಂಗಿ, ಸೋಲಿಲ್ಲದ ಸರದಾರ ಹೀಗೆ ಯಶಸ್ವಿ ಚಿತ್ರಗಳ ನಿರ್ದೇಶನ ಮಾಡಿದ್ದಾಗಿ ತಿಳಿಸಿದರು.

ಸೆಪ್ಟೆಂಬರ್ 10 ಚಿತ್ರ 'ಮನುಷ್ಯನ ಜೀವನದಲ್ಲಿ ಎದುರಾಗುವ ಎಲ್ಲ ಸಮಸ್ಯೆಗಳಿಗೆ ಆತ್ಮಹತ್ಯೆ ಒಂದೇ ಪರಿಹಾರವಲ್ಲ, ಒಳ್ಳೆಯದಕ್ಕೆ ಎಲ್ಲೋ ಒಂದು ದಾರಿ ಇದ್ದೇ ಇರುತ್ತದೆ ಎಂಬ ಸಂದೇಶವನ್ನು ಈ ಚಿತ್ರ ನೀಡುತ್ತಿದ್ದು, ಈಗಾಗಲೇ ಚಿತ್ರದ ಚಿತ್ರೀಕರಣ, ಪೋಸ್ಟ್ ಪ್ರೊಡಕ್ಷನ್ ಕೆಲಸಗಳು ಮುಗಿದಿದ್ದು ಮುಂದಿನ ತಿಂಗಳು ಎರಡನೇ ವಾರದಲ್ಲಿ ಚಿತ್ರ ಬಿಡುಗಡೆಯಾಗಲಿದೆ ಎಂದರು.

ಶ್ರೀದೇವಿ ಪಿಕ್ಚರ್ಸ್ ಬ್ಯಾನರ್ ಅಡಿಯಲ್ಲಿ ಈ.ರಾಜಮ್ಮ ಸಾಯಿಪ್ರಕಾಶ್ ನಿರ್ಮಿಸಿರುವ ಈ ಚಿತ್ರ ದುರ್ಬಲ ಹಾಗೂ ಸಂಕುಚಿತ ಮನಸಿನವರಿಗೆ ಉತ್ತಮ ಸಂದೇಶ, ಮಾರ್ಗದರ್ಶನ ನೀಡುವ ಪ್ರಯತ್ನ ಮಾಡಲಿದೆ ಎಂದು ಹೇಳಿದ ಸಾಯಿಪ್ರಕಾಶ್, 2020ರಲ್ಲೇ ಸೆಪ್ಟೆಂಬರ್ 10 ಟೈಟಲ್ ಇಟ್ಟುಕೊಂಡು ಈ ಸಿನಿಮಾ ಪ್ರಾರಂಭಿಸಿದೆ. ಸಿನಿಮಾ ಮುಗಿಯುವಷ್ಟರಲ್ಲಿ ಕೊರೋನಾ ಪ್ರಾರಂಭವಾಯಿತು ಹೀಗಾಗಿ ಚಿತ್ರ ಬಿಡುಗಡೆ ಮಾಡಲಿಲ್ಲ ಎಂದು ತಿಳಿಸಿದರು. ದೊಂಬರಕೃಷ್ಣ ಸುರೇಶ್‌ರ ಮೂಲಕ ಡಾ.ರಾಜು ಅವರ ಪರಿಚಯವಾಗಿ ಅವರಿಗೆ ಕಥೆ ಹೇಳಿದಾಗ ತುಂಬಾ ಇಷ್ಟಪಟ್ಟರು. ಈಗಿನ ಕಾಲದಲ್ಲಿ ಇಂತಹ ಸಿನಿಮಾಗಳು ಹೆಚ್ಚು ಹೆಚ್ಚು ಬರಬೇಕು. ಸಿನಿಮಾ ನೋಡಿದ ಕೆಲವರಾದರೂ ತಮ್ಮ ಮನಸ್ಸನ್ನು ಬದಲಾಯಸಿಕೊಂಡರೆ ನಮಗದೇ ಖುಷಿಯ ವಿಚಾರ. ಫ್ಯಾಮಿಲಿ ಸೆಂಟಿಮೆಂಟ್, ಕಾಮಿಡಿ ಹೀಗೆ ಎಲ್ಲಾ ತರಹದ ಮನರಂಜನಾತ್ಮಕ ಅಂಶಗಳು ಚಿತ್ರದಲ್ಲಿದೆ ಎಂದರು.

ಸಾಯಿಪ್ರಕಾಶ್ ಅವರ ಚಿತ್ರಕಥೆ ಹಾಗೂ ನಿರ್ದೇಶನ, ಡಾ.ವಿ.ನಾಗೇಂದ್ರಪ್ರಸಾದ್ ಅವರ ಸಂಗೀತ, ಜೆ.ಜಿ. ಕೃಷ್ಣ ಅವರ ಛಾಯಾಗ್ರಹಣ, ಬಿಎ ಮಧು ಅವರ ಸಂಭಾಷಣೆ ಈ ಚಿತ್ರಕ್ಕಿದೆ. ಹಿರಿಯ ಕಲಾವಿದ ರಮೇಶ್‌ಭಟ್ ಚಿತ್ರದಲ್ಲಿ ಲಾಯರ್ ಪಾತ್ರ ಮಾಡಿದ್ದಾರೆ. ಅಲ್ಲದೇ ಹಿರಿಯ ನಟರಾದ ಶಶಿಕುಮಾರ್, ಶ್ರೀನಿವಾಸಮೂರ್ತಿ, ರವೀಂದ್ರನಾಥ್, ಶಿವಕುಮಾರ್, ಗಣೇಶ್‌ರಾವ್ ಕೇಸರಕರ್, ಸಿಹಿಕಹಿ ಚಂದ್ರು ಸೇರಿದಂತೆ ಮೀಸೆ ಅಂಜಿನಪ್ಪ, ಜೋಸೈಮನ್, ಮನಮೋಹನ್, ಪದ್ಮಾ ವಾಸಂತಿ, ಶ್ರೀರಕ್ಷಾ, ಅನಿತಾರಾಣಿ ಹಾಗೂ ಜಯಸಿಂಹ ಆರಾಧ್ಯ ಅನೇಕ ಅನುಭವಿ ಕಲಾವಿದರು ಈ ಚಿತ್ರದಲ್ಲಿ ನಟಿಸಿದ್ದಾರೆ. ಮ್ಯೂಸಿಕ್ ಬಜಾರ್ ಈ ಚಿತ್ರದ ಹಾಡುಗಳನ್ನು ಹೊರತಂದಿದೆ ಎಂದು ವಿವರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಗಣೇಶರಾವ್, ಚಿತ್ರದ ನಾಯಕ ಜಯಸಿಂಹ, ಡಾ.ಶೇಖರಮಾನೆ ಮಾತನಾಡಿದರು. ಚಲನಚಿತ್ರ ನಿರ್ಮಾಪಕ ಘನಶ್ಯಾಂ ಭಾಂಡಗೆ, ನ್ಯಾಯವಾದಿ ರಮೇಶ ಬದ್ನೂರ, ಸಂಜೀವ ಜೋಶಿ, ಚಂದ್ರು ಇಲ್ಲೂರ, ಆನಂದ ಹಬೀಬ್, ರಾಘವೇಂದ್ರ ಬಿಸನಾಳ ಇತರರು ಇದ್ದರು.

# ಪ್ರತಿಭೆಯನ್ನು ಪ್ರೋತ್ಸಾಹಿಸುವ ಕಾರ್ಯ ಶ್ಲಾಘನೀಯ : ಪದ್ಮಶ್ರೀ ತೊಗಲುಗೊಂಬೆ ಭೀಮಮ್ಮ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ನಗರದ ಘಾನಘಂಟಿ ಕಲ್ಯಾಣ ಮಂಟಪದಲ್ಲಿ ಕವಿತಾ ಮಿಡಿಯಾ ಸೋರ್ಸ್, ಮಹಿಳಾ ಧ್ವನಿ ಸಂಸ್ಥೆ ಹಾಗೂ ಹೈಬ್ರೀಡ್ ನ್ಯೂಸ್ ವತಿಯಿಂದ ಪ್ರತಿಭಾ ಪುರಸ್ಕಾರ ಮತ್ತು ಸಾಧಕರಿಗೆ ಸನ್ಮಾನ ಸಮಾರಂಭವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಭೀಮಮ್ಮ ಅವರು ಹಳ್ಳಿಯಲ್ಲಿ ಇಂದಿಗೂ ಸಾಕಷ್ಟು ಜನ ಕಲಾವಿದರು ತೆರೆಮರೆಯಲ್ಲೆ ಉಳಿದುಕೊಂಡಿದ್ದು ಅವರನ್ನು ಸಮಾಜಕ್ಕೆ ಪರಿಚಯಿಸುವ ಕಾರ್ಯವಾಗಬೇಕಿದೆ. ಈ ಸಂಸ್ಥೆಯು ಕಲೆ ಕಲಾವಿದರನ್ನು ಪ್ರತಿಭೆಯನ್ನು ಪ್ರೋತ್ಸಾಹಿಸುವುದು ಶ್ಲಾಘನೀಯ ಕಾರ್ಯ ಎಂದರು. ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದ ಸೋಮಶೇಖರ್ ಹರ್ತಿ ಮಾತನಾಡಿ ನಾವು ಶಿಕ್ಷಣದ ಜೊತೆಗೆ ಮಕ್ಕಳಿಗೆ ನೈತಿಕ ಮೌಲ್ಯಗಳನ್ನು ತಿಳಿಸಬೇಕಿದೆ. ಸಂಸ್ಕಾರ ಮತ್ತು ಸಂಪ್ರದಾಯ ಪದ್ದತಿಗಳ ಅರಿವು ಮೂಡಿಸುವ ಅಗತ್ಯವಿದೆ.

ಪ್ರತಿಭಾವಂತ ವಿದ್ಯಾರ್ಥಿಗಳು ಶೈಕ್ಷಣಿಕ ಬದುಕಿನ ಜೊತೆಗೆ ಮಾನವೀಯ ಗುಣಗಳನ್ನು



ಮೈಗೂಡಿಸಿಕೊಂಡು ಸಮಾಜದಲ್ಲಿ ಗುಣವಂತರಾಗಿ ಬಾಳಬೇಕಿದೆ. ಕಲೆ ಸಾಹಿತ್ಯಕ್ಕೆ ಸಮಾಜವನ್ನು ತಿದ್ದುವ ಸಾಮರ್ಥ್ಯ ಇದೆ ಎಂದರು.

ಇದೇ ವೇಳೆ ಕಾರ್ಯಕ್ರಮದಲ್ಲಿ ದ್ಯಾಮಣ್ಣ ಕರಿಗಾರ, ರೇವಣಸಿದ್ದಪ್ಪ ನೂಲ್ವಿ, ಬಸವರಾಜ ಹೆಸರೂರು, ಪ್ರಿಯದರ್ಶಿನಿ ಮುಂಡರಗಿಮಠ, ಲಕ್ಕನಗೌಡ್ರ ಗೌಡ್ರ, ರವಿ ಯಾಲಕ್ಕಿ, ಮಂಜುನಾಥ ಪುರ್ತಗೇರಿ, ಗುರುಬಸವರಾಜ ಹಳ್ಳಿಕೇರಿ, ಶಾರದಾ ಘಾನಘಂಟಿ, ಶರಣಪ್ಪ ಕೊಪ್ಪದ, ಬಿ.ಎನ್ ಹೊರಪೇಟಿ, ದೇವಿ ಸತೀಶ್, ಎಸ್ ರಾಮಪ್ಪ, ಪಕ್ಕಿರೇಶ ಹಮ್ಮಿಗಿ ಮತ್ತು ನಿರ್ಮಲಾ ಬಿರಾದಾರ ಮತ್ತಿರರು ಉಪಸ್ಥಿತಿ ಇದ್ದರು.

ಜಿಲ್ಲೆಯಲ್ಲಿ ಹತ್ತನೆ ತರಗತಿ ಮತ್ತು ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ 50 ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರದ ಮೂಲಕ ಗೌರವಿಸಲಾಯಿತು. ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರಿಗೆ ಪ್ರಶಸ್ತಿ ನೀಡ ಗೌರವಿಸಲಾಯಿತು. ಭರತನಾಟ್ಯ, ಗಾಂಧಾರಿ ಕಲೆ, ಗಾಯನ ಪ್ರದರ್ಶನಗೊಂಡವು. ಮಹಿಳಾ ಧ್ವನಿ ಸಂಸ್ಥೆಯ ವತಿಯಿಂದ ಮಹಿಳೆಯರ ಸ್ವಾವಲಂಬಿ ಬದು–ಕಿಗೆ ಪ್ರೇರಣೆಗಾಗಿ ಮಳಿಗೆಗಳನ್ನು ಹಾಕಿ ವಸ್ತು ಪ್ರದರ್ಶನ ಮತ್ತು ಮಾರಾಟ ವ್ಯವಸ್ಥೆ ಕಲ್ಪಿಸಲಾಗಿತ್ತು.

# ನಿತ್ಯ ಯೋಗದಿಂದ ರೋಗ ಮುಕ್ತರಾಗಿ : ಡಾ.ಶಂಕ್ರಯ್ಯ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಮಿತ ಆಹಾರ ಸೇವನೆ ಮತ್ತು ನಿತ್ಯ ಯೋಗಭ್ಯಾಸದಿಂದ ಆರೋಗ್ಯವಂತರಾಗಬೇಕು. ಯೋಗ ಮಾಡುವುದರಿಂದ ಮಾನಸಿಕವಾಗಿ ಮತ್ತು ದೈಹಿಕವಾಗಿ ಸದೃಢರಾಗಬಹುದು ನಿತ್ಯವೂ ಯೋಗ ಮಾಡಿ ಎಂದು ಕಾರ್ಯಕ್ರಮ ಉದ್ಘಾಟಿಸಿದ ಹಿರಿಯ ಯೋಗ ಶಿಕ್ಷಕರಾದ ಡಾ. ಶಂಕ್ರಯ್ಯ ಜುತ್ತಿ ಹಿರೇಮಠ ಸಲಹೆ ನೀಡಿದರು.

ಭಾಗ್ಯನಗರದಲ್ಲಿ ವಿವೇಕಾನಂದ ಯುವಕ ಸಂಘ ಕೊಪ್ಪಳ ಮೇರಾ ಯುವ ಭಾರತ ಕೊಪ್ಪಳ ವತಿಯಿಂದ ಯೋಗದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಹಿರಿಯ ಯೋಗಪಟುಗಳಾದ ನಾಗರತ್ನ ಪಲ್ಲೇದ ಅವರು ಯೋಗ ಚಿಕಿತ್ಸೆ ಮತ್ತು ಧ್ಯಾನದ ಮಹತ್ವ ತಿಳಿಸಿದರು. ನಂತರ ಯೋಗ ದಿನಾಚರಣೆಯಲ್ಲಿ ಭಾಗಿಯಾದವರಿಗೆ ಯೋಗಭ್ಯಾಸ ಮಾಡಿಸಿ ಅದರ ಮಹತ್ವ ತಿಳಿಸಿದರು. ಇದೇ ವೇಳೆ ಸಂಸ್ಥೆಯ ವತಿಯಿಂದ ಹಿರಿಯ ಯೋಗಪಟುಗಳಿಗೆ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಬಸವಲಿಂಗಪ್ಪ ಲಾಡಿ ನಿವೃತ್ತ ಪೊಲೀಸ್ ಅಧಿಕಾರಿ, ಬಿ. ಎನ್. ಹೊರಪೇಟಿ, ಬಸವರಾಜ ಬೆಲ್ಲದ, ಸಮಾಜಿಕ ಕಾರ್ಯಕರ್ತೆ ಪ್ರಿಯದರ್ಶಿನಿ ಉಪಸ್ಥಿತಿ ಇದ್ದರು.

# ನವ ಸಮಾಜವನ್ನು ನಿರ್ಮಿಸುವ ನಿರ್ಮಾತೃ ಶಿಕ್ಷಕ– ನಿವೃತ್ತ ಶಿಕ್ಷಕ ಶರಣಪ್ಪ ಕೊಪ್ಪದ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಯಲಬುರ್ಗಾ ಪಟ್ಟಣದ ಸರಕಾರಿ ಬಾಲಕಿಯರ ಪ್ರೌಢ ಶಾಲೆಯಲ್ಲಿ ನಿವೃತ್ತ ಶಿಕ್ಷಕರಾದ ಶರಣಪ್ಪ ಕೊಪ್ಪದ ಅವರ ವಯೋನಿವೃತ್ತಿಯ ಅಭಿನಂದನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ರವಿಕುಮಾರ ಕಿತ್ತೂರು ಮಾತನಾಡಿ ಪ್ರತಿಯೊಬ್ಬರ ಜೀವನದಲ್ಲಿ ಶಿಕ್ಷಕರು ಬಹುಮುಖ್ಯ ಪಾತ್ರವನ್ನು ವಹಿಸುತ್ತಾರೆ. ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಅವಿರತಶ್ರಮ ಶ್ಲಾಘನೀಯ. ಶರಣಪ್ಪ ಕೊಪ್ಪದ ಶಿಕ್ಷಕರ ಸಮಯ ಪಾಲನೆ ಮತ್ತು ಶಿಸ್ತು ಪ್ರಸ್ತುತ ಸಮಾಜಕ್ಕೆ ಮಾದರಿ ಎಂದರು. ಮಕ್ಕಳ ನೆಚ್ಚಿನ ಶಿಕ್ಷಕರಾಗಿ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಶ್ರಮಿಸಿದ್ದಾರೆ ಅವರ ಸೇವೆ ಅನನ್ಯ ಎಂದರು.



ಸನ್ಮಾನಿತರು ಮತ್ತು ನಿವೃತ್ತ ಶಿಕ್ಷಕರಾದ ಶರಣಪ್ಪ ಕೊಪ್ಪ ಮಾತನಾಡಿ 40 ವರ್ಷಗಳ ಕಾಲ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುವ ಸೌಭಾಗ್ಯ ನನ್ನದಾಗಿತ್ತು. ಶಿಕ್ಷಕ ವೃತ್ತಿಯು ಪವಿತ್ರವಾದದ್ದು ನವ ಸಮಾಜವನ್ನು ಕಟ್ಟುವ ಮತ್ತು ತಿದ್ದುವ ಸಾಮಾರ್ಥ್ಯ ಶಿಕ್ಷಕರಿಗಿದೆ. ಬಡತನದಲ್ಲೆ ಓದಿ ಬೆಳೆದು ಶಿಕ್ಷಕನಾಗಿ ಸೇವೆ ಸಲ್ಲಿಸಿದ ತೃಪ್ತಿ ನನಗಿದೆ ಎಂದರು. ಇದೇ ವೇಳೆ ನಿವೃತ್ತ ಶಿಕ್ಷಕರಾದ ಶರಣಪ್ಪ ಕೊಪ್ಪದ ದಂಪತಿಗಳಿಗೆ ವಿವಿಧ ಶಾಲೆಯ ಶಿಕ್ಷಕರು ಶಿಕ್ಷಣ ಪ್ರೇಮಿಗಳು ವಿದ್ಯಾರ್ಥಿಗಳು ಸನ್ಮಾನಿಸಿ ಗೌರವಿಸಿದರು. ಕಾರ್ಯಕ್ರಮದಲ್ಲಿ ಸುರೇಶ್ ನಡುವಿನಮನಿ, ಮಲ್ಲಿಕಾರ್ಜುನ, ಶರಣಪ್ಪ ಪೂಜಾರ, ಹೇಮಣ್ಣ, ವೀರನಗೌಡ, ಸಿದ್ದಪ್ಪ ಹಡಗಲಿ, ಸುಮಂಗಲಾ ಕೊಪ್ಪದ, ಚನ್ನಬಸಪ್ಪ ಮೇಟಿ ಉಪಸ್ಥಿತಿ ಇದ್ದರು ಕಾರ್ಯಕ್ರಮವನ್ನು ಪ್ರಕಾಶ ದಳವಾಯಿ ನಿರೂಪಿಸಿ ವಂದಿಸಿದರು.

**CHANGE OF NAME**

I, PRAVEENKUMAR S/O CHANDRAKANT ( Old name ) resident of Chalkapur Tq.Bhalki Dist: Bidar. have changed my (new name ) as PRAVEENKUMAR S/O CHANDRAKANTH Chalkapur Tq.Bhalki Dist: Bidar. Sworn before affidavit N.B. Patil Advocate & Notary PUBLIC BHALKI Date 21-06-2025.

**CHANGE OF NAME**

I, NAGRAJ S/O VAIJAPPA ( Old name) resident of Maveen Halli Tq.Bhalki Dist: Bidar. have changed my (new name) as NAGNATH S/O VAIJINATH Mavinhalli Tq.Bhalki Dist: Bidar. Sworn before affidavit N.B. Patil Advocate & Notary PUBLIC BHALKI. Date 23-06-2025.

# ಕಲಬುರಗಿ ನಗರದ ಸಮಗ್ರ ಅಭಿವೃದ್ಧಿಗೆ ನೀಲನಕ್ಷೆ ತಯಾರು:ಪ್ರಿಯಾಂಕ್ ಖರ್ಗೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜೂ.24:ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗೆಲ್ಲ ಸಾಮಾಜಿಕ ಆರ್ಥಿಕ ಹಾಗೂ ಸಮಾಜಿಕ ನ್ಯಾಯವನ್ನು ಸಮಾಜದ ಕಟ್ಟಕಡೆ-ಯ ವ್ಯಕ್ತಿಗೆ ತಲುಪಿಸಿದ್ದೇವೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ನಗರದ ಪೂಜ್ಯ ಬಸವರಾಜಪ್ಪ ಅಪ್ಪಾ ಸ್ಮರಣಾರ್ಥ ಭವನದಲ್ಲಿ ನಡೆದ 935 ಪಾಲಿಕೆಯ ಪೌರಕಾರ್ಮಿಕರ ಗುತ್ತಿಗೆ ಪದ್ಧತಿಯನ್ನು ರದ್ದುಪಡಿಸಿ ಪಾಲಿಕೆಯಿಂದ ನೇರ ವೇತನ ಪಾವತಿ ಆದೇಶ ಪತ್ರ ವಿತರಣೆ, ಗ್ರಾಮ ಆಡಳಿತ ಅಧಿಕಾರಿಗಳಿಗೆ ನೇಮಕಾತಿ ಪತ್ರ ಹಾಗೂ ಕ್ರೋಮ್ ಬುಕ್ ವಿತರಣೆ, ವಿಶೇಷ ಚೇತನ ಫಲಾನುಭವಿಗಳಿಗೆ ವಿವಿಧ ಸವಲತ್ತು ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಮಹಾನಗರಪಾಲಿಕೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಸಚಿವರು ಸಾಂಕೇತಿಕವಾಗಿ ನೇಮಕಾತಿ ಪತ್ರ ವಿತರಿಸಿದರು. ಜೊತೆಗೆ ಹೊಲಿಗೆ ಯಂತ್ರ ಹಾಗೂ ತ್ರಿಚಕ್ರ ವಾಹನಗಳ ವಿತರಣೆ ಮಾಡಿದರು.

" ಕಾಂಗ್ರೆಸ್ ಪಕ್ಷದ ಸಿದ್ಧಾಂತ ಹಾಗೂ ಸರ್ಕಾರ ಬದ್ಧತೆಯಿಂದಾಗಿ ನಾವು ಇಂದು ನಿಮಗೆಲ್ಲ ನೇಮಕಾತಿ ಆದೇಶ ವಿತರಿಸಿ ಕೊಟ್ಟ ಮಾತಿನಂತೆ ನಡೆದುಕೊಂಡಿದ್ದೇವೆ. ಇಲ್ಲಿಂದ ನೀವೆಲ್ಲ ಮಹಾನಗರ ಪಾಲಿಕೆಯ ನೌಕರರಾಗಿರುತ್ತೀರಿ. ಇದು ಅತ್ಯಂತ ಸಂತೋಷದ ಕ್ಷಣವಾಗಿದೆ" ಎಂದು ಸಚಿವರು ಹೇಳಿದರು.

"ಪೌರಕಾರ್ಮಿಕರು ಇದ್ದರೆ ನಗರವೆಲ್ಲ ಸ್ವಚ್ಛತೆಯಿಂದ ಇರಲು ಸಾಧ್ಯವಾಗುತ್ತದೆ. ನಿಮ್ಮೆಲ್ಲ ಕಷ್ಟಗಳ ನಡುವೆ ನಗರವನ್ನು ಸ್ವಚ್ಛವಾಗಿಡಲು ಕೆಲಸ ಮಾಡುತ್ತಿದ್ದೀರಿ ನಿಮಗೆಲ್ಲ ಧನ್ಯವಾದಗಳು ಎಂದು ಕೊಂಡಾಡಿದ ಸಚಿವರು 64 ಗ್ರಾಮಸೇವಕರ ನೇಮಕಾತಿ ಮಾಡಿ ಗ್ರಾಮ ಸೇವಕರಿಗೆ ತಂತ್ರಾಂಶ ದಾಖಲಿಸಲು ಅನುಕೂಲವಾಗಲೆಂದು 154 ಕ್ರೊಮ್ ಬುಕ್ ವಿತರಣೆ ಮಾಡಲಾಗುತ್ತಿದೆ. ರಾಜ್ಯದಲ್ಲಿ ಇದೇ ಮೊದಲಬಾರಿಗೆ ಇಂತಹ ಸೌಲಭ್ಯ ಒದಗಿಸಲಾಗಿದೆ" ಎಂದರು.

ಪೌರಕಾರ್ಮಿಕರಿಗೆ ಭವನ ನಿರ್ಮಾಣ ಮಾಡುವಂತೆ ಇದಕ್ಕೂ ಮುನ್ನ ಮಾತನಾಡಿ ಕಮಕನೂರು ಮಾಡಿದ ಮನವಿಗೆ ಸ್ಪಂದಿಸಿದ ಸಚಿವರು, ನಗರದಲ್ಲಿ ಸಿಎ ಸೈಟ್ ಒದಗಿಸಿದರೆ ತಾವು ಅನುದಾನ ನೀಡುವುದಾಗಿ ಎಂದು ಘೋಷಿಸಿದ ಪ್ರಿಯಾಂಕ್ ಖರ್ಗೆ, ಶಾಸಕರು ಹಾಗೂ ಸಂಸದರು



ಕೂಡಾ ಅನುದಾನ ಒದಗಿಸಲಿ ಎಂದು ಮನವಿ ಮಾಡಿದರು.

ಕೇಂದ್ರ ಸರ್ಕಾರ ಕಲಬುರಗಿಯನ್ನು ಸ್ಮಾರ್ಟ್ ಸಿಟಿ ಮಾಡಲು ನಿರಾಕರಿಸಿತು. ಆದರೆ ರಾಜ್ಯ ಸರಕಾರ ಕಲಬುರಗಿ ಯನ್ನು ಮುಂದಿನ 25 ವರ್ಷಕ್ಕೆ ಹೇಗಿರಬೇಕೋ ಹಾಗೆ ಸುಂದರ ನಗರವನ್ನಾಗಿ ಮಾಡಲು IIHS ( Indian Institute for Human Settlements) ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಂಡು ಈಗಾಗಲೇ ನೀಲನಕ್ಷೆ ತಯಾರಿಸಲಾಗಿದ್ದು ಮುಂದಿನ ಮೂರು ವರ್ಷದಲ್ಲಿ ನವ ಕಲಬುರಗಿ ನಿರ್ಮಾಣ ಮಾಡಲಾಗುವುದು.

ಇದರ ಜೊತೆಗೆ 23 ಸರ್ಕಲ್ ಗಳ ಮರುನಿರ್ಮಾಣ, 31 ಉದ್ಯಾನವನ ಅಭಿವೃದ್ಧಿ ಹಾಗೂ 4 ಕೆರೆಗಳನ್ನು ಅಭಿವೃದ್ಧಿಪಡಿಸಲಾಗುವುದು. ನಗರದ ಎಲ್ಲ ಸಂಘ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಚರ್ಚೆ ನಡೆಸಲಾಗಿದ್ದು ಕಲಬುರಗಿ ಯಲ್ಲಿ ಬೇಕಾಗುವ ಅಗತ್ಯ ಮೂಲಭೂತ ಸೌಲಭ್ಯ ಸೇರಿದಂತೆ ಇತರೆ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಕ್ರಮವಹಿಸಲಾಗುತ್ತಿದೆ ಎಂದರು.

ನಗರದ ವಾಜಪೇಯಿ ಬಡಾವಣೆಯಲ್ಲಿ "ನೈಸ್" ( NICE- Nagavi Institute of Competitive Exams) ತರಬೇತಿ ಕೇಂದ್ರವನ್ನು ಸ್ಥಾಪಿಸಲಾಗುತ್ತಿದ್ದು ಮುಂದಿನ ಜುಲೈ ಕೊನೆಯ ವಾರದಲ್ಲಿ ಉದ್ಘಾಟನೆ ಮಾಡಲಾಗುವುದು. ಮೊದಲಿಗೆ 500 ಜನ ಐಎಎಸ್, ಕೆ ಎ ಎಸ್ ಸೇರಿದಂತೆ ಇತರೆ ಸ್ಪರ್ಧಾತ್ಮಕ ಪರೀ-ಕ್ಷೆಗೆ ತಯಾರಾಗುವ ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗುವುದು. ಮುಂದೆ 2000 ಅಭ್ಯರ್ಥಿಗಳಿಗೆ ತರಬೇತಿ ನೀಡುವ ಗುರಿ ಹೊಂದಲಾಗಿದೆ ಎಂದರು.

ಬಿಜೆಪಿ ನಾಯಕರು ನನ್ನನ್ನು ಟೀಕಿಸಲು ಕಲಬುರಗಿಗೆ ನಾಲ್ಕು ಸಲ ಬಂದಿದ್ದಾರೆ. ನಮ್ಮ ಸರ್ಕಾರದಿಂದ ಆಗಬೇಕಾದ ಅಭಿವೃದ್ಧಿ ಕೆಲಸಗಳ ಬಗ್ಗೆ ಅವರು ಚರ್ಚಿಸುವ ಬದಲು ನನ್ನ ಮೇಲೆ ವೈಯಕ್ತಿಕ ಟೀಕೆ ಮಾಡುತ್ತಿದ್ದಾರೆ.

ತಮ್ಮ ಉದ್ದೇಶಿತ ಅಮೇರಿಕಾ ಪ್ರವಾಸಕ್ಕೆ ಕೇಂದ್ರ ಅನುಮತಿ ನಿರಾಕರಿಸಿದ ವಿಚಾರವನ್ನು ಪ್ರಸ್ತಾಪಿಸಿದ ಸಚಿವರು, ಕೇಂದ್ರ ವೈಯಕ್ತಿಕವಾಗಿ ತಮಗೆ ಅವಕಾಶ ನಿರಾಕರಿಸಿಲ್ಲ, ರಾಜ್ಯದ ಸಚಿವರಿಗೆ ನಿರಾಕರಿಸಿದ್ದಾರೆ ಇದರಿಂದ ರಾಜ್ಯಕ್ಕೆ ನಿರೀಕ್ಷಿತ ಬಂಡವಾಳ ಬರುವುದು ನಿಂತುಹೋಗಿದೆ. ಬಿಜೆಪಿವರಿಗೆ ನನ್ನ ಮೇಲೆ ಯಾಕೋ ಪ್ರೀತಿ ಜಾಸ್ತಿಯಾಗಿದೆ ಅದಕ್ಕಾಗಿ ಹೀಗೆ ಮಾಡಿರಬಹುದು ಎಂದರು.

ಎಂ ಎಲ್ ಸಿ ತಿಪ್ಪಣ್ಣಪ್ಪ ಕಮಕನೂರು ಮಾತನಾಡಿ ಜಿಲ್ಲಾ ಉಸ್ತುವಾರಿ ಸಚಿವರ ವಿಶೇಷ ಕಾಳಜಿಯಿಂದಾಗಿ ಪೌರಕಾರ್ಮಿಕರು ಗುತ್ತಿಗೆ ಪದ್ಧತಿಯಿಂದ ಪಾಲಿಕೆಯ ನೌಕರರಂತೆ ನೇರ ನೇಮಕಾತಿ ಹೊಂದಿ ಸಂಬಳ ತೆಗೆದುಕೊಳ್ಳುತ್ತಾರೆ ಎಂದರು.

ಕಲಬುರಗಿ ನಗರದಲ್ಲಿ ಪೌರಕಾರ್ಮಿಕರಿಗಾಗಿ ಭವನ ನಿರ್ಮಾಣಕ್ಕಾಗಿ ಅಗತ್ಯ ಅನುದಾನ ಒದಗಿಸುವಂತೆ ಸಚಿವರಿಗೆ ಒತ್ತಾಯಿಸಿದ ಕಮಕನೂರು ಅವರು ಎಂ ಪಿ ರಾಧಾಕೃಷ್ಣ ದೊಡ್ಡಮನಿ ಅವರು ಕಬ್ಬಲಿಗ ಸಮಾಜವನ್ನು ಎಸ್ ಟಿ ಪಟ್ಟಿಗೆ ಸೇರಿಸುವಂತೆ ಕೇಂದ್ರವನ್ನು ಸಂಸತ್ತಿನಲ್ಲಿ ಒತ್ತಾಯಿಸುವಂತೆ ಮನವಿ ಮಾಡಿದರು.

ವೇದಿಕೆಯ ಮೇಲೆ ಪೂಜ್ಯ ಮಹಾಪೌರ ಯಲ್ಲಪ್ಪ ನಾಯ-ಕೋಡಿ, ಲೋಕಸಭಾ ಸದಸ್ಯರಾದ ರಾಧಾಕೃಷ್ಣ ದೊಡ್ಡಮನಿ, ಶಾಸಕರಾದ ಅಲ್ಲಮಪ್ರಭು ಪಾಟೀಲ, ಕನೀಜ್ ಫಾತಿಮಾ, ತಿಪ್ಪಣ್ಣಪ್ಪ ಕಮಕನೂರು, ಬಾಬುರಾವ್ ಚಿಂಚನಸೂರು, ಕುಡಾ ಅಧ್ಯಕ್ಷ ಮಜರ್ ಆಲಂಖಾನ್, ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್, ಜಿಪಂ ಸಿಇಓ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಕಮಿಷನರ್ ಅವಿನಾಶ್ ಶಿಂಧೆ, ಸಚಿನ್ ಶಿರವಾಳ ಸೇರಿದಂತೆ ಹಲವರಿದ್ದರು.

# ವಸತಿ ನಿಗಮ ಹಗರಣ ಸಿಬಿಐಗೆ ವಹಿಸಲಿ:ತೇಲ್ಕೂರ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜೂ.24: ದುಡ್ಡು ಕೊಟ್ಟು ಮನೆ ಮಂಜೂರು ಮಾಡಲಾಗಿದೆ ಎನ್ನುವ ವಸತಿ ನಿಗಮದ ಹಗರಣವನ್ನು ಕೂಡಲೇ ಸಿಬಿಐ ತನಿಖೆಗೆ ವಹಿಸಬೇಕೆಂದು ಮಾಜಿ ಶಾಸಕ ರಾಜಕುಮಾರ್ ಪಾಟೀಲ್ ತೆಲ್ಕೂರ್ ಆಗ್ರಹಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ನಿಗಮದಲ್ಲಿ ಭ್ರಷ್ಟಾಚಾರ ಆಗಿದೆ ಎನ್ನುವ ವಿಚಾರದಲ್ಲಿ ನೈತಿಕ ಹೊಣೆ ಹೊತ್ತು ವಸತಿ ಸಚಿವ ಝುಮೀರ್ ಅಹ್ಮದ್ ಖಾನ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಡಬೇಕು, ಇಲ್ಲದಿದ್ದರೆ ಸಿಎಂ ಅವರು ಝುಮೀರ್ ಅವರನ್ನು ಸಂಪುಟ ಸ್ಥಾನದಿಂದ ವಜಾಗೊಳಿಸಬೇಕೆಂದು ಆಗ್ರಹಿಸಿದರು.

ಕಾಂಗ್ರೆಸ್ ಸರಕಾರ ಅಧಿಕಾರ ಬಂದಾಗಿನಿಂದ ಕಳೆದ

2 ವರ್ಷದಿಂದಲೂ ಭ್ರಷ್ಟಾಚಾರದಲ್ಲಿ ತೊಡಗಿದೆ, ಯಾವುದಾದರೂ ಭ್ರಷ್ಟಾಚಾರದ ಆರೋಪಗಳು ಹೊರ ಬಿದ್ದರೆ, ಅಂತಹವುಗಳನ್ನು ಮುಚ್ಚಿ ಹಾಕಲು ಸರಕಾರ ವಿಷಯಾಂತರದ ಅಂಶಗಳನ್ನು ಬಿಚ್ಚಿಡುತ್ತದೆ. ಎಸ್.ಸಿ ಎಸ್.ಟಿ ಹಣ, ವಾಲ್ಮೀಕಿ ನಿಗಮಾದ ಹಣ, ಮೂಡಾ ಹಗರಣ ಮಾಡಿರುವುದು ನೋಡಿದರೆ ಸರಕಾರ ಭ್ರಷ್ಟಾಚಾರದಿಂದ ಕೂಡಿದೆ ಎಂದರ್ಥ ಎಂದು ವಿವರಿಸಿದರು.

ಕಾಂಗ್ರೆಸ್ ಸರಕಾರದ ವಿರುದ್ಧ ರಾಜ್ಯದ ಗುತ್ತಿಗೆದಾರ ಹೇಳುತ್ತಿದ್ದಾರೆ, ಇದು 60 ಪರ್ಸೆಂಟೇಜ್ ಸರಕಾರ, ಇದು ಆತ್ಮಹತ್ಯೆ ಸರಕಾರವಾಗಿದೆ ಎಂದು ಆರೋಪ ಮಾಡಿದರೆ, ಇತ್ತ ಕಾಂಗ್ರೆಸ್ ಶಾಸಕರೇ ಭ್ರಷ್ಟಾಚಾರದ ಕುರಿತು ಆರೋಪಗಳನ್ನು ಬಯಲಿಗೆಳೆಯುತ್ತಿದ್ದಾರೆ ಎಂದರು.

ನಿಗಮದಲ್ಲಿ ಆಗಿರುವಂತಹ ಭ್ರಷ್ಟಾಚಾರ ಕುರಿತಾಗಿ ಸಚಿವ ಪ್ರಿಯಾಂಕ್ ಖರ್ಗೆ ಬಾಯಿ ಬಿಡುತ್ತಿಲ್ಲ, ಅವರು ಯಾಕೆ ಮೌನ ವಹಿಸುತ್ತಿದ್ದಾರೆ ಎನ್ನುವುದು ಅರ್ಥವಾಗುತ್ತಿಲ್ಲ. ಮಾತೆತ್ತಿದರೆ ಮೋದಿ, ಕೇಂದ್ರ ಸರಕಾರದ ವಿರುದ್ಧ ಮಾತನಾಡುವ ಸಚಿವ ಖರ್ಗೆ ಅವರು ಭ್ರಷ್ಟ ಸಚಿವರನ್ನು ವಜಾ ಮಾಡಬೇಕು ಎಂದು ಹೇಳಲಿ, ಸಿಎಂ ಅವರಿಗೆ ಹೇಳಿ ಸಚಿವರಿಂದ ರಾಜೀನಾಮೆ ಪಡೆಯಲಿ ಎಂದು ಸವಾಲು ಹಾಕಿದ್ದಾರೆ.

ಒಂದು ವೇಳೆ ಸಚಿವ ಝುಮೀರ್ ಅಹ್ಮದ್ ಖಾನ್ ಅವರ ಸಚಿವ ಸ್ಥಾನವನ್ನು ವಜಾ ಗೊಳಿಸದೆ ಇದ್ದರೆ ಮುಂದಿನ ದಿನಗಳಲ್ಲಿ ಉಗ್ರವಾಗಿ ಹೋರಾಟ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಇದನ್ನ ನಾವು ಹೋರಾಟ ಮಾಡಿದ್ದರೆ, ಎಸ್ ಐಟಿ ತನಿಖೆ ಮಾಡುವುದಾಗಿ ಸಿಎಂ ಹೇಳುತ್ತಾರೆ. ತಮ್ಮದೇ ಪೊಲೀಸರನ್ನು ಇಟ್ಟುಕೊಂಡು ಇವರು ಹೇಗೆ ತನಿಖೆ ಮಾಡುತ್ತಾರೆ ಎನ್ನುವುದು ಈಗಾಗಲೇ ಗೊತ್ತಾಗಿದೆ ಎಂದ ಅವರು, ಮುಡಾ ಹಗರಣಕ್ಕೆ ಕೋರ್ಟ್ ಛೀಮಾರಿ ಹಾಕಿದೆ, ವಾಲ್ಮೀಕಿ ಹಗರಣದಲ್ಲಿ ಮುಖ್ಯ ಆರೋಪಿ ನಾಗೇಂದ್ರ ಅವರನ್ನು ಕ್ಲೀನ್ ಚೀಟ್ ಮಾಡುವು ಪ್ರಯತ್ನ ಮಾಡಿದ್ದೀರಿ, ಆದರೆ ಕೋಟ್ಯಂತರ ಹಣ ದುರ್ಬಳಕೆ ಮಾಡಿರುವುದು ಇ.ಡಿ ಯಿಂದ ತಿಳಿದುಬಂದಿದೆ ಎಂದರು. ಗ್ರಾಮ ಸಭೆ ಆಗಬೇಕು, ನಿಯಮ ಬಾಹಿರವಾಗಿ ಮಂಜೂರು ಆಗಿರುವ ಮನೆಗಳನ್ನು ರದ್ದು ಪಡಿಸಬೇಕು, ಫಲಾನುಭವಿಗಳಿಗೆ ಮನೆ ದೊರಕುವಂತೆ ಆಗಬೇಕು ಎಂದು ಒತ್ತಾಯಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಅಶೋಕ್ ಬಗಲಿ, ಶಾಸಕ ಬಸವರಾಜ್ ಮತ್ತಿಮಡು, ಚಂದು ಪಾಟೀಲ್, ಮಹದೇವ ಬೆಳಮಗಿ, ಅಮರನಾಥ್ ಪಾಟೀಲ್, ಹರ್ಷಾ ಗುತ್ತೇದಾರ್, ಆನಂದ ಪಾಟೀಲ್, ಶರಣಗೌಡ ಪಾಟೀಲ ದೇವಂತಗಿ ಸೇರಿದಂತೆ ಮತ್ತಿತರರು ಇದ್ದರು.

# ಹೆಚ್ಚುವರಿ ಬಸ್ಸು ಬಿಡುವಂತೆ ಆಗ್ರಹಿಸಿ ರಸ್ತೆಯಲ್ಲಿ ಬಸ್ ನಿಲ್ಲಿಸಿ ವಿದ್ಯಾರ್ಥಿಗಳಿಂದ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜೂ.24:ಯಲಬುರ್ಗಾ ತಾಲೂಕಿನ ಹನಮಾಪೂರ ಗ್ರಾಮದಲ್ಲಿ ದಿನ ನಿತ್ಯ ವಿದ್ಯಾರ್ಥಿಗಳು ಬಸ್ಸಿಗಾಗಿ ನೂಕುನುಗ್ಗಲು ಯಿಂದ ಶಾಲೆ ಕಾಲೇಜು ತಲುಪಲು ಪರದಾಡುತ್ತಿದ್ದಾ-ರೆ ಎಂದು ಹನಮಾಪೂರ ಗ್ರಾಮದ ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಪ್ರತಿಭಟನನೆ ಮಾಡಿದರು.

ಬಸ್ಸಿಗೆ ಸುತ್ತಮುತ್ತಲು ಗ್ರಾಮಗಳಾದ ಜಿ ವಿರಾಪೂರ. ಕುದ್ರಕೊಟಗಿ , ವಜ್ರಬಂಡಿ , ಎನ್ ಜರಕುಂಟಿ ಮಂಡಲಮರಿ ಕೊನಸಾಗರ, ಗ್ರಾಮದಿಂದ ಯಲಬುರ್ಗಾ ಕಾಲೇಜ್ ಗೆ ಬಸ್ಸಿಗೆ ದಿನ ನಿತ್ಯ ಕಾಯುವ ಪರಿಸ್ಥಿತಿ ಎಲ್ಲಾ ಗ್ರಾಮಗಳ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ತೊಂದರೆಯಾಗಿ ದಿನ ನಿತ್ಯ ಬಸ್ಸಗಳು ತುಂಬಿಕೊಂಡು ಬರುವದರಿಂದ ನಮ್ಮ ಊರಿಗೆ ನಿಲ್ಲುವದಿಲ್ಲ ನಮಗೆ ಮತ್ತೊಂದು ಬಸ್ಸು ಬಿಡುವರಗೂ ಹೊರಾಟ ಬಿಡುವದಿಲ್ಲವೆಂದು ಪಟ್ಟು ಹಿಡಿದಾಗ ತಾತಲಿಕವಾಗಿ ಮೊತ್ತೊಂದು ಬಸ್ಸ ಬಂದ ನಂತರ ಬಿಡಲಾಗಯಿತು.

ಯಲಬುರ್ಗಾದಿಂದ ಮತ್ತೊಂದು ಬಸ್ಸ್ ಬರುವರಗೆ ಹೊರಾಟ ಮಾಡಿ ಬಸ್ ಬಂದ ಮೇಲೆ ದಿನಾಲೂ ಬರುವಂತೆಯಾಗಬೇಕು ಒಂದುವೇಳೆ ಬಸ್ ಬರಲ್ಲಿಲ್ಲವೆಂದರೆ ಮತ್ತೆ ಹೋರಾಟ ಮಾಡಲಾಗುವದು ಎಂದು ವಿದ್ಯಾರ್ಥಿ ಗೀತಾ ಎನ್ ವಿ ಹೇಳಿದರು.

ನಮ್ಮ ಭಾಗದವರು ಆದರೂ ಬಸ್ಸುಗಳಿಗಾಗಿ ಪರದಾಡುವಂತಾಗಿದೆ. ಇವರು ಗ್ರಾಮಗಳ ಪರಿಸ್ಥಿತಿಯನ್ನು ಕಾಣದೆ ಆಳ್ವಿಕೆ ನಡೆಸುತ್ತಿದ್ದಾರೆ. ಇದು ಘನಘೋರವಾಗಿದೆ ಬೆಳಿಗ್ಗೆ 8 :30 ಘಂಟೆಗೆ ಬಸ್ಸುಗಳು ವ್ಯವಸ್ಥೆ ಕಲ್ಪಿಸಬೇಕು . ಈ ರೀತಿಯಾಗಿ ವಿದ್ಯಾರ್ಥಿಗಳು ಶಾಲಾ, ಕಾಲೇಜುಗಳಿಗೆ ಸರಿಯಾದ ಸಮಯಕ್ಕೆ ತಲುಪಲು ಆಗುತ್ತಿಲ್ಲ. ಹೋರಾಟ ಮಾಡಿದರು ಅಧಿಕಾರಿಗಳಿಗೆ ಮನವಿ ಪತ್ರಗಳು ನೀಡಿದರು ಅದಕ್ಕೆ ಪ್ರತಿಫಲ ಸಿಗದಂತೆ ಆಗಿದೆ. ಇದರಿಂದ ಸಮಯ ಮೀರಿದ ತಕ್ಷಣ ವಿದ್ಯಾರ್ಥಿಗಳು ತಮ್ಮ ಮನೆಗಳಿಗೆ ತೆರಳಿ ಶಾಲಾ ಮತ್ತು ಕಾಲೇಜುಗಳಿಗೆ ಗೈರು ಹಾಜರಾಗುತ್ತಾರೆ.

ಈ ಸಂಧರ್ಭದಲ್ಲಿ ಮಂಜುಳಾ , ಬಿ ಕೆ , ಹುಲಿಗೇಮ್ಮ ಎಮ್ , ಗ್ರಾಮಸ್ಥರಾದ ಮಲ್ಲಪ್ಪ ಮೇಟಿ , ದುರಗಪ್ಪ ಹರಿಜನ, ಮಂಜಪ್ಪ ಪೂಜಾರ ಮತ್ತಿತರರು ಉಪಸ್ಥಿತಿ ಇದ್ದರು.

# ಲೈಂಗಿಕ ಕಿರುಕುಳ ಶೀ-ಬಾಕ್ಸ್ ಬಗ್ಗೆ ಜಾಗೃತಿ ಮೂಡಿಸಿ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 24 : ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013ರ ಕಾಯ್ದೆಯ ನಿಬಂದನೆಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಜಾರಿಗೆ ತರುವುದಕ್ಕೋಸ್ಕರ ಖಿಊಜ ಃಂಥ ಕಂಡಿಣಚಿಟನ್ನು ಪ್ರಾರಂಭಿಸಲಾಗಿರುತ್ತದೆ. ಸದರಿ ಪೋರ್ಟಲ್, ಎಲ್ಲಾ ಸಾರ್ವಜನಿಕ, ಸರಕಾರಿ/ಖಾಸಗಿ, ಸಾರ್ವಜನಿಕ, ಸಂಘಟಿತ ಅಥವಾ ಅಸಂಘಟಿತ ವಲಯಗಳಲ್ಲಿ ಕೆಲಸ ಮಾಡುತ್ತಿರುವ ಪ್ರತಿಯೊಬ್ಬ ಮಹಿಳಾ ಉದ್ಯೋಗಿಯು ತನ್ನ ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳದ ದೂರು ದಾಖಲಿಸಲು ಹಾಗೂ ಅದರ ಸ್ಥಿತಿಯನ್ನು ಪತ್ತೆ ಹಚ್ಚಲು ಮಾರ್ಗವನ್ನು ಒದಗಿಸುತ್ತದೆ. ಈ ಪೋರ್ಟಲ್‌ನ (https://shebox.wcd.gov.in) ಲಿಂಕ್ ಅನ್ನು ಎಲ್ಲಾ ವೆಬ್‌ಸೈಟ್‌ಗಳಲ್ಲಿ ಹೈಲೈಟ್ ಮಾಡಲು ಹಾಗೂ ಜಾಗೃತಿ ಮೂಡಿಸಲು



ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಸೂಚಿಸಿರುತ್ತಾರೆ.

ಈಗಾಗಲೇ ತಿಳಿಸಿರುವಂತೆ, ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013 ಅಧಿನಿಯಮದಡಿಯಲ್ಲಿ, ಬೀದರ ಜಿಲ್ಲೆಯ 10 ಹಾಗೂ 10ಕ್ಕಿಂತ ಹೆಚ್ಚು ಜನ ಕರ್ತವ್ಯ ನಿರ್ವಹಿಸುವ ಎಲ್ಲಾ ಸರಕಾರಿ/ಖಾಸಗಿ, ಸಾರ್ವಜನಿಕ, ಸಂಘಟಿತ ಅಥವಾ ಅಸಂಘಟಿತ ವಲಯಗಳಲ್ಲಿ ರಚಿಸಿರುವ ಆಂತರಿಕ ದೂರು ಸಮಿತಿಯ ವಿವರಗಳನ್ನು SHe Box Portal ನಲ್ಲಿ ಅಪ್ಲೋಡ್ ಮಾಡದೇ ಇದ್ದಲ್ಲಿ, ಗೌರವಾನ್ವಿತ ಸುಪ್ರೀಂ ಕೋರ್ಟ್ ಆದೇಶದಂತೆ, ಕಡ್ಡಾಯವಾಗಿ ಅಪ್‌ಲೋಡ್ ಮಾಡುವಂತೆ ಹಾಗೂ ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳವನ್ನು ಎದುರಿಸುತ್ತಿರುವ ಹೆಚ್ಚು ಮಹಿಳಾ ಉದ್ಯೋಗಿಗಳು ಇದನ್ನು ಬಳಸಲು ಸಾಧ್ಯವಾಗುವಂತೆ ಕ್ರಮ ಕೈಗೊಳ್ಳಲು, ಜಿಲ್ಲೆಯ ಎಲ್ಲಾ ಸರಕಾರಿ, ಸಾರ್ವಜನಿಕ, ಖಾಸಗಿ, ಸಂಘಟಿತ ಅಥವಾ ಅಸಂಘಟಿತ ವಲಯಗಳ ಅಧಿಕಾರಿಗಳಿಗೆ/ಮುಖ್ಯಸ್ಥರಿಗೆ ಸೂಚಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮೈಲೂರ ಬೀದರ ದೂರವಾಣಿ: 9980702545, 8310032095 ಗೆ ಸಂಪರ್ಕಿಸಬಹುದಾಗಿದೆ.

# ಗುಣಮಟ್ಟದ ಕಾಮಗಾರಿ ಸಕಾಲದಲ್ಲಿ ಪೂರ್ಣಗೊಳಿಸಿ : ಕಂದಕೂರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜೂ:24:ಮತಕ್ಷೇತ್ರದ ಅಭಿವೃದ್ಧಿಗಾಗಿ ಸರಕಾರದಿಂದ ಹಲವು ಯೋಜನೆಗಳನ್ನು ತಂದಿದ್ದು, ಅಧಿಕಾರಿಗಳು ಕಾಮಗಾರಿಗಳನ್ನು ಗುಣಮಟ್ಟ ಮತ್ತು ಸಕಾಲದಲ್ಲಿ ಪೂರ್ಣಗೊಳಿಸಬೇಕು ಎಂದು ಶಾಸಕ ಶರಣುಗೌಡ ಕಂದಕೂರ ಅಧಿಕಾರಿಗಳಿಗೆ ಸೂಚಿಸಿದರು.

ಗುರುಮಠಕಲ್ ಪಟ್ಟಣದಲ್ಲಿ ಇಂದು ನಗರಾಭಿವೃದ್ಧಿ ಇಲಾಖೆ ಹಾಗೂ ಯಾದಗಿರಿ ಜಿಲ್ಲಾಡಳಿತ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಬೆಂಗಳೂರು ಮತ್ತು ಗುರುಮಠಕಲ್ ಪುರಸಭೆ ಸಂಯುಕ್ತಾಶ್ರಯದಲ್ಲಿ ಗುರುಮಠಕಲ್ ಪಟ್ಟಣಕ್ಕೆ ಭೀಮಾನದಿ ಮೂಲದಿಂದ ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆಯಡಿಯಲ್ಲಿ ಕುಡಿಯುವ ನೀರು ಸರಬರಾಜು ಯೋಜನೆಯ ಅಂದಾಜು ಮೊತ್ತ 2475 ಲಕ್ಷ ರೂ.ಗಳ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.



ಕುಡಿಯುವ ನೀರಿಗಾಗಿ ಸರಕಾರ ಕೊಟ್ಟಿರುವ 25 ಕೋಟಿ ರೂ.ಗಳು ಸಾಲದು, ಸಂಬಂಧಿಸಿದ ಸಚಿವರಿಗೆ ಮನವರಿಕೆ ಮಾಡಿಸಿದ್ದು, ಅವರು ಇನ್ನೂ 15 ಕೋ.ರೂ ಮಂಜೂರು ಮಾಡುತ್ತೇನೆ ಎಂಬ ಭರವಸೆ ನೀಡಿದ್ದಾರೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಗುರುಮಠಕಲ್ ತಾಲೂಕ ರಚನೆಯಾಗಿದ್ದು, ಜನರಿಗೆ ಅನುಕೂಲ ಕಲ್ಪಿಸಲು ತಾಲೂಕ ಆಢಳಿತ ಕಚೇರಿಗಳಾದ ಉಪನೊಂದಣಿ ಕಚೇರಿ, ಪ್ರಜಾಸೌಧ, ಉನ್ನತದರ್ಜೆಯ ಆಸ್ಪತ್ರೆ, ಬಿಇಓ ಕಚೇರಿ, ಅಗ್ನಿಶಾಮಕ ಡಿಪೋ ಮುಂತಾದ ಕಚೇರಿಗಳ ಸ್ಥಾಪನೆಯಾಗುವಂತೆ ಮಾಡುವ ಕನಸು ಹೊಂದಿರುವದಾಗಿ ಅವರು ತಿಳಿಸಿದರು.

ನಗರದಲ್ಲಿ ಅಪರಾಧ ಪ್ರಮಾಣ ಹೆಚ್ಚಾಗುತ್ತಿದ್ದು, ಅವುಗಳ ನಿಯಂತ್ರಣ-ಕ್ಕೆ ಸಿಸಿ ಕ್ಯಾಮರಗಳನ್ನು ಅಳವಡಿಸಲಾಗಿದೆ. ಪೊಲೀಸ್ ಕ್ವಾಟರ್ ಇರುವ ಸ್ಥಳದಲ್ಲಿ ಪ್ರಜಾ ಸೌಧ ನಿರ್ಮಾಣಕ್ಕಾಗಿ ಮೊದಲನೆ ಹಂತದಲ್ಲಿ 8.65 ಕೋಟಿ ರೂ ಗಳ ಹಣ ಮಂಜೂರು ಆಗಿದ್ದು, ರಾಯಚೂರಿನಲ್ಲಿ ರಾಜ್ಯದ ಮುಖ್ಯಮಂತ್ರಿಗಳು ಚಾಲನೆ ನೀಡಿದ್ದಾರೆ, ಶೀಘ್ರದಲ್ಲಿ ಇಲ್ಲಿ ಕಾಮಗಾರಿ ಆರಂಭವಾಗಲಿದೆ. ನಗರದ ಒಳಗಿರುವ ಪೊಲೀಸ್ ಠಾಣೆಯನ್ನು ನಗರದ ಹೊರಗಿನ ಪ್ರದೇಶದಲ್ಲಿ ಉನ್ನತೀಕರಿಸಲಾಗುವುದು ಎಂದು ಅವರು ಭರವಸೆ ನೀಡಿದರು.

ಪುರಸಭೆ ಅಧ್ಯಕ್ಷೆ ಜಯಶ್ರೀ ಪೋ.ಪಾಟೀಲ್, ಉಪಾಧ್ಯಕ್ಷೆ ರೇಣುಕಾ ಪಡಿಗೆ, ಕಲಬುರಗಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಾರ್ಯಪಾಲಕ ಅಭಿಯಂತರ ನರಸಿಂಹರಡ್ಡಿ ಎನ್, ಯಾದಗಿರಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಸಹಾಯಕ ಕಾರ್ಯಪಾಲಕ ಅಭಿಯಂತರ ಅಶೋಕ ಕುಮಾರ, ಪುರಸಭೆ ಮುಖ್ಯಾಧಿಕಾರಿ ಭಾರತಿ ದಂಡೋತಿ, ಪುರಸಭೆಕಿ.ಅಭಿಯಂತರರು ಅಬ್ದುಲ್ ಅಲೀಮ್, ತಹಸೀಲ್ದಾರ ಶಾಂತಗೌಡ ಬಿರದಾರ, ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಅಮರೇಶ ಪಾಟೀಲ, ಸಿಡಿಪಿಓ ಶರಣಬಸಪ್ಪ, ಪಿಐ ವೀರಣ್ಣ ಹೊಸಮನಿ, ಪಕ್ಷದ ಜಿಲಾಧ್ಯಕ್ಷ ಸುಭಾಷ ಕಟಕಟೆ ಸೇರಿದಂತೆ ಪುರಸಭೆ ಸದಸ್ಯರು ಹಾಗೂ ಕಾರ್ಯಕರ್ತರು ಇದ್ದರು.

# ಗ್ರೇಡ್ 2 ತಹಶೀಲ್ದಾರಗೆ ಮತ್ತೆ ಸೇವೆಗೆ ಆದೇಶಿಸಿದಕ್ಕೆ ಖಂಡನೆ; ನ್ಯಾಯಕ್ಕಾಗಿ ಇಂದು ಧರಣಿ ಸತ್ಯಾಗ್ರಹ

ಚಿಟಗುಪ್ಪ:ಜೂ.24: ತಹಶೀಲ್ ಕಚೇರಿಯ ಗ್ರೇಡ್ 2 ತಹಶೀಲ್ದಾರರ ಹಲ್ಲೆ ಪ್ರಕರಣಕ್ಕೆ ಸಂಬಂದಿಸಿದಂತೆ ಅಮಾನತು ಮಾಡಬೇಕು ಎಂದು ಜಿಲ್ಲಾ ಅಧಿಕಾರಿಗಳಿಗೂ ಹಾಗೂ ಸಚಿವರಿಗೂ ಚಿಟಗುಪ್ಪ ನಾಗರಿಕ ಸಮಿತಿ ಮನವಿ ಪತ್ರ ಸಲ್ಲಿಸಲಾಗಿತ್ತು. ಆದರೆ ಸಚಿವರಾಗಲಿ, ಜಿಲ್ಲಾಧಿಕಾರಿಗಳಾಗಲ್ಲಿ ಯಾವುದೇ ಕ್ರಮ ಕೈಗೊಳ್ಳದೇ ಮತ್ತೆ ಸೇವೆಗೆ ಹಾಜರಾಗುವಂತೆ ಆದೇಶಿಸಿದಕ್ಕೆ ಚಿಟಗುಪ್ಪ ನಾಗರಿಕ ಸಮಿತಿ ಅವರು ಜೂನ್ 25ರಂದು ತಹಶೀಲ್ ಕಚೇರಿಯ ಆವರಣದಲ್ಲಿ ಧರಣಿ ಸತ್ಯಗ್ರಾಹ ಮಾಡುವುದಾಗಿ ತಹಸೀಲ್ದಾರರಿಗೆ ಬರೆದ ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.